ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 54
9–8–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 54

# ಮತಗಳವು: ರಾಗಾ ರಣಕಹಳೆ

**ಬೆಂಗಳೂರು, ಆ. 8–** ಮತಗಳ್ಳತನದ ವಿರುದ್ಧ ಕಾಂಗ್ರೆಸ್ ಪಕ್ಷ ಬೆಂಗಳೂರಿನಲ್ಲಿಂದು ಬೃಹತ್ ಪ್ರತಿಭಟನಾ ರ್‍ಯಾಲಿ ನಡೆಸಿ, ಚುನಾವಣಾ ಅಕ್ರಮದ ವಿರುದ್ಧದ ಹೋರಾಟಕ್ಕೆ ರಣಕಹಳೆ ಮೊಳಗಿಸಿದೆ.

ಲೋಕಸಭಾ ಚುನಾವಣೆಯಲ್ಲಿ ಮತಗಳ್ಳತನಕ್ಕೆ ಸಂಬಂಧಿಸಿದಂತೆ ನಿನ್ನೆಯಷ್ಟೆ ದೆಹಲಿಯಲ್ಲಿ ದಾಖಲೆ, ಸಾಕ್ಷ್ಯಗಳನ್ನು ಬಿಡುಗಡೆ ಮಾಡಿದ್ದ ರಾಹುಲ್‌ಗಾಂಧಿಯವರ ನೇತೃತ್ವದಲ್ಲಿ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಚುನಾವಣಾ ಅಕ್ರಮಗಳ ವಿರುದ್ಧ ಕಾಂಗ್ರೆಸ್ ಹೋರಾಟಕ್ಕೆ ನಾಂದಿ ಹಾಡಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಕಾಂಗ್ರೆಸ್‌ನ ಹಲವು ಪ್ರಮುಖ ಮುಖಂಡರು, ಸಚಿವರುಗಳು, ಶಾಸಕರು, ಸಂಸದರು ಸೇರಿದಂತೆ ಸಾವಿರಾರು ಮಂದಿ ಕಾರ್ಯಕರ್ತರು ಈ ಪ್ರತಿಭಟನಾ ರ್‍ಯಾಲಿಯಲ್ಲಿ ಭಾಗಿಯಾಗಿ ಚುನಾವಣಾ ಅಕ್ರಮದ ವಿರುದ್ಧದ ಹೋರಾಟಕ್ಕೆ ಬಲ ತುಂಬಿದರು.



ನಮ್ಮ ಮತ ನಮ್ಮ ಹಕ್ಕು ನಮ್ಮ ಹೋರಾಟ ಘೋಷಣೆಯಡಿ ಈ ಪ್ರತಿಭಟನಾ ಸಮಾವೇಶ ನಡೆದಿದೆ. ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಮಹದೇವಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸುಮಾರು 1 ಲಕ್ಷ 250 ಮತಗಳನ್ನು ಅಕ್ರಮವಾಗಿ ಸೇರಿಸಲಾಗಿದೆ ಎಂದು ರಾಹುಲ್‌ಗಾಂಧಿ ಆರೋಪ ಮಾಡಿ ದಾಖಲೆಗಳನ್ನು ಬಿಡುಗಡೆಗೊಳಿಸಿದ ಬೆನ್ನಲ್ಲೆ ಬೆಂಗಳೂರಿನಿಂದಲೇ ಕಾಂಗ್ರೆಸ್ ಪಕ್ಷ ಚುನಾವಣಾ ಅಕ್ರಮದ ವಿರುದ್ಧ ಹೋರಾಟವನ್ನು ಆರಂಭಿಸಿದೆ.

**ಚುನಾವಣಾ ಆಯೋಗದ ವಿರುದ್ಧ ಕೆಂಡ :** ಈ ಪ್ರತಿಭಟನಾ ಸಮಾವೇಶದಲ್ಲಿ ಭಾಗಿಯಾಗಿದ್ದ ರಾಹುಲ್‌ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಎಲ್ಲ ನಾಯಕರು ಚುನಾವಣಾ ಆಯೋಗದ ವಿರುದ್ಧ ಕೆಂಡಕಾರಿ, ಪ್ರಧಾನಿ ಮೋದಿಯವರಿಗೆ ಅನುಕೂಲ ಮಾಡಿಕೊಡಲು ಚುನಾವಣಾ ಆಯೋಗ ಅಕ್ರಮ ನಡೆಸಿದೆ ಎಂದು ವಾಗ್ದಾಳಿ ನಡೆಸಿದರು.

ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್‌ಗಾಂಧಿಯವರು ಚುನಾವಣಾ ಅಕ್ರಮಗಳನ್ನು ಯಾವ ರೀತಿ ನಡೆಸಲಾಗಿದೆ ಎಂಬುದನ್ನು ಪ್ರತಿಭಟನಾ ಸಮಾವೇಶದಲ್ಲಿ ಎಳೆಎಳೆಯಾಗಿ ಬಿಡಿಸಿಟ್ಟರು.

ಚುನಾವಣಾ ಅಕ್ರಮದ ವಿರುದ್ಧ ಕಾಂಗ್ರೆಸ್ ಹೋರಾಟ ನಿಲ್ಲದು. ಈ ಹೋರಾಟವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವುದಾಗಿಯೂ ಅವರು ಸಾರಿದರು.

ಚುನಾವಣಾ ಆಯೋಗದ ಲೋಕಸಭಾ ಚುನಾವಣೆಯಲ್ಲಿ ಅಕ್ರಮ ನಡೆಸಿ ಪ್ರಜಾತಂತ್ರ ವ್ಯವಸ್ಥೆಯನ್ನು ಬುಡಮೇಲು ಮಾಡುವ ಪ್ರಯತ್ನ ನಡೆಸಿದೆ. ಇದರ ವಿರುದ್ಧ ಕಾಂಗ್ರೆಸ್ ದೇಶಾದ್ಯಂತ ಹೋರಾಟ ನಡೆಸಲಿದೆ. ಇಂದು ಬೆಂಗಳೂರಿನಿಂದ ಈ ಹೋರಾಟ ಆರಂಭವಾಗಿದೆ ಎಂದು ಅವರು ಹೇಳಿದರು.

## ದಾಖಲೆಗಳಿದ್ದರೆ ಕೋರ್ಟಿಗೆ ಹೋಗಲಿ:ರಾಗಾಗೆ ಶೆಟ್ಟರ್ ತಿರುಗೇಟು

**ನವದೆಹಲಿ,ಅ.8–**ಲೋಕಸಭಾ ಚುನಾವಣೆಯ ಸಮಯದಲ್ಲಿ ಮತಗಟ್ಟೆಗಳಲ್ಲಿ ಅಕ್ರಮ ನಡೆದಿದೆ ಎಂಬ ರಾಹುಲ್ ಗಾಂಧಿ ಅವರ ಆರೋಪಗಳಿಗೆ ಬಿಜೆಪಿ ಸಂಸದ ಜಗದೀಶ್ ಶೆಟ್ಟರ್ ತಿರುಗೇಟು ನೀಡಿದ್ದಾರೆ, ಅವುಗಳಿಗೆ ಯಾವುದೇ ಆಧಾರವಿಲ್ಲ ಎಂದು ಹೇಳಿದ್ದಾರೆ.



ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿಯವರ ಮತಗಟ್ಟೆಗಳಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ್ಧಾರೆ.ರಾಹುಲ್ ಗಾಂಧಿಯವರ ಆರೋಪಗಳಿಗೆ ಯಾವುದೇ ಆಧಾರವಿಲ್ಲ. ಅವರು ಈಗ ಆರೋಪ ಮಾಡುತ್ತಿದ್ದಾರೆ, ಒಂದು ವರ್ಷದ ಹಿಂದೆ ಅವರು ಅದನ್ನು ಏಕೆ ಮಾಡಲಿಲ್ಲ? ಬೆಂಗಳೂರು ಕೇಂದ್ರದ ನಿಮ್ಮ ಕಾಂಗ್ರೆಸ್ ಅಭ್ಯರ್ಥಿ ಅದರ ಬಗ್ಗೆ ಏಕೆ ಕೇಳಲಿಲ್ಲ? ಇಲ್ಲಿಯವರೆಗೆ ಅವರು ಏಕೆ ದೂರು ನೀಡಲಿಲ್ಲ? ಎಂದು ಪ್ರಶ್ನೆಗಳ ಸುರಿಮಳೆಗೈದರು.


ರಾಹುಲ್ ಗಾಂಧಿ, ನಿಮ್ಮ ಬಳಿ ದಾಖಲೆಗಳಿದ್ದರೆ, ನ್ಯಾಯಾಲಯಕ್ಕೆ ಹೋಗಿ, ಚುನಾವಣಾ ಆಯೋಗಕ್ಕೆ ದಾಖಲೆಗಳನ್ನು ಸಲ್ಲಿಸಿ ಮತ್ತು ದೂರು ನೀಡಿ. ಅಲ್ಲದೆ, ಚುನಾವಣಾ ಆಯೋಗವನ್ನು ಆರೋಪಿಸುವುದು ಸರಿಯಲ್ಲ ಎಂದಿದ್ದಾರೆ.ಅವರು ಎನ್.ಡಿ.ಎ ಮೈತ್ರಿಕೂಟದ ಅಡಿಯಲ್ಲಿ ಪ್ರಧಾನಿಯಾದರು. ಸರ್ಕಾರ ಬಂದಿದೆ, ಅವರು ಈಗ ಹೇಗೆ ಆರೋಪಗಳನ್ನು ಮಾಡಬಾರದು ಪ್ರಧಾನಿ ಮೋದಿಯನ್ನು ಟೀಕಿಸುವುದು ಮತ್ತು ಯಾವಾಗಲೂ ಅಮೆರಿಕ, ಟ್ರಂಪ್ ಮತ್ತು ಚೀನಾ ಪರವಾಗಿ ಮಾತನಾಡುವುದು ರಾಹುಲ್ ಗಾಂಧಿಯವರ ಕೆಲಸವಾಗಿ ಮಾರ್ಪಟ್ಟಿದೆ.

ಚುನಾವಣೆ ಅಕ್ರಮವಾಗಿದ್ದರೆ, ಮೊದಲು ನ್ಯಾಯಾಲಯಕ್ಕೆ ಹೋಗಿ ಅಥವಾ ಚುನಾವಣಾ ಆಯೋಗಕ್ಕೆ ದೂರು ನೀಡಿ. ದೇಶದ ಸ್ವಾಯತ್ತ ಸಂಸ್ಥೆಯ ಮೇಲೆ ಆರೋಪ ಮಾಡುವುದು ತಪ್ಪು ಎಂದು ಅವರು ಹೇಳಿದ್ದಾರೆ. ಧರ್ಮಸ್ಥಳ ವಿಷಯದ ಕುರಿತು ಮಾತನಾಡಿದ ಅವರು, ಸರ್ಕಾರದ ಎಸ್‌ಐಟಿ ಧರ್ಮಸ್ಥಳ ವಿಷಯದ ಬಗ್ಗೆ ತನಿಖೆ ನಡೆಸುತ್ತಿದೆ ಎಂದು ಹೇಳಿದರು. ಹಾಗೆ ಮಾಡುವುದರಲ್ಲಿ ಯಾವುದೇ ಆಕ್ಷೇಪವಿಲ್ಲ.

ಅವರು ಅನಾಮಧೇಯ ದೂರು ದಾಖಲಿಸಿದ್ದಾರೆ, ಯಾವುದೇ ಸಾಕ್ಷಿ ಇದೆಯೋ ಇಲ್ಲವೋ ನನಗೆ ತಿಳಿದಿಲ್ಲ. ಆದಾಗ್ಯೂ, ಸರ್ಕಾರ ಎಸ್‌ಐಟಿ ತನಿಖೆಗೆ ಆದೇಶಿಸಿದೆ. ಅವರು ತನಿಖೆ ನಡೆಸಲಿ, ಆದರೆ ಹಿಂದೂಗಳ ಪವಿತ್ರ ದೇವಾಲಯವಾದ ಮಂಜುನಾಥ ಸ್ವಾಮಿಗೆ ಯಾವುದೇ ರೀತಿಯಲ್ಲಿ ಹಾನಿಯಾಗಬಾರದು. ಕ್ಷೇತ್ರಕ್ಕೆ ಅಪಚಾರ ಮಾಡಬಾರದು ಮತ್ತು ಧರ್ಮಸ್ಥಳದ ಹೆಸರಿಗೆ ಕಳಂಕ ತರಬಾರದು ಎಂದು ಅವರು ಹೇಳಿದ್ದಾರೆ.

## ವೆಬ್ ಸಿರೀಸ್ ಪ್ರಭಾವ, ಬಾಲಕ ಆತ್ಮಹತ್ಯೆ

**ಬೆಂಗಳೂರು,ಆ.8–**ಮೂರು ದಿನಗಳ ಹಿಂದೆ ಚೆನ್ನಮ್ಮ ಕೆರೆ ಅಚ್ಚುಕಟ್ಟು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 14 ವರ್ಷದ ಬಾಲಕ ಗಂಧಾರ್ ಡೆತ್ ನೋಟ್ ಬರೆದು ಆತ್ಮಹತ್ಯೆ ಮಾಡಿಕೊಂಡಿದ್ದ ಮನೆಯಲ್ಲಿ ಯಾವುದೇ ಸಮಸ್ಯೆ ಇರಲಿಲ್ಲ, ಅಮ್ಮ ಅಮ್ಮ ಅಣ್ಣ ಎಲ್ಲರ ಜೊತೆಗೂ ಚೆನ್ನಾಗಿಯೇ ಇದ್ದ ಆ ಬಾಲಕ ಏಕಾಏಕಿ ನೇಣಿಗೆ ಶರಣಾಗಿದ್ದು ಎಲ್ಲರಿಗೂ ಶಾಕ್ ಆಗಿತ್ತು. ಈ ಪ್ರಕರಣದ ತನಿಖೆಗೆ ಇಳಿದಾಗ ಹಲವರು ಶಾಕಿಂಗ್ ವಿಚಾರಗಳು ಮುನ್ನೆಲೆಗೆ ಬಂದಿವೆ.



ರಾತ್ರಿ ಎಲ್ಲರ ಜೊತೆಗೆ ಊಟ ಮಾಡಿ ತನ್ನ ಪ್ರೀತಿಯ ನಾಯಿ ರಾಕಿ ಜೊತೆಗೆ ಮಲಗಿದ್ದ ಗಂಧಾರ್ ಬೆಳಗಿನ ವೇಳೆ ತನ್ನ ಕೊಠಡಿಯಲ್ಲಿ ನೇಣಿಗೆ ಶರಣಾಗಿದ್ದ. ನೇಣಿಗೆ ಶರಣಾಗುವ ಮೊದಲು ಒಂದು ಡೆತ್ ನೋಟ್ ಬರೆದಿದ್ದ. ಅದರಲ್ಲಿ ತಂದೆ ತಾಯಿಯನ್ನು ಉದ್ದೇಶಿಸಿ ನೀವು ನನ್ನನ್ನು ಹದಿನಾಲ್ಕು ವರ್ಷ ಚೆನ್ನಾಗಿಯೇ ಸಾಕಿದ್ದೀರಿ.

ನಿಮ್ಮ ಜೊತೆಗೆ ನಾನು ತುಂಬಾ ಖುಷಿಯಾಗಿದ್ದೆ. ಆದರೆ ನಾನು ಹೋಗುವ ಸಮಯ ಬಂದಿದೆ. ನೀವು ಈ ಪತ್ರ ಓದುವ ವೇಳೆಗೆ ನಾನು ಸ್ವರ್ಗದಲ್ಲಿ ಇರುತ್ತೇನೆ ಎಂದು ಡೆತ್ ನೋಟ್ ಬರೆದಿದ್ದ.

ಈ ಡೆತ್ ನೋಟ್ ನೋಡಿದ ಎಲ್ಲರಿಗೂ ಶಾಕ್ ಆಗಿತ್ತು. ಅದರಲ್ಲಿ ಯಾವುದೇ ನೆಗಟಿವ್ ವಿಚಾರಗಳಿಲ್ಲ, ಯಾರ ಮೇಲೂ ಆರೋಪಗಳಿಲ್ಲ. ಯಾವುದೇ ಸಮಸ್ಯೆ ಕೂಡ ಇಲ್ಲ. ಹೀಗಿದ್ದರೂ ಈ ಬಾಲಕ ಇಷ್ಟು ಚಿಕ್ಕವಯಸ್ಸಿಗೆ ಏಕೆ ಇಷ್ಟು ದೊಡ್ಡ ನಿರ್ಧಾರ ತೆಗೆದುಕೊಂಡ ಎಂಬ ಪ್ರಶ್ನೆ ಎದ್ದಿತ್ತು.

### ಸಂಚಾರಿ ನಿಯಮಗಳ ಪಾಲನೆ ಕಡ್ಡಾಯ, ಏಕಮುಕ ರಸ್ತೆ ವಿರುದ್ಧ ದಿಕ್ಕಿನಲ್ಲಿ ಸಂಚಾರ ಅಪಘಾತಗಳಿಗೆ ಆಹ್ವಾನ

## ಅಪ್ರಾಪ್ತ ವಯಸ್ಕರಿಂದ ವಾಹನ ಚಾಲನೆ ಮಾಲಿಕರಿಗೆ ಭಾರಿ ದಂಡ; ಜಿ.ಎಂ.ಗಂಗಾಧರಸ್ವಾಮಿ

**ದಾವಣಗೆರೆ:** ರಸ್ತೆ ಅಪಘಾತಗಳು ಸಂಭವಿಸಬಾರದು, ಇದಕ್ಕಾಗಿ ರಸ್ತೆ ಸಂಚಾರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಆಕಸ್ಮಿಕ ಅಪಘಾತಗಳಿಂದ ಜೀವಹಾನಿ ಜೊತೆಗೆ ಜೀವನಪೂರ್ತಿ ಗಾಯಾಳುಗಳಾಗಿ ಕಾಲ ಕಳೆಯಬೇಕಾಗುತ್ತದೆ. ಆದರೆ ಕ್ಷಣ ಮಾತ್ರದ ಅಪಘಾತಗಳನ್ನು ತಪ್ಪಿಸಲು ಎಲ್ಲರೂ ಸಂಚಾರಿ ನಿಯಮಗಳನ್ನು ಪಾಲನೆ ಮಾಡಬೇಕೆಂದು ಜಿಲ್ಲಾಧಿಕಾರಿ ಹಾಗೂ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರಾದ ಗಂಗಾಧರಸ್ವಾಮಿ ಜಿ.ಎಂ ತಿಳಿಸಿದ್ದಾರೆ.

ಅನೇಕ ರಸ್ತೆ ಅಪಘಾತಗಳು ಕುಟುಂಬದ ಆಸರೆಯೇ ಇಲ್ಲದಂತಹ ಸ್ಥಿತಿಗಳಿಗೆ ತಳ್ಳುತ್ತವೆ. ಎಲ್ಲರ ಜೀವಗಳು ಅಮೂಲ್ಯವಾದದ್ದು ಬೇರೊಬ್ಬರ ಜೀವ ಉಳಿಸಲು ವಾಹನ ಸಾವರ ಸೇರಿದಂತೆ ಪಾದಚಾರಿಗಳು ಸಹ ರಸ್ತೆ ಸಂಚಾರ ನಿಯಮಗಳನ್ನು ಪಾಲನೆ ಮಾಡಬೇಕಾಗುತ್ತದೆ. ಆದರೆ ದಾವಣಗೆರೆ ನಗರದ ಅನೇಕ ವೃತ್ತ, ರಸ್ತೆಗಳಲ್ಲಿ ಸಂಚಾರಿ ನಿಯಮಗಳನ್ನು ಉಲ್ಲಂಘನೆ ಮಾಡಿ ಸಿಗ್ನಲ್ ಜಂಪ್ ಮಾಡುವುದು, ಏಕಮುಕ ಸಂಚಾರದ ರಸ್ತೆಯಲ್ಲಿ ವಿರುದ್ಧ ದಿಕ್ಕಿನಲ್ಲಿ ಸಂಚರಿಸುವುದು ಸರ್ವೆ ಸಾಮಾನ್ಯವಾಗಿದೆ. ಜೊತೆಗೆ ಶಾಲಾ, ಕಾಲೇಜು ವಿದ್ಯಾರ್ಥಿಗಳು ದ್ವಿ ಚಕ್ರದಲ್ಲಿ ನೊಂದಣಿ ಸಂಖ್ಯೆಯ ಫಲಕವನ್ನು ತೆಗೆದಿಟ್ಟು ವಾಹನ ಚಾಲನೆ ಮಾಡುವುದು, ತ್ರಿಬಲ್ ರೈಡಿಂಗ್, ಹೆಲ್ಮೆಟ್ ಧರಿಸದೇ ಇರುವುದನ್ನು ಗಮನಿಸಲಾಗಿದೆ. ಜೊತೆಗೆ ಅಪ್ರಾಪ್ತ ಮಕ್ಕಳು ವಾಹನವನ್ನು ಚಾಲನೆ ಮಾಡುವುದು ಕಂಡು ಬಂದಿರುತ್ತದೆ.

ಅಪ್ರಾಪ್ತರಿಂದ ವಾಹನ ಚಾಲನೆ; ದಾವಣಗೆರೆ ನಗರದಲ್ಲಿ ಆಗಸ್ಟ್ 8 ರಂದು ವಿವಿಧ ರಸ್ತೆಗಳಲ್ಲಿ ಅಪ್ರಾಪ್ತರು ತ್ರಿಬಲ್ ರೈಡಿಂಗ್‌ನಲ್ಲಿ ವಾಹನ ಚಾಲನೆ ಮಾಡುವುದನ್ನು ಜಿಲ್ಲಾಧಿಕಾರಿಗಳು ಗಮನಿಸಿ ಸ್ಥಳದಲ್ಲಿಯೇ ವಾಹನಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲು ಸಂಚಾರಿ ಪೊಲೀಸ್ ಠಾಣೆಗೆ ಸೂಚನೆ ನೀಡಿದರು. ಅಪ್ರಾಪ್ತ ವಯಸ್ಕರು ವಾಹನ ಚಾಲನೆ ಮಾಡಿದಲ್ಲಿ ವಾಹನ ನೀಡಿದ ಮಾಲಿಕರಿಗೆ ರೂ.25000 ಗಳ ವರೆಗೆ ದಂಡದ ಜೊತೆಗೆ ಜೈಲು ಶಿಕ್ಷೆಯನ್ನು ನ್ಯಾಯಾಲಯ ವಿಧಿಸಬಹುದು. ವಾಹನ ಮಾಲಿಕರೆ ತಮ್ಮ ಮಕ್ಕಳಿಗೆ ವಾಹನ ನೀಡುವುದಕ್ಕಿಂತ ಮೊದಲು ಯೋಚಿಸಿ. ವಿರುದ್ಧ ದಿಕ್ಕಿನಲ್ಲಿನ ಸಾಗುವ ಸವಾರರು; ವಿವಿಧ ವೃತ್ತಗಳಲ್ಲಿ ಸಿಗ್ನಲ್ ಅಳವಡಿಸಲಾಗಿದ್ದರೂ ಕೆಲವರು ಸಿಗ್ನಲ್ ಜಂಪ್ ಮಾಡುವುದು ಮತ್ತು ಸಿಗ್ನಲ್‌ನಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಲಾಯಿಸಿಕೊಂಡು ಹೋಗುತ್ತಾರೆ. ಆದರೆ ಸಿಗ್ನಲ್ ಬಿದ್ದ ತಕ್ಷಣ ಸಂಚರಿಸುವ ವಾಹನ ಸವಾರರು ಹೆಚ್ಚಿನ ವೇಗದಲ್ಲಿಯೇ ಇರುತ್ತಾರೆ. ಇಂತಹ ಸಂದರ್ಭದಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಸಂಚರಿಸಿದಲ್ಲಿ ವೇಗವಾಗಿ ಸಂಚರಿಸುವ ವಾಹನಗಳಿಗೆ ಅಡ್ಡಲಾಗಿ ಬರುವುದರಿಂದ ಅನೇಕ ಅಪಘಾತಗಳು ಸಂಭವಿಸಿ ಮಾಡದ ತಪ್ಪಿಗೆ ಶಿಕ್ಷೆ ಅನುಭವಿಸುವಂತಾಗಿದೆ.



## ‘ಲಿಂಗಾಯತ’ ಎಂದೇ ದಾಖಲಿಸಿ

### ಬಸವ ಸಂಸ್ಕೃತಿ ಅಭಿಯಾನ ಪೂರ್ವಭಾವಿ ಸಭೆಯಲ್ಲಿ ಪಂಡಿತಾರಾಧ್ಯ ಶ್ರೀ



**ದಾವಣಗೆರೆ:** ಜನಗಣತಿ ಸಂದರ್ಭದಲ್ಲಿ ಧರ್ಮದ ಕಾಲಂನಲ್ಲಿ ‘ಲಿಂಗಾಯತ’ ಎಂದೂ, ಜಾತಿಯ ಕಾಲಂನಲ್ಲಿ ಅವರವರ ಉಪ ಜಾತಿಗಳನ್ನು ದಾಖಲಿಸಬೇಕೆಂದು ಸಾಣೇಹಳ್ಳಿ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಕರೆ ನೀಡಿದರು.

ನಗರದ ಶಿವಯೋಗಿ ಮಂದಿರದ ಸಭಾಂಗಣದಲ್ಲಿ ನಡೆದ ಬಸವ ಸಂಸ್ಕೃತಿ ಅಭಿಯಾನ 6ನೇ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ವೀರಶೈವ–ಲಿಂಗಾಯತ ಅಥವಾ ಲಿಂಗಾ ಯತ ಎಂದು ಬರೆಸಬೇಕೆ ಎಂಬ ಗೊಂದಲಗಳಿದ್ದು, ಸರಿಯಾದ ನಿರ್ಣಯದೊಂದಿಗೆ ಗೊಂದಲಗಳ ನಿವಾರಣೆ ಮಾಡಿಕೊಂಡು, ಸಮುದಾಯಕ್ಕೆ ಸರಿಯಾದ ಮಾಹಿತಿ ನೀಡಬೇಕಾಗಿದೆ ಎಂದರು.

ಪಂಚಪೀಠಾಧೀಶ್ವರರಿಗೂ ಆಹ್ವಾನ: ಬೆಂಗಳೂರಿನ ಅರಮನೆ ಮೈದಾನದಲ್ಲಿ ಅ.1 ರಂದು ನಡೆಯುವ ‘ಬಸವ ಸಂಸ್ಕೃತಿ ಅಭಿಯಾನ’ದ ಸಮಾರೋಪ ಸಮಾರಂಭಕ್ಕೆ ಬರಲು ಒಪ್ಪಿದರೆ ಪಂಚಪೀಠಾಧೀಶ್ವರರಿಗೂ ಆಹ್ವಾನ ನೀಡುತ್ತೇವೆ ಮತ್ತು ನಾವೇ ಮುಕ್ತವಾಗಿ ಸ್ವಾಗತಿಸುತ್ತೇವೆ. ಎಲ್ಲಾ ಮಠಾಧೀಶರು ಒಂದಾಗಿ ಸಮಾಜಕ್ಕೆ ಒಳಿತು ಮಾಡಬೇಕಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಪಂಚಪೀಠಗಳ ಸ್ವಾಮೀಜಿಗಳಲ್ಲಿ ಉತ್ಸವದ ಉತ್ಸಾಹ ಕಡಿಮೆಯಾಗಿ ವೈಚಾರಿಕ, ವೈಜ್ಞಾನಿಕ ಮನೋಭಾವನೆ ಹೆಚ್ಚಿನ ಮಟ್ಟದಲ್ಲಿ ಮೂಡಿದೆ. ಯಾರ ಬಗ್ಗೆಯೂ ನಮ್ಮ ವಿರೋಧವಿಲ್ಲ. ಸೋತು ಹೋದಲ್ಲಿ ಗೆಲುವು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಬಸವ ಪರಂಪರೆ ಪುರಾಣ ಪರಂಪರೆಯಲ್ಲ. ಅದು ಐತಿಹಾಸಿಕ ಪರಂಪರೆಯಾಗಿದೆ. ವಚನಗಳ ಬಗ್ಗೆ ಜಾಗೃತಿ ಮೂಡಿಸಬೇಕಾಗಿದೆ. ತತ್ವಗಳೇ ಮುಖ್ಯ ಹೊರತು, ವ್ಯಕ್ತಿ ಮುಖ್ಯವಲ್ಲ. ಸಮಾಜದಲ್ಲಿ ಸಮಾನತೆ ಕಾಪಾಡುವ ಹೊಣೆಗಾರಿಕೆ ಇದೆ. ಅಭಿಯಾನದ ಮೂಲಕ ಹೊಸ ಸ್ವರೂಪ ಕೊಡಲಾಗುವುದು. ಎಲ್ಲರೂ ಬಸವ ತತ್ವಗಳನ್ನು ಮೈಗೂಡಿಸಿಕೊಳ್ಳಬೇಕಾಗಿದೆ ಎಂದು ಹಿತ ನುಡಿದರು.

ಸೆ.1 ರಿಂದ ಅ.1 ವರೆಗೆ ‘ಬಸವ ಸಂಸ್ಕೃತಿ ಅಭಿಯಾನ’: ಕರ್ನಾಟಕದ ಪ್ರತಿ ಜಿಲ್ಲೆಯಲ್ಲೂ ಸೆ. 1 ರಿಂದ ಅ. 1 ರವರೆಗೆ ವಿಶಿಷ್ಟ, ವಿನೂತನವಾದ ‘ಬಸವ ಸಂಸ್ಕೃತಿ ಅಭಿಯಾನ’ ಹಮ್ಮಿಕೊಳ್ಳಲಾಗಿದೆ ಎಂದು ಸಾಣೇಹಳ್ಳಿ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಸೆ. 1 ರಂದು ಬಸವನ ಬಾಗೇವಾಡಿಯಿಂದ ಅಭಿಯಾನಕ್ಕೆ ಚಾಲನೆ ದೊರೆಯಲಿದ್ದು, ಕ್ರಮವಾಗಿ ಕಲ್ಬುರ್ಗಿ, ಬೀದರ್, ಯಾದಗಿರಿ, ರಾಯಚೂರು, ಬಳ್ಳಾರಿ, ವಿಜಯನಗರ, ಕೊಪ್ಪಳ, ಗದಗ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಕಾರವಾರ, ಹಾವೇರಿ, ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗ, ಉಡುಪಿ, ಮಂಗಳೂರು, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರು, ಚಾಮರಾಜನಗರ, ಮಂಡ್ಯ, ರಾಮನಗರ, ತುಮಕೂರು, ಚಿಕ್ಕಮಗಳೂರು, ಕೋಲಾರ, ಬೆಂಗಳೂರು ಗ್ರಾಮಾಂತರ, ನಂತರ ಅ.1 ರಂದು ಬೆಂಗಳೂರು ನಗರದ ಅರಮನೆ ಮೈದಾನದಲ್ಲಿ ‘ಬಸವ ಸಂಸ್ಕೃತಿ ಅಭಿಯಾನ’ ಸಮಾರೋಪಗೊಳ್ಳಲಿದೆ ಎಂದರು.

ಅಭಿಯಾನ ಕಾರ್ಯಕ್ರಮದಲ್ಲಿ ಬೆಳಿಗ್ಗೆ 11 ಕ್ಕೆ ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಜೊತೆ ವಚನ ಸಂವಾದ, ಸಂಜೆ 4.30 ರಿಂದ 6 ರವರೆಗೆ ಆಯಾ ನಗರಗಳ ಪ್ರಮುಖ ಬೀದಿಗಳಲ್ಲಿ ಪಾದಯಾತ್ರೆ, ಸಂಜೆ 6 ಕ್ಕೆ ಸಾರ್ವಜನಿಕ ಸಮಾರಂಭ ಏರ್ಪಡಾಗಿರುತ್ತದೆ. ವಚನ ಸಂಗೀತ (20 ನಿಮಿಷ), ಒಬ್ಬ ಸ್ವಾಮೀಜಿ, ಒಬ್ಬ ಉಪನ್ಯಾಸಕರ ನುಡಿಗಳು, ಸಾನ್ನಿಧ್ಯ ವಹಿಸಿದವರಿಂದ ಆಶೀರ್ವಚನ ( ತಲಾ 20 ನಿಮಿಷ), ರಾತ್ರಿ 8.30 ಕ್ಕೆ ‘ಜಂಗಮದೆಡೆಗೆ’ ನಾಟಕ ಪ್ರದರ್ಶನ, ಪ್ರಸಾದ ವ್ಯವಸ್ಥೆ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಹೂವಿನ ಹಾರ, ಶಾಲು ಹಾಕುವ ಬದಲು ಪುಸ್ತಕ, ಟವೆಲ್, ವಿಭೂತಿ, ಹಣ್ಣುಗಳನ್ನು ಅತಿಥಿಗಳಿಗೆ ನೀಡಲಾಗುವುದು ಎಂದು ಹೇಳಿದರು.

ಆಯಾ ಜಿಲ್ಲೆಗಳಲ್ಲಿ ‘ ಬಸವ ಸಂಸ್ಕೃತಿ ಅಭಿಯಾನ’ದಲ್ಲಿ ಜಾನಪದ ಕಲಾ ತಂಡಗಳು, ವಿದ್ಯಾರ್ಥಿಗಳು, ಬಸವ ಭಕ್ತರು ಪಾಲ್ಗೊಳ್ಳುವಂತೆ ನೋಡಿಕೊಳ್ಳುವುದು ಆಯೋಜಕರ ಜವಾಬ್ದಾರಿಯಾಗಿದೆ ಎಂದರು.

ಸಮ ಸಮಾಜ ನಿರ್ಮಾಣ, ವ್ಯಸನಮುಕ್ತ ಸಮಾಜ ನಿರ್ಮಾಣ, ಅಂಧಶ್ರದ್ಧೆ ಅಳಿಸಿ, ಸುಜ್ಞಾನ ಬೆಳೆಸುವುದು, ಸದೃಢ ಸಮಾಜ ಕಟ್ಟುವುದು, ಮಕ್ಕಳಲ್ಲಿ ಆಧ್ಯಾತ್ಮದ ಅರಿವು ಮೂಡಿಸುವುದು, ಮಹಿಳೆಯರ ಘನತೆ ಕಾಪಾಡುವುದು, ವ್ಯಕ್ತಿತ್ವ ವಿಕಸನ ಇತ್ಯಾದಿಗಳು ಅಭಿಯಾನದ ಆಶಯಗಳಾಗಿವೆ ಎಂದು ತಿಳಿಸಿದರು.

ಬಸವ ಸಂಸ್ಕೃತಿ ಅಭಿಯಾನದ ಅಂಗವಾಗಿ ನಡೆಯುವ ಪಾದಯಾತ್ರೆಯಲ್ಲಿ ಧ್ವಜಗಳನ್ನು ಹಿಡಿದು, ವಚನಗಳ ಕಟ್ಟುಗಳನ್ನು ತಲೆ ಮೇಲೆ ಹೊತ್ತು ಮೆರವಣಿಗೆಯಲ್ಲಿ ಸಾಗುವುದು. ಫ್ಲೆಕ್ಸ್, ಬ್ಯಾನರ್‌ಗಳಲ್ಲಿ ಭಾವಚಿತ್ರಗಳ ಬದಲು ಆಯ್ದ ವಚನಗಳು ಇರುವಂತೆ ನೋಡಿಕೊಳ್ಳುವುದು. ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಇರುವಂತೆ ನೋಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಈಗಾಗಲೇ ಎಲ್ಲಾ ಜಿಲ್ಲೆಗಳಲ್ಲೂ ಬಸವ ಸಂಸ್ಕೃತಿ ಅಭಿಯಾನದ ಸಿದ್ಧತೆಗಳು ಭರದಿಂದ ಸಾಗಿದ್ದು, ಆಯಾ ಜಿಲ್ಲೆಗಳ ರಾಜಕಾರಣಿಗಳು, ಉದ್ಯಮಿಗಳು, ಬಸವ ಭಕ್ತರಿಂದ ದೇಣಿಗೆ ಸಂಗ್ರಹಿಸಿ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತದೆ. ಹೆಚ್ಚಾಗಿ ಆಯಾ ಜಿಲ್ಲೆಗಳ ಮಠಾಧೀಶರು ಕಾರ್ಯಕ್ರಮದ ನಿರ್ವಹಣೆ ಜವಾಬ್ದಾರಿಯನ್ನು ವಹಿಸಿಕೊಂಡಿದ್ದಾರೆ ಎಂದರು.

## ಅಂದ್ರದಲ್ಲಿ ಜೋಡಿ ಕೊಲೆ: ಆರೋಪಿಗಳ ಬಂಧನ

**ಬೆಂಗಳೂರು :** ರಾಜ್ಯವನ್ನೇ ಬೆಚ್ಚಿಬೀಳಿಸಿದ್ದ ಜೋಡಿ ಕೊಲೆ ಪ್ರಕರಣ ಬೇಧಿಸಲಾಗಿದೆ.ಬಿಜೆಪಿ ಮುಖಂಡ ಹಾಗೂ ರಿಯಲ್ ಎಸ್ಟೇಟ್ ಉದ್ಯಮಿ ವೀರಸ್ವಾಮಿ ರೆಡ್ಡಿ ಮತ್ತು ಅವರ ಪುತ್ರ ಪ್ರಶಾಂತ್ ರೆಡ್ಡಿ ಅವರ ಜೋಡಿ ಕೊಲೆ ಪ್ರಕರಣದ ಸಂಬಂಧ, ಪ್ರಮುಖ ಆರೋಪಿ ಸೇರಿ 6 ಮಂದಿಯ ಗ್ಯಾಂಗನ್ನು ಆಂಧ್ರಪ್ರದೇಶದ ನರಸಮ್‌ಪೇಟೆ ಪೊಲೀಸರು ಬಂಧಿಸಿದ್ದಾರೆ.

ಈ ಜೋಡಿ ಕೊಲೆಗೆ ಬರೋಬ್ಬರಿ 14 ಕೋಟಿ ರೂಪಾಯಿ ಮೌಲ್ಯದ ಆಸ್ತಿ ವಿವಾದವೇ ಪ್ರಮುಖ ಕಾರಣ ಎಂದು ಪತ್ತೆಯಾಗಿದೆ.

ಪ್ರಕರಣದ ಪ್ರಮುಖ ಆರೋಪಿ, ಕೊಲೆಯಾದ ವೀರಸ್ವಾಮಿ ರೆಡ್ಡಿ ಅವರ ಮಾಜಿ ಉದ್ಯಮ ಪಾಲುದಾರ ಮಾಧವರೆಡ್ಡಿ ಎಂದು ಗುರುತಿಸಲಾಗಿದೆ. ಇನ್ನು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಧವರೆಡ್ಡಿ,ಅನಿಲ್ ರೆಡ್ಡಿ, ನಾಗಿರೆಡ್ಡಿ, ಚಿನ್ನಾರೆಡ್ಡಿ ಅಲಿಯಾಸ್ ಇಂದ್ರಸೇನಾ ರೆಡ್ಡಿ, ಗೋಪಿ ರೆಡ್ಡಿ ಮತ್ತು ರಘುರಾಮ್ ರೆಡ್ಡಿ ಎಂಬುವರನ್ನು ಬಂಧಿಸಲಾಗಿದೆ

ಕೊಲೆ ಆರೋಪಿ ಮಾಧವರೆಡ್ಡಿ ಹಾಗೂ ವೀರಸ್ವಾಮಿ ರೆಡ್ಡಿ ಇಬ್ಬರೂ ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ಪಾಲುದಾರರಾಗಿದ್ದರು.

ಬೆಂಗಳೂರಿನ 14 ಕೋಟಿ ರೂ ಮೌಲ್ಯದ ಆಸ್ತಿ ವಿಚಾರದಲ್ಲಿ ಇಬ್ಬರ ನಡುವೆ ತೀವ್ರ ವೈಷಮ್ಯ ಬೆಳೆದಿತ್ತು. ವೀರಸ್ವಾಮಿ ತನಗೆ ಹಣಕಾಸಿನ ವಿಚಾರದಲ್ಲಿ ವಂಚನೆ ಮಾಡಿದ್ದಾನೆ ಎಂಬುದು ಮಾಧವರೆಡ್ಡಿಯ ಪ್ರಬಲ ಆರೋಪವಾಗಿತ್ತು. ಇದೇ ದ್ವೇಷದ ಹಿನ್ನೆಲೆಯಲ್ಲಿ, ತನ್ನ ಮಾಜಿ ಪಾಲುದಾರನನ್ನೇ ಮುಗಿಸಲು ಮಾಧವರೆಡ್ಡಿ ವ್ಯವಸ್ಥಿತವಾಗಿ ಸಂಚು ರೂಪಿಸಿದ್ದನು.

ಅದಕ್ಕೆ ತಕ್ಕಂತೆ ರೌಡಿಗಳ ಗ್ಯಾಂಗ್ ಕಟ್ಟಿಕೊಂಡು ಕೊಲೆ ಮಾಡುವುದಕ್ಕೆ ಎಲ್ಲವನ್ನೂ ಯೋಜನೆ ಮಾಡಿದ್ದನು.ಮಾಧವರೆಡ್ಡಿ ಮತ್ತು ಆತನ ಗ್ಯಾಂಗ್, ತಂದೆ–ಮಗನನ್ನು ಹತ್ಯೆ ಮಾಡಲು ವ್ಯವಸ್ಥಿತ ಸಂಚು ರೂಪಿಸಿತ್ತು.

## ಹಿಂದೂ ಸಂಪ್ರದಾಯದಂತೆ ಕೆರೆ ಕೋಡಿಬಿದ್ದಾಗ ಗಂಗಾಪೂಜೆ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು–**ಹಿಂದೂ ಸಂಪ್ರದಾಯದಂತೆ ರೈತರ ಜೀವನಾಡಿಯಾಗಿರುವ ಕೆರೆ ಕೋಡಿಬಿದ್ದಾಗ ಗಂಗಾಪೂಜೆ ನೆರವೇರಿಸುವುದು ವಾಡಿಕೆಯಾಗಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಭಿಪ್ರಾಯಿಸಿದರು.

ಅವರು ಇಂದು ಲಕ್ಯಾ ಗ್ರಾ.ಪಂ ವ್ಯಾಪ್ತಿಯ ಮಾದರಸನ ಕೆರೆಗೆ ಬಾಗಿನ ಸಮರ್ಪಣೆ ಮಾಡಿ ಮಾತನಾಡಿದರು.

ಕೆರೆಗಳು ಕೋಡಿ ಬೀಳುವುದರಿಂದ ರೈತರು ಉತ್ತಮ ಬೆಳೆ ಬೆಳೆಯುವ ಮೂಲಕ ಅವರ ಬದುಕು ಹಸನಾಗಿ ಆರ್ಥಿಕ ಸದೃಢರಾಗುತ್ತಾರೆಂದು ಹೇಳಿದರು.


ಮಾದರಸನ ಕೆರೆ ತುಂಬಿದ್ದು, ಸಧ್ಯದಲ್ಲೇ ದಾಸರಹಳ್ಳಿ ಕೆರೆ ತುಂಬುವ ಹಂತಕ್ಕೆ ಬಂದಿದೆ. ಈ ಕೆರೆಗಳು ಮಳೆಯಿಂದ ತುಂಬಿರುವುದಲ್ಲ, ಹಿಂದಿನ ಶಾಸಕರಾಗಿದ್ದ ಸಿ.ಟಿ ರವಿಯವರ ಅಪಾರ ಸೇವೆ ನಮ್ಮ ಅಳಿಲು ಸೇವೆ ಕಾರಣ ಎಂದರು.

ಹಿರೇಮಗಳೂರು ಕೆರೆ ಮತ್ತು ಬೈರಾಪುರ ಪಿಕಪ್‌ನಿಂದ ನೀರಾವರಿ ಯೋಜನೆಗಳನ್ನು ಕೈಗೊಂಡರೆ ಈ ಭಾಗದ ಕೆರೆ ತುಂಬಿಸಲು ಯಶಸ್ವಿಯಾಗುವುದಾಗಿ ಮನಗಂಡಿದ್ದು, ಈ ವಿಚಾರದಲ್ಲಿ ರಾಜಕೀಯ ಬೆರೆಸುವುದು ಸಲ್ಲದು ಎಂದು ಹೇಳಿದರು.ಜಾತಿ ಪಕ್ಷ ಇಲ್ಲದ ರೈತರಿಗೆ ಪಕ್ಷಾತೀತವಾಗಿ ಬದುಕು ಕಟ್ಟಿಕೊಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತ ಸಕಲೇಶಪುರ ಎತ್ತಿನಹೊಳೆ ನೀರಾವರಿ ಯೋಜನೆಯಿಂದ ಬೆಳವಾಡಿ, ದೇವನೂರು ಕೆರೆಗಳು ಭರ್ತಿಯಾಗಿದ್ದು, ಕೆಲವೇ ದಿನಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಗಂಗಾಪೂಜೆ ನೆರವೇರಿಸುವುದಾಗಿ ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಮಾತನಾಡಿ, ಧರ್ಮೋ ರಕ್ಷತಿ ರಕ್ಷತಃ ಎಂಬಂತೆ ಪ್ರಕೃತಿ ರಕ್ಷಣೆ ಮಾಡುವುದೇ ಧರ್ಮ. ಪ್ರಕೃತಿಯ ಒಂದು ಭಾಗವಾಗಿ ಕೆರೆ ಜಲರಕ್ಷಣೆ ಮಾಡಿದರೆ ಅದು ನಮ್ಮ ರಕ್ಷಣೆ ಮಾಡುತ್ತದೆ ಎಂದು ತಿಳಿಸಿದರು. ಪಂಚಭೂತಗಳಿಗೆ ಕೃತಜ್ಞತೆ ಸಲ್ಲಿಸುವುದು ನಮ್ಮ ಧರ್ಮ. ಉಪಕಾರ ಮಾಡಿದವರನ್ನು ಸ್ಮರಿಸುವುದೇ ಧರ್ಮದ ಸಾರ. ಜೀವಜಲಕ್ಕೆ ಬಾಗಿನ ಅರ್ಪಿಸುವ ಮೂಲಕ ಕೃತಜ್ಞತೆ ಸಲ್ಲಿಸಬೇಕಾಗಿರುವುದು ಅಗತ್ಯ ಎಂದರು. ಭೂಮಿ, ವಾಯು, ನೀರು, ಅಗ್ನಿ, ಆಕಾಶವನ್ನು ದೇವರೆಂದು ಪೂಜಿಸುವ ಸಂಸ್ಕೃತಿ ಭಾರತೀಯರ ಹಿರಿಮೆಯಾಗಿದ್ದು, 2020–21 ನೇ ಸಾಲಿನಲ್ಲಿ 28 ಕೋಟಿ ರೂಗಳನ್ನು ಮಂಜೂರು ಮಾಡಿಸಿ ದಾಸರಹಳ್ಳಿ ಕೆರೆ ಮತ್ತು ಮಾದರಸನ ಕೆರೆ ತುಂಬಿಸುವ ಯೋಜನೆಯನ್ನು 10 ತಿಂಗಳ ಒಳಗೆ ಕಾಮಗಾರಿ ಪೂರ್ಣಗೊಳಿಸಿ ಬದ್ಧತೆಯಿಂದ ಕೆಲಸ ಮಾಡಿರುವುದಾಗಿ ತಿಳಿಸಿದರು.

2018–23ರ ಅವಧಿಯಲ್ಲಿ ಲಕ್ಯಾ ಪಂಚಾಯಿತಿ ಒಂದಕ್ಕೆ 29 ಕೋಟಿ ರೂ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಾದ ರಸ್ತೆ, ಚೆಕ್‌ಡ್ಯಾಂ, ಶಾಲಾಭಿವೃದ್ಧಿ, ಅಂಬೇಡ್ಕರ್ ಭವನ ನಿರ್ಮಾಣ, ಹಾಸ್ಟೆಲ್ ಜೋರ್ಣೋದ್ದಾರ ಮುಂತಾದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ಅಭಿವೃದ್ಧಿಯಲ್ಲಿ ರಾಜಕಾರಣ ಮಾಡದೆ ಎಲ್ಲಾ ಮುಖಗಳಲ್ಲೂ ಅಭಿವೃದ್ಧಿಯಾಗಬೇಕೆಂಬ ಉದ್ದೇಶದೊಂದಿಗೆ ಈಗಿನ ಕಾಂಗ್ರೆಸ್ ಸರ್ಕಾರಕ್ಕೆ ಸಹಕಾರ ಕೊಡುವ ಜೊತೆಗೆ ಶಾಸಕ ಹೆಚ್.ಡಿ. ತಮ್ಮಯ್ಯ ಅವರೊಂದಿಗೆ ಸೇರಿ ರೈತರ, ಜನಹಿತ ಕೆಲಸ ಮಾಡುತ್ತೇವೆಂದು ಹೇಳಿದರು.

ಈ ಸಂದರ್ಭದಲ್ಲಿ ಲಕ್ಯಾ ಗ್ರಾ.ಪಂ ಅಧ್ಯಕ್ಷ ಅನೀಫ್, ಶಶಿಧರ್, ನಾಗಣ್ಣ, ಜಗಧೀಶ್, ಸಂತೋಷ್, ಮಾಜಿ ಜಿ.ಪಂ ಸದಸ್ಯ ಬೆಳವಾಡಿ ರವೀಂದ್ರ, ಎಪಿಎಂಸಿ ಮಾಜಿ ಸದಸ್ಯ ಬಸವರಾಜ್, ಮತ್ತಿತರರು ಉಪಸ್ಥಿತರಿದ್ದರು.



## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇತ್ತಿಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಇಂದು ನೀವು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ನಿಮ್ಮ ಹತ್ತಿರ ಹಣದ ಕೊರತೆ ಇರಬಹುದು. ಬಾಕಿಯಿರುವ ಮನೆಯ ಕೆಲಸ ಮುಗಿಸಲು ನಿಮ್ಮ ಸಂಗಾತಿಯ ಜೊತೆ ಏರ್ಪಾಡುಗಳನ್ನು ಮಾಡಿ.

### ವೃಷಭ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಆರ್ಥಿಕ ಸಮಸ್ಯೆ ರಚನಾತ್ಮಕವಾಗಿ ಯೋಚಿಸುವ ನಿಮ್ಮ ಸಾಮರ್ಥ್ಯವನ್ನು ಹಾಳುಮಾಡುತ್ತದೆ. ನೀವು ಕೆಲಸದ ಜಾಗದಲ್ಲಿ ಅತಿಯಾಗಿ ಶ್ರಮಪಡುವುದರಿಂದ ಕೌಟುಂಬಿಕ ಅಗತ್ಯಗಳು ಮತ್ತು ಅವಶ್ಯಕತೆಗಳು ನಿರ್ಲಕ್ಷಿಸಲ್ಪಡುತ್ತವೆ ಪ್ರಯಾಣದಲ್ಲಿ ಪ್ರಣಯ ಸಂಪರ್ಕದ ಸಾಧ್ಯತೆಯಿದೆ. ಉದ್ಯಮಶೀಲ ಜನರ ಸಹಭಾಗಿತ್ವದಲ್ಲಿ ಉದ್ಯಮಗಳನ್ನು ಪ್ರಾರಂಭಿಸಿ.

### ಮಿಥುನ ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ನಿಮ್ಮ ಸಹೋದರ–ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಪ್ರೇಮ ವೈಫಲ್ಯದ ನೋವಿಗೆ ಇವತ್ತು ನಿದ್ರಿಸಲು ಸಾಧ್ಯವಾಗುವುದಿಲ್ಲ.

### ಕರ್ಕ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶಿಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ನಿಮ್ಮ ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ.

### ಸಿಂಹ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ನಿಮ್ಮ ತಾಯಿಯ ದುಂದುಗಾರಿಕೆಯನ್ನು ನೋಡಿ ನೀವು ಚಿಂತಿತರಾಗಬಹುದು ಮತ್ತು ಆದ್ದರಿಂದ ನೀವು ಅವರ ಕೋಪದ ಬೇಟೆಯಾಗಬಹದು. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ಪ್ರಣಯದ ಸಂಬಂಧ ಅತ್ಯಾಕರ್ಷಕವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ. ಜನರು ನಿಮ್ಮ ಕೆಲಸದಲ್ಲಿನ ಪ್ರಯತ್ನಗಳಿಗೆ ನಿಮ್ಮನ್ನು ಗುರುತಿಸುತ್ತಾರೆ.

### ಕನ್ಯಾ ರಾಶಿ

ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು.

### ತುಲಾ ರಾಶಿ

ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಇಂದು ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿರುವಂತೆ ತೋರುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸಲು ಗಂಭೀರ ಪ್ರಯತ್ನಗಳನ್ನು ಮಾಡಿ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ಬಾಕಿಯಿರುವ ಮನೆಕೆಲಸಗಳು ನಿಮ್ಮ ಸ್ವಲ್ಪ ಸಮಯ ತೆಗೆದುಕೊಳ್ಳುತ್ತವೆ. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ.

### ಧನು ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಸಂಗಾತಿ ಮತ್ತು ಮಕ್ಕಳು ಹೆಚ್ಚುವರಿ ಪ್ರೀತಿ ಮತ್ತು ಕಾಳಜಿ ತೋರಿಸುತ್ತಾರೆ.

### ಮಕರ ರಾಶಿ

ಮಾನಸಿಕ ಸ್ಪಷ್ಟತೆಯನ್ನು ನಿರ್ವಹಿಸಲು ಗೊಂದಲ ಮತ್ತು ಹತಾಶೆಯನ್ನು ತಪ್ಪಿಸಿ ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಹೆತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ. ಯಾರೂ ನಿಮ್ಮ ಪ್ರೀತಿಯನ್ನು ಬೇರ್ಪಡಿಸಲಾಗದು. ಸ್ವಾಭಿಮಾನ ನಿರ್ಧಾರಕ್ಕೆ ಅಡ್ಡಪಡಿಸಲು ಬಿಡಬೇಡಿ ನಿಮ್ಮ ಕೈಕೆಳಗಿನವರು ಏನು ಹೇಳುತ್ತಾರೆಂದು ಕೇಳಿ.

### ಕುಂಭ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ.

ಯಾರಾದರೂ ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ.

### ಮೀನ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು.

# ಮಗುವಿಗೆ ತಾಯಿಯ ಎದೆ ಹಾಲು ಅತ್ಯಗತ್ಯ

**ಹಾಸನ :** ಮಗು ಜನಿಸಿದ ಅರ್ಧ ಗಂಟೆಯೊಳಗೆ ತಾಯಿಎದೆ ಹಾಲು ಉಣಿಸುವುದು ತುಂಬಾ ಪ್ರಮುಖವಾದ ಅಂಶವಾಗಿದೆ ಮತ್ತು ಮಕ್ಕಳಿಗೆ 2 ವರ್ಷ ತುಂಬುವವರೆಗೆ ಕಡ್ಡಾಯವಾಗಿ ಎದೆ ಹಾಲು ಉಣಿಸುವುದು ಅತ್ಯಗತ್ಯವಾಗಿರುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ದಾಕ್ಷಾಯಿಣಿಅವರು ತಿಳಿಸಿದ್ದಾರೆ.

ಚಿಪ್ಪಿನ ಕಟ್ಟೆ ಅಂಗನವಾಡಿ ಕೇಂದ್ರದಲ್ಲಿ ಆಯೋಜಿಸಿದ್ದ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಮಗು ಹುಟ್ಟಿನಿಂದ ಆರು ತಿಂಗಳವರೆಗೆ ಯಾವುದೇ ಮೇಲಾ ಹಾರವನ್ನು ನೀಡದೆ ತಾಯಿಎದೆ ಹಾಲನ್ನು ಮಾತ್ರ ಉಣಿಸಬೇಕು. ಅಂಗನವಾಡಿ ವ್ಯಾಪ್ತಿಗೆ ಬರುವ ಫಲಾನುಭವಿಗಳಿಗೆ ಅಂಗವಾಡಿ ಕಾರ್ಯಕರ್ತೆಯರು ಇಲಾಖೆಯಿಂದ ಸಿಗುವ ಎಲ್ಲಾರೀತಿಯ ಸವಲತ್ತು ಹಾಗೂ ಯೋಜನೆಗಳನ್ನು ಫಲಾನುಭವಿಗಳಿಗೆ ಇಲಾಖೆಯಿಂದ ನಿಗಧಿಪಡಿಸಿದ ಸಮಯಕ್ಕೆ ತಲುಪಿಸ ಬೇಕೆಂದು ತಿಳಿಸಿದರು.ಮಹಿಳೆಯರ ಆರೋಗ್ಯ, ಸ್ವಚ್ಛತೆ, ಗರ್ಭಿಣಿ, ಬಾಣಂತಿಯರ ಪೌಷ್ಠಿಕ ಆಹಾರದ ಬಗ್ಗೆ ತಿಳುವಳಿಕೆ ನೀಡಿದರು.

ಮಕ್ಕಳ ತಜ್ಞರಾದಡಾ॥ ಪಾಲಾಕ್ಷರವರು ಸ್ತನ್ಯಪಾನ ವಿಧಗಳು ಮತ್ತುಎದೆ ಹಾಲು ಕುಡಿಸಿದರೆ ಸ್ತನ ಕ್ಯಾನ್ಸರ್ ಮತ್ತು ಕರುಳಿನ



ಕ್ಯಾನ್ಸರ್ ಬರುವುದಿಲ್ಲ ಹಾಗೂ ಆರು ತಿಂಗಳ ನಂತರ ಮಕ್ಕಳಿಗೆ ನೀಡಬೇಕಾದ ಪೌಷ್ಠಿಕ ಆಹಾರದಕುರಿತು ವಿಸ್ತಾರವಾಗಿ ತಿಳಿಸಿದರು. ಹಾಗೆಯೇ ಕಾಲಕಾಲಕ್ಕೆ ತೆಗೆದುಕೊಳ್ಳುವಂತಹ ಚುಚ್ಚು ಮದ್ದುಕಡ್ಡಾಯವಾಗಿ ಹಾಕಿಸಲು ತಿಳಿಸಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಜ್ಯೋತಿಲಕ್ಷ್ಮಿ ಕೆ.ಸಿಅವರು

ಮಾತನಾಡಿಅಂಗನವಾಡಿ ಕೇಂದ್ರಗಳಲ್ಲಿ ಯಾವರೀತಿಯಲ್ಲಿಕಾರ್ಯ ನಿರ್ವಹಿಸಬೇಕು ಮತ್ತು ಇಲಾಖೆಯಿಂದ ಸಿಗುವಂತಹ ಸೌಲಭ್ಯಗಳು ಫಲಾನುಭವಿಗಳಿಗೆ ತಪ್ಪದೆತಲುಪಿಸಬೇಕು ಎಂದು ತಿಳಿಸಿದರು. ಹಾಗೆಯೇಎಲ್ಲಾ ಅಂಗನವಾಡಿ ಕೇಂದ್ರಗಳು ಬಾಡಿಗೆಯಿಂದ ಸ್ವಂತ ಕಟ್ಟಡ ವಾಗಬೇಕೆಂಬುದು ಇಲಾಖೆಯ ಗುರಿಯಾಗಿದೆ ಮತ್ತು ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳಿಗೆ ಸಂಪೂರ್ಣ ಪೌಷ್ಠಿಕ ಆಹಾರವನ್ನು ಒದಗಿಸುವುದು ನಮ್ಮ ಇಲಾಖೆಯ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು.

ವಲಯ ಮೇಲ್ವಿಚಾರಕಿಯಾದ ವಿಜಯ ಎಸ್.ಸಿ ಹಾಗೂ ಕಸಬ ವಲಯದ ಎಲಾ ಅಂಗನವಾಡಿ ಕಾರ್ಯಕರ್ತೆಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಕಲಾ ತಂಡಗಳಿಂದ ಅರ್ಜಿ ಆಹ್ವಾನ

**ದಾವಣಗೆರೆ:** ಜಿಲ್ಲಾ ಪಂಚಾಯಿತಿ ಜಿಲ್ಲಾ ವಯಸ್ಕರ ಶಿಕ್ಷಣ ಸಮಿತಿ ವತಿಯಿಂದ 1000 ಗ್ರಾಮ ಪಂಚಾಯಿತಿ ಸಂಪೂರ್ಣ ಸಾಕ್ಷರತಾ ಕಾರ್ಯಕ್ರಮದಲ್ಲಿರುವ ಅನಕ್ಷರಸ್ತ ಕಲಿಕಾರ್ಥಿಗಳಿಗೆ ಓದು, ಬರಹ, ಸರಳ ಲೆಕ್ಕ ಕುರಿತು ಕಲಿಯುವ ಬಗ್ಗೆ ಕಲಿಕಾ ಕೇಂದ್ರಕ್ಕೆ ಹಾಜರಾಗುವುದು, ಕಲಿಯುವುದು, ಕಲಿತು ನವಸಾಕ್ಷರರಾಗುವ ಬಗ್ಗೆ ಜಾಗೃತಿ ಮೂಡಿಸಲು ಕಲಿಕಾ ವಾತಾವರಣ ನಿರ್ಮಿಸಲು, ಕೇಂದ್ರ ಸರ್ಕಾರದ ಸಂಗೀತ ಮತ್ತು ನಾಟಕ ವಿಭಾಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇಲ್ಲಿ ನೋಂದಣಿಯಾಗಿರುವ ಬೀದಿನಾಟಕ, ಜಾನಪದ ಕಲಾತಂಡಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಒಂದು ತಂಡದಲ್ಲಿ ಕನಿಷ್ಠ 8 ಜನ ಕಲಾವಿದರು ಇರಬೇಕು. ಅದರಲ್ಲಿ ಇಬ್ಬರು ಮಹಿಳೆಯರು, ಒಬ್ಬ ಮಹಿಳೆ ಪ.ಜಾ ಅಥವಾ ಪ.ಪಂಕ್ಕೆ ಸೇರಿದವರಾಗಿರಬೇಕು. ಇಲಾಖೆ ಯೋಜನೆಯ ಹಾಡು/ಬೀದಿ ನಾಟಕ ಪ್ರದರ್ಶಿಸಿದ ಅನುಭವ ಹಾಗೂ ಸಂಸ್ಥೆ ನೋಂದಣಿಯಾಗಿ ಪ್ರತೀ ವರ್ಷ ನವೀಕರಣಗೊಂಡಿರಬೇಕು. ಅರ್ಹ ಬೀದಿನಾಟಕ ಕಲಾತಂಡಗಳು ತಂಡದ ಸಂಪೂರ್ಣ ವಿವರ ಮತ್ತು ದಾಖಲೆಗಳೊಂದಿಗೆ ಆಗಸ್ಟ್ 16 ರಂದು ಮಧ್ಯಾಹ್ನ 3 ಗಂಟೆಯೊಳಗೆ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳ ಕಚೇರಿ 1ನೇ ಮಹಡಿ ಜಿಲ್ಲಾ ಪಂಚಾಯಿತಿ, ದಾವಣಗೆರೆ ಈ ವಿಳಾಸಕ್ಕೆ ಸಲ್ಲಿಸಬೇಕು. ಆಯ್ಕೆ ಪ್ರಕ್ರಿಯೆ ಕುರಿತು ಕಚೇರಿ ಫಲಕದಲ್ಲಿ ತಿಳಿಸಲಾಗುತ್ತದೆ ಎಂದು ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳಾದ ಮಹೇಶ ದೊಡ್ಡಮನಿ ತಿಳಿಸಿದ್ದಾರೆ.

# ನ್ಯಾನೋ ರಸಗೊಬ್ಬರಗಳು ರೈತರಿಗೆ ಆಶಾಕಿರಣ

**ಶಿವಮೊಗ್ಗ:** ಇತ್ತೀಚಿನ ಯುಗದಲ್ಲಿ ನೂತನ ತಂತ್ರಜ್ಞಾನ ಎಲ್ಲಾ ಕ್ಷೇತ್ರಗಳಲ್ಲೂ ಹಬ್ಬಿದ್ದು, ಕೃಷಿ ಕ್ಷೇತ್ರಕ್ಕೂ ಕಾಲಿಟ್ಟಿರುವುದು ಸಂತಸದ ಸಂಗತಿ. ಇದರಿಂದ ರೈತಾಪಿ ವರ್ಗದವರಿಗೆ ಅನುಕೂಲವಾಗಲಿದೆ ಎಂದು ಕೃಷಿ ಇಲಾಖೆ ಉಪನಿರ್ದೇಶಕಿ ಮಂಜುಳಾ.ಜಿ ಹೇಳಿದರು.

ಕೃಷಿ ವಿಜ್ಞಾನ ಕೇಂದ್ರ, ಇಫ್ಕೋ ಸಂಸ್ಥೆ ಹಾಗೂ ಕೋರಮಂಡಲ ಸಂಸ್ಥೆ ಇವರ ಸಹಯೋಗದೊಂದಿಗೆ ಆ.01 ರಂದು ಹಾರನಹಳ್ಳಿ ಹೋಬಳಿಯ ರಾಮನಗರ ಗ್ರಾಮದಲ್ಲಿ ಹಾಗೂ ಆ.2 ರಂದು ಕೆಳದಿ ಶಿವಪ್ಪ ನಾಯಕ ಕೃಷಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ಆಯೋಜಿಸಿದ್ದ ತರಬೇತಿ ಹಾಗೂ ಪದ್ದತಿ ಪ್ರಾತ್ಯಕ್ಷಿಕೆ ಕಾರ್ಯಕ್ರಮ



ಉದ್ಘಾಟಿಸಿದ ಅವರು ಮಾತನಾಡಿದರು.

ಇತ್ತೀಜಿನ ದಿನಗಳಲ್ಲಿ ಡ್ರೋನ್ ಹಾಗೂ ನ್ಯಾನೋ ರಸಗೊಬ್ಬರಗಳ ಬಳಕೆ ರೈತರಿಗೆ ಆಶಾಕಿರಣವಾಗಿದೆ. ಕೃಷಿ ಇಲಾಖೆ ಆತ್ಮ ಯೋಜನೆಯಡಿ ರೈತರಿಗೆ ಕ್ಷೇತ್ರಮಟ್ಟದಲ್ಲಿ ಈ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ತರಬೇತಿ, ಕಿಸಾನ್ ಗೋಷ್ಠಿಗಳು ಹಾಗೂ ಪದ್ಧತಿ ಪ್ರಾತ್ಯಕ್ಷಿಕೆಗಳ ಮುಖಾಂತರ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.

ನ್ಯಾನೋ ಯೂರಿಯಾ ಮತ್ತು ನ್ಯಾನೋ ಡಿ.ಎ.ಪಿ ಅಧಿಕ ಹರಡುವಿಕೆ ಸಾಮರ್ಥ್ಯ ಹೊಂದಿರುವುದರಿಂದ ಇವುಗಳನ್ನು ಇತರೆ ಕೀಟನಾಶಕ, ಶಿಲಿಂಧ್ರನಾಶಕಗಳೊಂದಿಗೆ (ತ್ರಾಮ ಅಂಶವಿರುವ ಶಿಲೀಂದ್ರನಾಶಕ ಹೊರತು ಪಡಿಸಿ) ಸೇರಿಸಿ ಸಿಂಪರಣೆ ಮಾಡಬಹುದಾಗಿದೆ. ಇದರಿಂದಾಗಿ ಮೇಲು ಗೊಬ್ಬರವಾಗಿ ಬಳಸುವ ಯೂರಿಯಾ ಚೀಲವನ್ನು ಶೇ.50 ರಷ್ಟು ಕಡಿಮೆ ಮಾಡಬಹುದಾಗಿದೆ. ಹಾಗೂ ಡ್ರೋನ್ ಮುಖಾಂತರ 5 ನಿಮಿಷದಲ್ಲಿ 1 ಎಕರೆ ಸಿಂಪರಣೆ ಮಾಡುವುದರಿಂದ ಕಡಿಮೆ ಸಮಯದಲ್ಲಿ ಸಿಂಪಡಿಸುವುದಲ್ಲದೆ ಕೂಲಿ ಆಳುಗಳ ಸಮಸ್ಯೆಯನ್ನು ಸಹ ಪರಿಹರಿಸಬಹುದು ಎಂಬುದಾಗಿ ತಿಳಿಸಿದರು.

ಸಹಾಯಕ ಕೃಷಿ ನಿರ್ದೇಶಕ ರಮೇಶ್, ಕೃಷಿ ಅಧಿಕಾರಿ ಪ್ರತಿಮಾ ಸುನೀಲ್, ವಿವಿ ವಿಜ್ಞಾನಿಗಳು, ಕೃಷಿಕ ಸಮಾಜದ ನಿರ್ದೇಶಕರು ಮತ್ತು ರೈತರು ಹಾಜರಿದ್ದರು.

# ಮತ ಕಳ್ಳತನದ ವಿರುದ್ಧ ಕಾಂಗ್ರೆಸ್ ಕಹಳೆ:

**ಬೆಂಗಳೂರು:** ಮತ ಕಳ್ಳತನದ ವಿರುದ್ಧ ಕಾಂಗ್ರೆಸ್ನಗರದ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ನಡೆಸುತ್ತಿದೆ. ಪ್ರತಿಭಟನೆಯಲ್ಲಿ ಭಾಗಿಯಾಗಲು ಈಗಾಗಲೇ ರಾಹುಲ್ಗಾಂಧಿ ಬೆಂಗಳೂರಿಗೆ ಆಗಮಿಸಿದ್ದಾರೆ. ಸಾವಿರಾರು ಸಂಖ್ಯೆಯಲ್ಲಿ ಜನರು ಆಗಮಿಸುತ್ತಿದ್ದು, ಕಾಂಗ್ರೆಸ್ನಾಯಕರು ಬಿಜೆಪಿ ಮತ್ತು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಜಮೀರಹ್ಮದ್ಖಾನ್ "ರಾಹುಲ್ಗಾಂಧಿ ಚುನಾವಣಾ ಅಕ್ರಮದ 'ಬಗ್ಗೆ ಸುದೀರ್ಘವಾಗಿ ಪತ್ರಿಕಾಗೋಷ್ಠಿನಡೆಸಿ ವಿವರ ನೀಡಿದ್ದಾರೆ. ಬೆಂಗಳೂರು ಸೆಂಟ್ರಲ್ನಲ್ಲಿ ಮನ್ಸೂಲಿ ಖಾನ್ನೊಕನೆ ಯಹಂತದವರೆಗೆ 70,000 ಲೀಡ್ನಲ್ಲಿ ಇದ್ದರು. ಆದರೆ ಮಹಾ ದೇವಪುರದಲ್ಲಿ ಬಿಜೆಪಿಗೆ 1.15 ಲಕ್ಷಲೀಡ್ಬಂತು. ಈಬಗ್ಗೆಅಧ್ಯಯನ ಮಾಡಿದಾಗ ಸತ್ಯ ಬಹಿರಂಗವಾಗಿದೆ" ಎಂದು ವಿವರಿಸಿದರು. ಮಹಾರಾಷ್ಟ್ರದ ಓಟರ್ಕರ್ನಾಟಕದಲ್ಲಿ ಮತದಾನ ಮಾಡಿದ್ದಾನೆ. ಈರೀತಿಯಲ್ಲಿ ಚುನಾವಣಾ ಅಕ್ರಮ ನಡೆದಿದೆ. ಲೋಕಸಭೆ ಚುನಾವಣೆಯಲ್ಲಿ ನನ್ನ ಕ್ಷೇತ್ರದಲ್ಲೂ ಬಿಜೆಪಿಲೀಡ್ಪಡೆದು ಕೊಳ್ಳುತ್ತದೆ.

# ಬೆಸ್ಕಾಂ ಡಿಜಿಟಲ್ ಆಳವಡಿಕೆ ನಿಲ್ಲಿಸಲು ಒತ್ತಾಯ; ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪ್ರತಿಭಟನೆ

**ಮಾಲೂರು:** ಹಳೆಯ ವಿದ್ಯುತ್ಮೀಟರ್ಗಳನ್ನು ತೆಗೆದು ಹೊಸಡಿಜಿಟಲ್ಮೀಟ ಹಾರ್ಕುತ್ತಿರುವುದನ್ನು ಕೂಡಲೇ ನಿಲ್ಲಿಸಬೇಕು. ವಿದ್ಯುತ್ಖಾಸಗೀಕರಣ ವಿಧೇಯಕವನ್ನು ಕೂಡಲೇ ವಾಪಸು ಪಡೆಯಬೇಕು. ಪ್ರತಿತಿಂಗಳು ರೈತರು, ಹಾಗೂ ಅಧಿಕಾರಿಗಳ ಕುಂದು ಕೊರತೆಗಳ 'ಬಗ್ಗೆ ಚರ್ಚೆಮಾಡಲು ಸಭೆಯನ್ನುಕರೆಯಬೇಕುಸೇರಿದ 'ಂತೆಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿಕರ್ನಾಟಕ ರಾಜ್ಯರೈತಸಂಘಹಾಗೂಹಸಿರುಸೇನೆಯಪದಾಧಿಕಾರಿಗಳುನಗರದಬೆಸ್ಕಾಂ ಕಚೇರಿಯ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿಬೆಸ್ಕಾಂ ಇಲಾಖ 'ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ನಗರದ ಬೆಸ್ಕಾಂಕ ಚೇರಿಯ ಮುಂಭಾಗದಲ್ಲಿ ಕರ್ನಾಟಕ ರಾಜ್ಯರೈತಸಂಘಹಾಗೂಹಸಿರುಸೇನೆಯರಾಜ್ಯಕಾರ್ಯಾಧ್ಯಕ್ಷಅಬ್ಬಣಿಶಿವಪ್ಪ ,ಜಿಲ್ಲಾಧ್ಯಕ್ಷಬೆಡಿ ಶೆಟ್ಟಹಳ್ಳಿರಮೇಶ್ನೇತೃತ್ವದಲ್ಲಿ ಜಮಾಯಿಸಿದ ಪದಾಧಿಕಾರಿಗಳು, ರಾಜ್ಯದಲ್ಲಿ ಸರಕಾರವಿದ್ಯುತ್ಬಳಕೆದಾರರನ್ನುಸ 'ಲಿಗೆಮಾಡಲು ಹೊರಟಿದೆ. ಸರಕಾರ ಜಾರಿಮಾಡಿರುವ 200 ಯೂನಿಟ್ವಿದ್ಯುಯೋಚಿತ ಯೋಜನೆಯಲ್ಲಿ ಮೈಮರೆತುಜನರನ್ನು ಮೋಸಮಾಡುತ್ತಿದೆ.

ಗ್ಯಾರಂಟಿ ಯೋಜನೆ ಜಾರಿಗೆ ಮೊದಲು ವಿದ್ಯುತ್ಆರಂಭಿಕಶುಲ್ಕ 3.80 ರೂ. ಇದ್ದದ್ದು, ಪ್ರಸ್ತುತ 5.80 ರೂ.ಗೆನಿಗದಿಪಡಿಸಲಾಗಿದೆ. ಒಂದು ಕಿಲೋವ್ಯಾಟ್ವಿದ್ಯುತ್ಸಂಪರ್ಕ ಪಡಿದರೇ 40 ರೂ. ಮಿನಿಮಮ್ಚಾರ್ಜ್ದದ್ದು 145 ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಮಿನಿಮವ ಾರ್ಜ್ಮತ್ತುಯಾನಿಟ್ದರಗಳನ್ನು ಹೆಚ್ಚಿಸಿರುವುದುಕೆ ಇಆರ್ಸಿಮತ್ತು ಬೆಸ್ಕಾಂ ಇಲಾಖೆಗಳ 'ಆಘಾತಕಾರಿ ನಡೆಯಾಗಿದೆ. ಈರೀತಿ ವಿದ್ಯುತ್ಬಳಕೆದಾರರ ಗಮನಕ್ಕೆತರದೆ ಏಕ ಮುಖವಾಗಿ ತೀರ್ಮಾನ 'ಮಾಡುತ್ತಿರುವುದು ಸಾರ್ವಜನಿಕರ ಶೋಷಣೆಯ ಕ್ರಮವಾಗಿದೆ.

# ಕರಾಮುವಿ : ವಿವಿಧ ಕೋರ್ಸ್ಗಳಿಗೆ ಪ್ರವೇಶಾತಿ ಪ್ರಾರಂಭ

**ಶಿವಮೊಗ್ಗ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮೈಸೂರು, ಶಿವಮೊಗ್ಗ ಪ್ರಾದೇಶಿಕ ಕೇಂದ್ರದಲ್ಲಿ 2025–26 ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯ ವಿವಿಧ ಕೋರ್ಸ್ಗಳಿಗೆ ಪ್ರವೇಶಾತಿ ಪ್ರಾರಂಭವಾಗಿದೆ.

ಈಗಾಗಲೇ ವಿವಿಧ ಕೋರ್ಸ್ಗಳಿಗೆ ಪ್ರವೇಶ ಪ್ರಾರಂಭವಾಗಿದ್ದು, ಆಸಕ್ತಿಯುಳ್ಳ ವಿದ್ಯಾರ್ಥಿಗಳು ಶಿವಮೊಗ್ಗದ ಸಾಗರ ರಸ್ತೆಯಲ್ಲಿರುವ ಆಲ್ಕೋಳ ವೃತ್ತದಲ್ಲಿರುವ ಕರಾಮುವಿ ಪ್ರಾದೇಶಿಕ ವಿಭಾಗದಲ್ಲಿ ಪ್ರವೇಶಾತಿಯನ್ನು ಪಡೆಯಬಹುದು.

ಕಛೇರಿಯು ಎಲ್ಲಾ ಭಾನುವಾರ, ಎರಡನೇ ಶನಿವಾರ, ನಾಲ್ಕನೇ ಶನಿವಾರ ಹಾಗೂ ಎಲ್ಲಾ ಸರ್ಕಾರಿ ರಜೆ ದಿನಗಳಂದು ಎಂದಿನಂತೆ ಕಾರ್ಯನಿರ್ವಹಿಸುತ್ತದೆ. ಆದ್ದರಿಂದ ಇದರ ಸದುಪಯೋಗವನ್ನು ಹೆಚ್ಚಿನ ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕರಾಮುವಿನ ವೆಬ್‌ಸೈಟ್ ksouportal.com ಮೊ.ಸಂ. 9739803295, 7338069870, 9480765905 ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಮಂಡಳಿ ತಿಳಿಸಿದೆ.

## ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

ಸಿ.ಆರ್ ಮಿಸ್ ನಂ:557/2025

**ಅರ್ಜಿದಾರರು:** ಶ್ರೀ ಬಿ ಬೋರೇಶ್ ಮತ್ತು ಇತರರು

**ವಿರುದ್ಧ**

**ಎದುರುದಾರರು:** 1) ತಹಶೀಲ್ದಾರರು ಜಗಳೂರು

### ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು 1 ಮತ್ತು 2ನೇ ಅರ್ಜಿದಾರರ ತಂದೆಯವರಾದ ಮೃತ **ಶ್ರೀ ಬೊಮ್ಮಯ್ಯ ಬಿನ್ ಲೇಟ್ ಪಾಲಯ್ಯ ದಿನಾಂಕ:– 01–03–2016** ರಂದು ಜಗಳೂರು ತಾಲ್ಲೂಕಿನ ಕಾನನಕಟ್ಟೆ ಗ್ರಾಮದಲ್ಲಿ ನಮ್ಮ ಮನೆಯಲ್ಲಿ ಸ್ವಾಭಾವಿಕವಾಗಿ ಮರಣ ಹೊಂದಿದ್ದ ಸದರಿಯರ ಮರಣ ಸಮರ್ಥನಾ ಪತ್ರವನ್ನು ಪಡೆಯುವ ಸಲುವಾಗಿ ಸದರಿ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇವೆ ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು **ದಿನಾಂಕ:–15/9/2025 ರ ಬೆಳಿಗ್ಗೆ 11.00 ಗಂಟೆಗೆ** ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲಿ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:–07/08/2025 ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/–**
**ಅರ್ಜಿದಾರರ ಪರ ವಕೀಲರು**
(ಶ್ರೀ ಜಿ.ಟಿ.ಮಹಾಂತೇಶ್ ವಕೀಲರು ಜಗಳೂರು)

**ಸಹಿ/–**
**ಶಿರಸ್ತೇದಾರರು**
ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

## ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

ಸಿ.ಆರ್ ಮಿಸ್ ನಂ:554/2025

**ಅರ್ಜಿದಾರರು:** ಶ್ರೀ ಬೋರಣ್ಣ ಮತ್ತು ಇತರರು

**ವಿರುದ್ಧ**

**ಎದುರುದಾರರು:** 1) ತಹಶೀಲ್ದಾರರು ಜಗಳೂರು

### ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು 1 ಮತ್ತು 2ನೇ ಅರ್ಜಿದಾರರ ತಾಯಿಯಾದ **ಮತ್ತು 3ನೇ ಅರ್ಜಿದಾರರ ಅತ್ತೆಯವರಾದ 4ಮತ್ತು 9ನೇ ಅರ್ಜಿದಾರರ ಅಜ್ಜಿಯವರಾದ ಮೃತ ಶ್ರೀಮತಿ ತಿಪ್ಪಮ್ಮ ಕೋಂ ಪಾಲಯ್ಯ ದಿನಾಂಕ:– 01–02–1990**ರಂದು ಜಗಳೂರು ತಾಲ್ಲೂಕಿನ ಕಾನನಕಟ್ಟೆ ಗ್ರಾಮದಲ್ಲಿ ನಮ್ಮ ಮನೆಯಲ್ಲಿ ಸ್ವಾಭಾವಿಕವಾಗಿ ಮರಣ ಹೊಂದಿದ್ದ ಸದರಿಯರ ಮರಣ ಸಮರ್ಥನಾ ಪತ್ರವನ್ನು ಪಡೆಯುವ ಸಲುವಾಗಿ ಸದರಿ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇವೆ ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು **ದಿನಾಂಕ:–15/9/2025 ರ ಬೆಳಿಗ್ಗೆ 11.00 ಗಂಟೆಗೆ** ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲಿ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:–07/08/2025 ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/–**
**ಅರ್ಜಿದಾರರ ಪರ ವಕೀಲರು**
(ಶ್ರೀ ಜಿ.ಟಿ.ಮಹಾಂತೇಶ್ ವಕೀಲರು ಜಗಳೂರು)

**ಸಹಿ/–**
**ಶಿರಸ್ತೇದಾರರು**
ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

## ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

ಸಿ.ಆರ್ ಮಿಸ್ ನಂ:556/2025

**ಅರ್ಜಿದಾರರು:** ಶ್ರೀ ಬಿ ಬೋರಣ್ಣ ಮತ್ತು ಇತರರು

**ವಿರುದ್ಧ**

**ಎದುರುದಾರರು:** 1) ತಹಶೀಲ್ದಾರರು ಜಗಳೂರು

### ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು 1 ಮತ್ತು 2ನೇ ಅರ್ಜಿದಾರರ ತಂದೆಯಾದ ಮತ್ತು 3ನೇ ಅರ್ಜಿದಾರರ ಮಾವನವರಾದ 4ಮತ್ತು 9ನೇ ಅರ್ಜಿದಾರರ ಅಜ್ಜನವರಾದ ಮೃತ ಪಾಲಯ್ಯ **ಬಿನ್ ಲೇಟ್ ಬೊರಯ್ಯ ದಿನಾಂಕ:–22.07.2017** ರಂದು ಜಗಳೂರು ತಾಲ್ಲೂಕಿನ ಕಾನನಕಟ್ಟೆ ಗ್ರಾಮದಲ್ಲಿ ನಮ್ಮ ಮನೆಯಲ್ಲಿ ಸ್ವಾಭಾವಿಕವಾಗಿ ಮರಣ ಹೊಂದಿದ್ದ ಸದರಿಯರ ಮರಣ ಸಮರ್ಥನಾ ಪತ್ರವನ್ನು ಪಡೆಯುವ ಸಲುವಾಗಿ ಸದರಿ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇವೆ ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು **ದಿನಾಂಕ:–15/9/2025 ರ ಬೆಳಿಗ್ಗೆ 11.00 ಗಂಟೆಗೆ** ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲಿ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:–07/08/2025 ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/–**
**ಅರ್ಜಿದಾರರ ಪರ ವಕೀಲರು**
(ಶ್ರೀ ಜಿ.ಟಿ.ಮಹಾಂತೇಶ್ ವಕೀಲರು ಜಗಳೂರು)

**ಸಹಿ/–**
**ಶಿರಸ್ತೇದಾರರು**
ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

## ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

ಸಿ.ಆರ್ ಮಿಸ್ ನಂ:555/2025

**ಅರ್ಜಿದಾರರು:** ಶ್ರೀಮತಿ ನಾಗವೇಣಿ ಮತ್ತು ಇತರರು

**ವಿರುದ್ಧ**

**ಎದುರುದಾರರು:** 1) ತಹಶೀಲ್ದಾರರು ಜಗಳೂರು

### ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು 1 ರಿಂದ 4 ನೇ ಅರ್ಜಿದಾರರ ತಾಯಿಯವರಾದ ಮೃತ **ಶ್ರೀಮತಿ ಶಶಿಕಲಾ ಕೋಂ ಲೇಟ್ ಪಾಲಯ್ಯ ದಿನಾಂಕ:– 11–10–2010 ರಂದು** ಜಗಳೂರು ತಾಲ್ಲೂಕಿನ ಕಾನನಕಟ್ಟೆ ಗ್ರಾಮದಲ್ಲಿ ನಮ್ಮ ಮನೆಯಲ್ಲಿ ಸ್ವಾಭಾವಿಕವಾಗಿ ಮರಣ ಹೊಂದಿದ್ದ ಸದರಿಯರ ಮರಣ ಸಮರ್ಥನಾ ಪತ್ರವನ್ನು ಪಡೆಯುವ ಸಲುವಾಗಿ ಸದರಿ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇವೆ ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು **ದಿನಾಂಕ:–15/9/2025 ರ ಬೆಳಿಗ್ಗೆ 11.00 ಗಂಟೆಗೆ** ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ,ತಮ್ಮ ಪರ ವಕೀಲರ ಮುಖಾಂತರವಾಗಲಿ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/–**
**ಅರ್ಜಿದಾರರ ಪರ ವಕೀಲರು**
(ಶ್ರೀ ಜಿ.ಟಿ.ಮಹಾಂತೇಶ್ ವಕೀಲರು ಜಗಳೂರು)

**ಸಹಿ/–**
**ಶಿರಸ್ತೇದಾರರು**
ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ ಜಗಳೂರು

# ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು: ಅಮೆರಿಕಾ ಅಧ್ಯಕ್ಷರ ನಡೆಗೆ ಎಚ್‌ಡಿ ದೇವೇಗೌಡ ತೀವ್ರ ಆಕ್ಷೇಪ



**ಬೆಂಗಳೂರು:** ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು! ಹೀಗಂತ ಗುಡುಗಿದ್ದು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ. ಭಾರತದ ಆರ್ಥಿಕತೆ ಕುರಿತಾಗಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡೆಗೆ ದೇವೇಗೌಡ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಭಾರತದ ಆರ್ಥಿಕತೆ ಸತ್ತಿದೆ ಎಂದಿರುವ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರ ಹೇಳಿಕೆ ಬಗ್ಗೆ ತೀವ್ರ ಅಚ್ಚರಿ ವ್ಯಕ್ತಪಡಿಸಿರುವ ಮಾಜಿ ಪ್ರಧಾನಮಂತ್ರಿ ಹೆಚ್.ಡಿ. ದೇವೇಗೌಡರು; ಬಹುಶಃ ಟ್ರಂಪ್ ಕುರುಡರಾಗಿರಬೇಕು ಅಥವಾ ಅಜ್ಞಾನಿ ಆಗಿರಬೇಕು ಎಂದು ಟೀಕಿಸಿದ್ದಾರೆ.

ಈ ಕುರಿತಾಗಿ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಮಾಜಿ ಪ್ರಧಾನಮಂತ್ರಿಗಳು, ಟ್ರಂಪ್ ಅವರ ವರ್ತನೆ, ಭಾಷೆ ಅವರ ಹೇಳಿಕೆಯ ಇನ್ನಿತರ ಅಂಶಗಳ ಬಗ್ಗೆ ಅತೀವ ಅತೃಪ್ತಿ ವ್ಯಕ್ತಪಡಿಸಿದ್ದಾರೆ.

ಭಾರತದಲ್ಲಿ ಒಬ್ಬ ಸಣ್ಣ ವ್ಯಾಪಾರಿ ಮತ್ತು ಬಡ–ರೈತ ಕೂಡ ತನ್ನ ವ್ಯವಹಾರವನ್ನು ಬಹಳ ಘನತೆ, ಸಮಗ್ರತೆ ಮತ್ತು ಮಾನವೀಯತೆಯಿಂದ ನಡೆಸುತ್ತಿದ್ದಾನೆ. ಈ ಮೂಲಕ ಟ್ರಂಪ್ ಅವರಿಗೆ ಅನೇಕ ಪಾಠಗಳನ್ನು ಕಲಿಸಬಹುದು.

ಎಲ್ಲರಂತೆ ನಾನು ಕೂಡ ಭಾರತದ ಆರ್ಥಿಕತೆ–ಯ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಧಾರ ರಹಿತ ಮತ್ತು ಕೋಪದ ಹೇಳಿಕೆಗಳಿಂದ ಆಶ್ಚರ್ಯಚಕಿತನಾಗಿದ್ದೇನೆ. ಆಧುನಿಕ ಇತಿಹಾಸದಲ್ಲಿ ಇಷ್ಟೊಂದು ಅಸ್ಥಿರ, ಅನಾಗರಿಕ ಮತ್ತು ಬೇಜವಾಬ್ದಾರಿಯುತ ರಾಷ್ಟ್ರಮುಖ್ಯಸ್ಥರನ್ನು ನಾನು ಕಂಡಿಲ್ಲ ಎಂದು ನಾನು ಭಾವಿಸುತ್ತೇನೆ.

# ಪಿಎಸ್‌ಐ ನೇಮಕಾತಿ ಪರೀಕ್ಷೆ ಹಗರಣ : ಆರ್.ಡಿ. ಪಾಟೀಲ ಜಾಮೀನು ಅರ್ಜಿ ವಜಾ

**ನವದೆಹಲಿ:** ಈ ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ



ಬಿಟ್ಟೂಬಿಡದಂತೆ ಕಾಡಿದ್ದ ಪಿಎಸ್‌ಐ ಹಗರಣ ಹಾಗೂ ಕೆಇಎ ನೇಮಕಾತಿ ಪರೀ–ಕ್ಷೆ ಬರೆಯಲು ಹಣ ಪಡೆದು ಬ್ಲೂಟೂತ್ ನೀಡಿದ ಪ್ರಮುಖ ಆರೋಪಿ ಆರ್.ಡಿ.ಪಾಟೀಲ ಜಾಮೀನು ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾಗೊಳಿಸಿದೆ.

ಆರೋಪಿ ಪಾಟೀಲಗೆ ಜಾಮೀನು ನೀಡಲು ಹೈಕೋರ್ಟ್ ನಿರಾಕರಿಸಿತ್ತು. ಇದನ್ನು ಪ್ರಶ್ನಿಸಿ ಅವರು ಸುಪ್ರೀಂಕೋರ್ಟ್‌ಗೆ ವಿಶೇಷ ಮೇಲ ನವಿ ಅರ್ಜಿ ಸಲ್ಲಿಸಿದ್ದರು. ಜಾಮೀನು ಅರ್ಜಿಯನ್ನು ನ್ಯಾಯಪೀಠ ಈ ಹಿಂದೆ ವಜಾಗೊಳಿಸಿತ್ತು. ಆ ಬಳಿಕ, ವೈದ್ಯಕೀಯ ಕಾರಣ ನೀಡಿ ಜಾಮೀನು ಅರ್ಜಿ ಸಲ್ಲಿಸಿದ್ದರು. ಈ ಬಗ್ಗೆ ವರದಿ ನೀಡುವಂತೆ ಕಲಬುರಗಿ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಸೂಚಿಸಿತ್ತು. ಆರೋಪಿಗೆ ಶಸ್ತ್ರಚಿಕಿತ್ಸೆಯ ಅಗತ್ಯ ಇಲ್ಲ ಎಂದು ಸಂಸ್ಥೆ ವರದಿ ನೀಡಿತ್ತು.

ಪಿಎಸ್‌ಐ ಅಕ್ರಮ ನೇಮಕಾತಿ ಹಗರಣದ ಸಂಬಂಧ ಹೈಕೋರ್ಟ್‌ನ ಕಲಬುರಗಿ ಪೀಠದಿಂದ ಷರತ್ತುಬದ್ಧ ಜಾಮೀನು ಪಡೆದಿದ್ದ ಪಾಟೀಲ ಬಿಡುಗಡೆಯಾದ ದಿನದಿಂದಲೇ ನಾಪತ್ತೆಯಾಗಿದ್ದ. ಸಿಐಡಿ ಪೊಲೀಸರು ಹಲವು ನೋಟಿಸ್ ಜಾರಿಗೊಳಿಸಿದ್ದರೂ ಹಾಜರು ಆಗಿರಲಿಲ್ಲ. ಕೆಲ ದಿನಗಳ ಬಳಿಕ ಹಾಜರಾಗಿದ್ದ ಕೆಇಎ ಪ್ರಕರಣದಲ್ಲೂ ತಲೆಮರೆಸಿಕೊಂಡಿದ್ದ.

19ಕ್ಕೂ ಹೆಚ್ಚು ಪ್ರಕರಣ ದಾಖಲು: ಪಿಎಸ್‌ಐ ಹಗರಣ, ಕೆಇಎ ಬ್ಲೂಟೂತ್ ಅಕ್ರಮ, ಕೌಟುಂಬಿಕ ಪ್ರಕರಣಗಳು ಸೇರಿ ಆರ್.ಡಿ.ಪಾಟೀಲ ವಿರುದ್ಧ 19ಕ್ಕೂ ಹೆಚ್ಚು ಪ್ರಕರಣಗಳು ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದವು.

ಏನಿದು ಪ್ರಕರಣ: ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ 545 ಪೊಲೀಸ್ ಸಬ್‌ಇನ್‌ಸ್ಪೆಕ್ಟರ್ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪವಿದೆ. 2021ರ ಅಕ್ಟೋಬರ್ 3ರಂದು 545 ಹುದ್ದೆಗಳಿಗೆ ಪರೀಕ್ಷೆ ನಡೆಸಲಾಗಿತ್ತು. ಆದರೆ ಪರೀಕ್ಷೆಯಲ್ಲಿ ಅಕ್ರಮ ನಡೆದಿರುವ ಬಗ್ಗೆ ಅಭ್ಯರ್ಥಿಗಳು ಆರೋಪ ಮಾಡಿ ದೂರು ನೀಡಿದ್ದರು. ಪಿಎಸ್‌ಐ ಪರೀಕ್ಷೆಯಲ್ಲಿ 21 ಪ್ರಶ್ನೆಗಳಿಗೆ ಉತ್ತರಿಸಿದ ಅಭ್ಯರ್ಥಿ 100 ಅಂಕಗಳನ್ನು ಪಡೆದಿದ್ದರು. ಖಾಲಿ ಒಎಂಆರ್ ಶೀಟ್‌ಗಳನ್ನು ನಂತರ ಭರ್ತಿ ಮಾಡಲಾಗಿದೆ ಎಂಬ ಆರೋಪವೂ ಇದೆ.

# ಸುಮನಾಗೆ ಪಿಎಚ್‌ಡಿ ಪದವಿ

**ದಾವಣಗೆರೆ:** ನಗರದ ಬಿಐಇಟಿ ಕಾಲೇಜಿನ ಸಿವಿಲ್



ಇಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ವೈ.ಬಿ.ಸುಮನ ಇವರಿಗೆ ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ಮಹಾ ವಿದ್ಯಾಲಂಯವು ಪಿಎಚ್‌ಡಿ ಪದವಿ ಪ್ರದಾನ ಮಾಡಿ ಗೌರವಿಸಿದೆ.

ಸುಮನ ಬಿಐಇಟಿ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕ ಡಾ.ಸುರೇಶ ಮಾರ್ಗದರ್ಶನದಲ್ಲಿ ?ಸ್ಟಡಿ ಆಫ್ ಎಮಿಷನ್ ಕ್ಯಾನ್ ಕ್ಯಾರೆಕ್ಟರಿಸ್ಟಿಕ್ಸ್ ಆಫ್ ಎ ಡೀಸೆಲ್ ಇಂಜಿನ್ ಫೀಲ್ಡ್ ವಿತ್ ವೇಸ್ಟ್ ಕುಕ್ಕಿಂಗ್ ಆಯಿಲ್ ಮಿಥೇಲ್ ಇಷ್ಟರ್, ಡೀಸೆಲ್ ಮತ್ತು ಎಥೆನಾಲ್ ಟ್ರೆಂಡ್ಸ್ ಎಂಬ ವಿಷಯ ಕುರಿತು ಮಂಡಿಸಿದ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಿದೆ.

ಸುಮನ ನಗರದ ವೈ.ಬಿ.ರಾಮನಾಥ್ ಮತ್ತು ಪುಷ್ಪಾವತಿ ದಂಪತಿ ಪುತ್ರಿಯಾಗಿದ್ದಾರೆ.

ಇವರಿಗೆ ಕಾಲೇಜಿನ ಪ್ರಾಂಶುಪಾಲ ಡಾ.ಎಚ್.ಬಿ.ಅರವಿಂದ, ನಿರ್ದೇಶಕ ವೈ.ವೃಷಬೇಂದ್ರಪ್ಪ, ಆಡಳಿತ ಮಂಡಳಿಯಪ್ರತಿನಿಧಿ ಎಸ್.ಎಸ್.ಮಲ್ಲಿಕಾರ್ಜುನ್, ಸಿವಿಲ್ ವಿಭಾಗದ ಮುಖ್ಯಸ್ಥ ಡಾ.ಜಿ.ಚಿದಾನಂದ ಹಾಗೂ ಇತರರು ಅಭಿನಂದಿಸಿದ್ದಾರೆ.

# ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಂಪೂರ್ಣ ಸಹಕಾರ : ಶಾಸಕ ಟಿ.ರಘುಮೂರ್ತಿ ಭರವಸೆ



**ಚಿತ್ರದುರ್ಗ:** ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲು ಶಾಸಕನಾಗಿ ನಾನು ಸದಾ ಬದ್ಧನಿದ್ದೇನೆ, ಇಂದು ಸುಮಾರು 11 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಕಾರಿಗಳು ಭೂಮಿ ಪೂಜೆ ಮಾಡಲಾಗಿದೆ ಎಂದು ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಹೇಳಿದರು.

ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಯ ಬುಧವಾರದಂದು ಕೂನಬೇವು ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಭೂಮಿ ಪೂಜೆ, ಚಿಕ್ಕಪ್ಪನಹಳ್ಳಿ, ಹಿರೇಕಬ್ಬಿಗೆರೆ, ಚಿಕ್ಕಗೊಂಡನಹಳ್ಳಿ ಗ್ರಾಮಗಳ ಸಿ.ಸಿ.ರಸ್ತೆ ಕಾಮಗಾರಿಯ ಭೂಮಿ ಪೂಜೆ ನೇರವೇರಿಸಿ ಮಾತನಾಡಿದರು.

ಸಮಾಜದಲ್ಲಿ ಶೈಕ್ಷಣಿಕ ಪ್ರಗತಿಯಾದ–ರೆ ಅದು ಸಾಮಾಜಿಕ ಪರಿವರ್ತನೆಯ ಹೊಸ ಹೊಳಪು ಮೂಡಿದಂತೆ. ಶೈಕ್ಷಣಿಕ ಪ್ರಗತಿಯ ಆಧಾರದ ಮೇಲೆ ಆ ಸಮಾಜ ಭವಿಷ್ಯ ನಿಂತಿದೆ. ಶಾಲೆ ಒಂದು ಸಾಮಾಜಿಕ ಪರಿವರ್ತನೆಯ ಕೇಂದ್ರ ಆಗಬೇಕು. ಸಮಾಜದಲ್ಲಿ ಏನೇನು ಕೊರತೆಗಳಿವೆಯೋ ಅವು ಶಾಲೆಯಿಂದ ನೀಗುವಂತಾಗಬೇಕು. ಆದ್ದರಿಂದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕ ವಾತಾವರಣ ಸೃಷ್ಟಿಸುವ ದೊಡ್ಡ ಜವಾಬ್ದಾರಿ ಪೋಷಕರು ಮತ್ತು ಶಿಕ್ಷಕರ ಮೇಲಿದೆ ಎಂದರು.

ನನ್ನ ಕ್ಷೇತ್ರದಲ್ಲಿ ಶಾಲೆಗಳ ಸುಧಾರಣೆಗೆಯನ್ನು ನಿರಂತರವಾಗಿ ಮಾಡಿಕೊಡು ಬಂದಿದ್ದು ಚಳ್ಳಕೆರೆ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸುಮಾರು 380 ಕ್ಕೂ ಹೆಚ್ಚು ನೂತನ ಶಾಲಾ ಕಾಲೇಜು ಕೊಠಡಿಗಳ ನಿರ್ಮಾಣ ಮಾಡಲಾಗಿದ್ದು. ಇಂದು ಸಹ ಕೂನಬೇವು ಗ್ರಾಮದಲ್ಲಿ 72 ಲಕ್ಷ ವೆಚ್ಚದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 4 ನೂತನ ಕೊಠಡಿಗಳ ನಿರ್ಮಾಣಕ್ಕೆ ಭೂಮಿ ಪುಜೆ ನೇರವೇರಿಸಿದ್ದೇನೆ ಎಂದರು.

ಚಿಕ್ಕಗೊಂಡನಹಳ್ಳಿ ಗ್ರಾಮದಲ್ಲಿ ಚಿಕ್ಕಗೊಂಡನಹಳ್ಳಿ ಗ್ರಾಮದಿಂದ ಚಿಕ್ಕಪ್ಪನಹಳ್ಳಿ ಗ್ರಾಮದವರೆಗೆ 4.50 ಕೋಟಿ ವೆಚ್ಚದಲ್ಲಿ 7 ಕಿಲೋ ಮೀಟರ್ ರಸ್ತೆ ಕಾಮಗಾರಿ ಮತ್ತು ಮಾಳೇನಹಳ್ಳಿಯಿಂದ ಹಿರೇಕಬ್ಬಿಗೆರೆ, ಶಿವನಕೆರೆ ದೇವಸ್ಥಾನವರಗೆ 4 ಕೋಟಿ ವೆಚ್ಚದ ರಸ್ತೆ, ಚಿಕ್ಕಗೊಂಡನಳ್ಳಿ ಗ್ರಾಮದಲ್ಲಿ 1 ಕೋಟಿ ವೆಚ್ಚದ ಸಿ.ಸಿ.ರಸ್ತೆ ಮತ್ತು ಹಿರೇಕಬ್ಬಿಗೆರೆ ಗ್ರಾಮದಲ್ಲಿ 20 ಲಕ್ಷದ ವೆಚ್ಚದ ಸಿ ಸಿ ರಸ್ತೆ ಕಾಮಗಾರಿಗಳಿಗೆ ಭೂಮಿ ಪೂಜೆ ಮಾಡಲಾಗಿದ್ದು ಎಲ್ಲಾ ರಸ್ತೆಗಳನ್ನು ಅಚ್ಚುಕಟ್ಟಾಗಿ ಮತ್ತು ವಿಶಾಲವಾಗಿ ನಿರ್ಮಾಣ ಮಾಡಲು ಸೂಚಿಸಿದ್ದು ಸಾರ್ವಜನಿಕರು ಸಹ ಅಧಿಕಾರಿಗಳಿಗೆ ಸಹಕಾರ ನೀಡಿ ಗುಣಮಟ್ಟದ ಕೆಲಸ ಮಾಡಿಸಿಕೊಳ್ಳುವ ಮೂಲಕ ಗ್ರಾಮವನ್ನು ಸುಂದರವಾಗಿಟ್ಟುಕೊಳ್ಳಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಇಓ ರವಿಕುಮಾರ್, ಕ್ಷೇತ್ರ ಶಿಕ್ಷಣಧಿಕಾರಿ ಎಸ್.ನಾಗಭೂಷಣ್, ಉಪ ತಹಶೀಲ್ದಾರ್ ಪ್ರಕಾಶ್, ಮಾಜಿ ಜಿ.ಪಂ ಸದಸ್ಯ ಬಾಬುರೆಡ್ಡಿ, ಕೂನಬೇವು ಗ್ರಾಮ ಪಂಚಾಯತಿ ಅಧ್ಯಕ್ಷೆ ಪದ್ಮಕ್ಕ, ಮಾಡನಾಯಕನಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ರಾಜೇಶ್ ಮತ್ತು ಗ್ರಾಮ ಪಂಚಾಯತಿ ಸದಸ್ಯರು ಮತ್ತು ಸಾರ್ವಜನಿಕರು ಇದ್ದರು.

# ಡಿ.ಕೆ. ಸುರೇಶ ಕೆಎಂಎಫ್ ಅಧ್ಯಕ್ಷಗಾದಿ ಕನಸಿಗೆ ನಾನಾ ವಿಘ್ನ

**ಬೆಂಗಳೂರು :** ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ಉಮೇದಿನಲ್ಲಿರುವ ಮಾಜಿ



ಸಂಸದ ಡಿ.ಕೆ.ಸುರೇಶ್ ಅವರಿಗೆ ನಾನಾ ರೀತಿಯ ವಿಘ್ನಗಳು ಎದುರಾಗಲಾರಂಭಿಸಿವೆ. ಹಾಲಿ ಶಾಸಕ ಭೀಮಾನಾಯಕ್, ಮಾಲೂರು ಶಾಸಕ ಕೆ. ವೈ.ನಂಜೇಗೌಡ ಅವರ ಪ್ರಬಲ ಪೈಪೋಟಿ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆಪ್ತಬಣಗಳಲ್ಲಿ ಗುರುತಿಸಿಕೊಂಡಿರುವ ಮತ್ತೊಬ್ಬ ಶಾಸಕರು ಕೆಎಂಎಫ್ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟು ಸದ್ದಿಲ್ಲದೆ ಲಾಬಿ ನಡೆಸಲಾರಂಭಿಸಿರುವುದು ಡಿ.ಕೆ.ಶಿವಕುಮಾರ್ ಬಣಕ್ಕೆ ತಲೆಬಿಸಿ ತಂದಿಟ್ಟಿದೆ.

ಕೊಪ್ಪಳ ಕ್ಷೇತ್ರದ ಶಾಸಕ ರಾಘವೇಂದ್ರ ಹಿಟ್ನಾಳ್ ಈಗಾಗಲೇ ಕೊಪ್ಪಳ ಜಿಲ್ಲೆಯಿಂದ ಕೆಎಂಎಫ್ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ಅಧ್ಯಕ್ಷ ಸ್ಥಾನಕ್ಕೆ ತಾವೂ ಆಕಾಂಕ್ಷಿಯಾಗಿದ್ದು, ಬೆಂಬಲ ನೀಡುವಂತೆ ಹಲವು ಸಚಿವರನ್ನು ಭೇಟಿ ಮಾಡಲಾರಂಭಿಸಿದ್ದಾರೆ.

ಈಗಾಗಲೇ ಮುಖ್ಯಮಂತ್ರಿ ಬಣದ ಸಚಿವರಾಗಿರುವ ಎಚ್.ಸಿ.ಮಹದೇವಪ್ಪ ಹಾಗೂ ಸತೀಶ್ ಜಾರಕಿಹೊಳಿ ಅವರನ್ನು ಭೇಟಿ ಮಾಡಿರುವ ರಾಘವೇಂದ್ರ ಹಿಟ್ನಾಳ್ ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ತಾವು ಸ್ಪರ್ಧಿಸಲಿದ್ದು, ಬೆಂಬಲ ನೀಡುವಂತೆ ಮನವಿ ಮಾಡಿದ್ದಾರೆ.

ಎಚ್.ಸಿ.ಮಹದೇವಪ್ಪ ಚಾಮರಾಜನಗರ, ಮೈಸೂರು ಜಿಲ್ಲೆಯ ನಿರ್ದೇಶಕರ ವಿಶ್ವಾಸದಲ್ಲಿದ್ದಾರೆ. ಸತೀಶ್ ಜಾರಕಿಹೊಳಿ ಬೆಳಗಾವಿ, ಹುಬ್ಬಳ್ಳಿ–ಧಾರವಾಡ, ರಾಯಚೂರು ಸೇರಿದಂತೆ ಉತ್ತರ ಕರ್ನಾಟಕ ಭಾಗದ ಹಲವು ಜಿಲ್ಲೆಗಳ ಕೆಎಂಎಫ್ ನಿರ್ದೇಶಕರ ಜೊತೆ ವಿಶ್ವಾಸದಲ್ಲಿರುವುದರಿಂದ ರಾಘವೇಂದ್ರ ಹಿಟ್ನಾಳ್ ಅವರ ಭೇಟಿ ಮಹತ್ವ ಪಡೆದುಕೊಂಡಿದೆ.

ಕೆಎಂಎಫ್ ಸಹಕಾರಿ ಸಂಸ್ಥೆಯಾಗಿದ್ದು, ಪ್ರಜಾಪ್ರಭುತ್ವದ ಧ್ಯೇಯೋದ್ದೇಶದ ಅನುಸಾರ ಚುನಾವಣೆ ಮೂಲಕ ಅಧ್ಯಕ್ಷರ ಆಯ್ಕೆಯಾಗುತ್ತದೆ. ಈ ಮಾದರಿಯ ಮೂಲಕವೇ ಅಧ್ಯಕ್ಷರ ಆಯ್ಕೆ ನಡೆಯುವುದಾದರೆ ಡಿ.ಕೆ.ಸುರೇಶ್ ಅವರ ಗೆಲುವು ಕಷ್ಟಸಾಧ್ಯ.ಹೈಕಮಾಂಡ್ ಸೂಚನೆ ಮೇರೆಗೆ ಸರ್ವಾನುಮತದ ಅಭ್ಯರ್ಥಿ ಆಯ್ಕೆಯಾಗುವ ಸಂದರ್ಭ ಬಂದರೆ ಡಿ.ಕೆ.ಶಿವಕುಮಾರ್ ಬಣ ಮೇಲುಗೈ ಸಾಧಿಸಲಿದೆ.

ತಮ ಸಹೋದರ ಡಿ.ಕೆ.ಸುರೇಶ್ ಅವರನ್ನು ಕೆಎಂಎಫ್ ಅಧ್ಯಕ್ಷರನ್ನಾಗಿ ಮಾಡಬೇಕು ಎಂಬ ಕಾರಣಕ್ಕೆ ಡಿ.ಕೆ.ಶಿವಕುಮಾರ್ ಎಲ್ಲಾ ರೀತಿಯ ಅಪಮಾನ, ಹಿನ್ನಡೆಗಳನ್ನು ಅವಡುಗಚ್ಚಿ ಸಹಿಸಿಕೊಳ್ಳುತ್ತಿದ್ದಾರೆ ಎನ್ನಲಾಗಿದೆ.ಒಂದು ವೇಳೆ ತಮ ಸಹೋದರನಿಗೆ ಪ್ರತಿಸ್ಪರ್ಧಿಯಾಗಿ ಮುಖ್ಯಮಂತ್ರಿ ಬಣದ ನಾಯಕರು ಬಂದರೆ ಆ ವೇಳೆ ಡಿ.ಕೆ.ಶಿವಕುಮಾರ್ ಸಹನೆಕಟ್ಟೆ ಒಡೆಯಲಿದ್ದು, ರಾಜ್ಯ ರಾಜಕೀಯದಲ್ಲಿ ಭಾರೀ ಪ್ರಮಾಣದ ಬೆಳವಣಿಗೆಗಳಾಗಬಹುದು ಎಂದು ಅಂದಾಜಿಸಲಾಗುತ್ತಿದೆ.

ಈಗಾಗಲೇ ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷರಾಗಿ ಡಿ.ಕೆ.ಸುರೇಶ್ ಕೆಲಸ ನಿರ್ವಹಿಸುತ್ತಿದ್ದಾರೆ. ಕೆಎಂಎಫ್ ಅಧ್ಯಕ್ಷರಾಗುವ ಮೂಲಕ ಸಹಕಾರಿ ಕ್ಷೇತ್ರದಲ್ಲಿ ಪ್ರಮುಖ ಜವಾಬ್ದಾರಿಯನ್ನು ನಿಭಾಯಿಸುವ ಉಮೇದಿನಲ್ಲಿದ್ದಾರೆ.ದಿನ ಕಳೆದಂತೆ ಒಬ್ಬೊಬ್ಬರಾಗಿ ಪ್ರತಿಸ್ಪರ್ಧಿಗಳು ಹುಟ್ಟಿಕೊಳ್ಳುತ್ತಿರುವುದು ಡಿ.ಕೆ.ಶಿವಕುಮಾರ್ ಬಣಕ್ಕೆ ನುಂಗಲಾರದ ಬಿಸಿತುಪ್ಪವಾಗಿದೆ.

## ಉಚಿತ ಕುರಿ ಮತ್ತು ಮೇಕೆ ಸಾಕಣೆ ತರಬೇತಿ

**ಚಿಕ್ಕಮಗಳೂರು, ಜು.31:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್ 11 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರಿಗೆ ಉಚಿತ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಶಿಬಿರವನ್ನು ಏರ್ಪಡಿಸಿದೆ.ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 35 ವರ್ಷ ವಯಸ್ಸಿನ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಲಾಗುವುದು.

# ಪಂಚಾಯತಿ ನೌಕರರ ಕನಿಷ್ಠ ಕೂಲಿ ಆದೇಶ ಜಾರಿಗೆ ಒತ್ತಾಯಿಸಿ ಸಿಐಟಿಯು ಪ್ರತಿಭಟನೆ

**ದಾವಣಗೆರೆ:** ಗ್ರಾಮ ಪಂಚಾಯತಿಯಲ್ಲಿ ದುಡಿಯುವ ನೌಕರರಿಗೆ ವೈಜ್ಞಾನಿಕವಾಗಿ ಕನಿಷ್ಠ ಕೂಲಿ ಆದೇಶ ವನ್ನು ತಕ್ಷಣ ಜಾರಿಗೊಳಿಸುವಂತೆ ಒತ್ತಾಯಿಸಿ ಸಿಐಟಿಯು ಸಂಘಟನೆಯ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘದ ಜಿಲ್ಲಾ ಸಮಿತಿಯಿಂದ ನಿನ್ನೆ ಪ್ರತಿಭಟನೆ ನಡೆಸಿ ಕಾರ್ಮಿಕ ಸಚಿವರಿಗೆ ಮನವಿ ಸಲ್ಲಿಸಲಾಯಿತು.




ಕರ್ನಾಟಕ ಸರ್ಕಾರವು ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುವ ನೌಕರರಿಗೆ ಕನಿಷ್ಠ ವೇತನವನ್ನು ಅವೈಜ್ಞಾನಿಕವಾಗಿ 29.11.2021 ರಂದು ಜಾರಿಗೊಳಿಸಿತ್ತು. ಇದನ್ನು ಸಂಘವು ನ್ಯಾಯಾಲಯದಲ್ಲಿ ರಿಟ್ ಮೂಲಕ ಪ್ರಶ್ನಿಸಿತ್ತು. ಹೈಕೋರ್ಟ್‌ನ ಏಕ ಸದಸ್ಯ ಪೀಠವು ಸುಪ್ರೀಂ ಕೋರ್ಟ್ ಮಾರ್ಗದರ್ಶನದಂತೆ ಕನಿಷ್ಠ 10 ವಾರಗಳ ಗಡುವು ನೀಡಿದ ನಂತರ, ಮೂರು ವರ್ಷ ನಾಲ್ಕು ತಿಂಗಳ ಬಳಿಕ 11.4.2025ರಂದು ಕನಿಷ್ಠ ವೇತನ ಅಧಿಸೂಚನೆ ಹೊರಡಿಸಿ ಆಕ್ಷೇಪಣೆ ಸಲ್ಲಿಸಲು ತಿಳಿಸಿತು.

ಸಂಘವು ಕರ ವಸೂಲಿಗಾರ, ಗುಮಾಸ್ತ, ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳನ್ನು ಅತಿ ಕುಶಲರಾಗಿ ಪರಿಗಣಿಸಿ ಮೂಲ ವೇತನ 38,021–86 ನಿಗದಿಪಡಿಸಲು ಒತ್ತಾಯಿಸಿತು. ಅದೇ ರೀತಿ ನೀರು ಗಂಟಿ, ಪಂಪ್ ಆಪರೇಟರ್, ಜವಾನರು, ಕಸಗುಡಿಸು ವವರಿಗೂ ಮೂಲ ವೇತನ ನಿಗದಿಪಡಿ ಸಬೇಕೆಂದು ಕೋರಿತು. 1.4.2025 ರಿಂದ ಕನಿಷ್ಠ ವೇತನ ಜಾರಿಗೊಳಿಸಬೇಕು, ಸೇವಾ ಹಿರಿತನವನ್ನು ಮಾನ್ಯತೆ ಮಾಡಿ ಪ್ರತಿ ವರ್ಷ ಶೇಕಡಾವಾರು ಹೆಚ್ಚಳದೊಂದಿಗೆ ಹೆಚ್ಚುವರಿ ಭತ್ಯೆ ನೀಡಬೇಕೆಂದು ಜಿಲ್ಲಾ ಸಮಿತಿ ಅಧ್ಯಕ್ಷ ಶ್ರೀನಿವಾಸಚಾರ್ ಎಸ್. ಸಿ. ಮತ್ತು ಕಾರ್ಯದರ್ಶಿ ಜಿ. ಎಸ್. ಬಸವರಾಜ್ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕೆ. ಎಚ್. ಆನಂದರಾಜ್, ಚನ್ನಗಿರಿ ತಾಲ್ಲೂಕಿನ ಪಿ. ಚಂದ್ರಪ್ಪ, ಪ್ರಸಾದ್, ರಾಕೇಶ್ ಜಿ. ಎಸ್., ಓಂಕಾರ ಕೃಷ್ಣಮೂರ್ತಿ ಕೆ. ಟಿ., ಕುಮಾರ್, ಹಾಲಸ್ವಾಮಿ, ಮಲ್ಲೇಶನಾಯ್ಕ, ಕೆಂಚಪ್ಪ, ದಾವಣಗೆರೆಯ ತಿಪ್ಪೇಸ್ವಾಮಿ, ಕರಿಬಸಪ್ಪ, ಹಾಲೇಶ್, ಅಜ್ಜಯ್ಯ, ನೀಲಪ್ಪ, ಹೊನ್ನಾಳಿಯ ಚಂದ್ರಪ್ಪ, ಹಾಜರಿದ್ದರು.

# ರೈತರು ಬೆಳೆಗಳ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರಗಳನ್ನು ಬಳಸಿ

## ಯೂರಿಯಾ ಗೊಬ್ಬರಕ್ಕೆ ಆತಂಕ ಬೇಡ : ಜಂಟಿ ಕೃಷಿ ನಿರ್ದೇಶಕರು

**ಬಳ್ಳಾರಿ :** ಜಿಲ್ಲೆಯ ರೈತರು ತಾವು ಬೆಳೆಯುವ ಬೆಳೆಗಳ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರಗಳನ್ನು ಬಳಸಬೇಕು. ಯೂರಿಯಾ ರಸಗೊಬ್ಬರಕ್ಕೆ ಆತಂಕಪಡುವ ಅಗತ್ಯವಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.



ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಜುಲೈ ಮಾಹೆಯವರೆಗೆ ಒಟ್ಟು 27025 ಮೆ.ಟನ್‌ಗಳ ಬೇಡಿಕೆ ಇದ್ದು, ಇಲ್ಲಿಯವರೆಗೆ ಪ್ರಾರಂಭಿಕ ಶಿಲ್ಕು ಸೇರಿ 34,163 ಮೆ.ಟನ್ ದಾಸ್ತಾನು ಮಾಡಲು, ಈ ಪೈಕಿ 25,887 ಮೆ.ಟನ್ ವಿತರಣೆಯಾಗಿ 8,286 ಮೆ.ಟನ್‌ಗಳಷ್ಟು ದಾಸ್ತಾನು ಉಳಿದಿದೆ.

ಜಿಲ್ಲೆಯಲ್ಲಿ ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿಗೆ ಕೃಷಿ ಮತ್ತು ತೋಟಗಾರಿಕೆ ಬೆಳೆಗಳ ಬಿತ್ತನೆ ಮಾಡಲು ಲಭ್ಯವಿದ್ದ ಒಟ್ಟು 2,81,522 ಹೆಕ್ಟೇರ್ ಸಾಗುವಳಿ ಪ್ರದೇಶಕ್ಕೆ ಅನುಗುಣವಾಗಿ ಯೂರಿಯಾ ರಸಗೊಬ್ಬರಗಳ ಬೇಡಿಕೆ ಅಂದಾಜಿಸಲಾಗಿ ಮಾಹೆವಾರು ಕಾರ್ಯಕ್ರಮವನ್ನು ಸರಬರಾಜುದಾರರುವಾರು ರೂಪಿಸಿಕೊಳ್ಳಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಪೂರ್ವ ಮುಂಗಾರು ಮಳೆಯು ಉತ್ತಮವಾಗಿ ಬಂದ ಕಾರಣ ಹೆಚ್ಚಿನ ಪ್ರದೇಶದಲ್ಲಿ ಬೆಳೆಗಳನ್ನು ಬಿತ್ತನೆ ಮಾಡಲು ರೈತರು ಉತ್ಸುಕತೆ ತೋರಿದ ಪರಿಣಾಮವಾಗಿ ಎರಡು, ಮೂರು ವರ್ಷಗಳಿಂದ ಮೆಣಸಿನಕಾಯಿ ಬೆಳೆಯ ಬೆಲೆಯಲ್ಲಿ ಕುಸಿತವಾದ ಪರಿಣಾಮ ಜಿಲ್ಲೆಯಲ್ಲಿ ಮೆಕ್ಕೆಜೋಳ ಮತ್ತು ಹತ್ತಿ ಬೆಳೆಯ ಬಿತ್ತನೆ ಪ್ರದೇಶ ಕ್ರಮವಾಗಿ 24,000 ಹೆಕ್ಟೇರ್‌ನಿಂದ 30,000 ಹೆಕ್ಟೇರ್‌ಗೆ ಹಾಗೂ 20,000 ಹೆಕ್ಟೇರ್‌ನಿಂದ 25,000 ಹೆಕ್ಟೇರ್‌ಗೆ ಏರಿ–ಕೆಯಾಗಿದೆ.

ಮುಖ್ಯವಾಗಿ ತುಂಗಭದ್ರ ನದಿಯ ನೀರನ್ನು ಕಾಲುವೆಗಳಿಗೆ ಮುಂಚಿತವಾಗಿ ಹರಿಸಿರುವುದರಿಂದ ಸಂಯುಕ್ತ ಗೊಬ್ಬರಗಳಿಗೆ ಹೋಲಿಕೆ ಮಾಡಿದಲ್ಲಿ ಯೂರಿಯಾ ರಸಗೊಬ್ಬರದ ಬೆಲೆ ಕಡಿಮೆಯಿರುವುದರಿಂದ ಸಮತೋಲನವಾಗಿ ರಸಗೊಬ್ಬರಗಳನ್ನು ಬಳಸದೇ ಕೇವಲ ಯೂರಿಯಾ ರಸಗೊಬ್ಬರವನ್ನು ಹೆಚ್ಚಾಗಿ ಬಳಸುತ್ತಿರುವುದು ಕಂಡುಬಂದಿದೆ ಮತ್ತು ವಿಜ್ಞಾನಿಗಳು ಹಾಗೂ ಇಲಾಖೆಯಿಂದ ಶಿಫಾರಸ್ಸು ಮಾಡಲಾದ ಪ್ರಮಾಣಕ್ಕಿಂತ ರೈತರು ಹೆಚ್ಚಿನ ಪ್ರಮಾಣದಲ್ಲಿ ಬಳಕೆ ಮಾಡುತ್ತಿರುವುದು ಹಾಗೂ ಕೆಲವು ರೈತರು ಬೆಳೆಯ ವಿವಿಧ ಹಂತಗಳಲ್ಲಿ ಬಳಕೆಗೆ ಬೇಕಾದ ರಸಗೊಬ್ಬರಗಳನ್ನು ಮುಂಗಡವಾಗಿ ಖರೀದಿಸಿ ದಾಸ್ತಾನು ಮಾಡಿಕೊಂಡಿದ್ದಾರೆ.

ಈ ಮೇಲಿನ ಕಾರಣಗಳಿಂದಾಗಿ ಮಾಹೆವಾರು ಯೂರಿಯಾ ರಸಗೊಬ್ಬರದ ಬೇಡಿಕೆ, ಸರಬರಾಜು, ವಿತರಣೆ ಮತ್ತು ದಾಸ್ತಾನು ಇಲಾಖೆಯು ರೂಪಿಸಿದ ಯೋಜನೆಯನುಸಾರ ಇದ್ದಾಗ್ಯೂ ಸಹ ಜಿಲ್ಲೆಯ ರೈತರಿಂದ ಯೂರಿಯಾ ರಸಗೊಬ್ಬರಕ್ಕೆ ಹೆಚ್ಚಿನ ಬೇಡಿಕೆ ಪದೇ ಪದೇ ಬರುತ್ತಿರುವುದನ್ನು ಕೃಷಿ ಇಲಾಖೆಯು ಗಂಭೀರವಾಗಿ ಪರಿಗಣಿಸಿ ಮುಂಗಾರು ಪೂರ್ವ ಮತ್ತು ಪ್ರಸಕ್ತ ಮುಂಗಾರಿನಲ್ಲಿ ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ಜಿಲ್ಲೆಯ ಸಗಟು ಮತ್ತು ಚಿಲ್ಲರೆ ರಸಗೊಬ್ಬರ ಪರಿವೀಕ್ಷಕರು ಅನಿರೀಕ್ಷಿತ ಭೇಟಿ ನೀಡಿ ರಸಗೊಬ್ಬರದ ದಾಸ್ತಾನಿನ ಜೊತೆಗೆ ರಸಗೊಬ್ಬರ ನಿಯಂತ್ರಣ ಆದೇಶ 1985ರಡಿಯ ಎಲ್ಲಾ ಅಂಶಗಳನ್ನು ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸುತ್ತಿದ್ದಾರೆ. ಅಭಿಯಾನ ರೂಪದಲ್ಲಿ ಜಿಲ್ಲೆಯ 450ಕ್ಕೂ ಹೆಚ್ಚು ಮಳಿಗೆಗಳನ್ನು ಸಮಗ್ರವಾಗಿ ತಪಾಸಣೆ ಕೈಗೊಂಡು ಗುಣ ನಿಯಂತ್ರಣದಡಿ ಸುಮಾರು 200ಕ್ಕೂ ಮೇಲ್ಪಟ್ಟು ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಿ ರಸಗೊಬ್ಬರಗಳ ಗುಣಮಟ್ಟವನ್ನು ಖಾತ್ರಿಪಡಿಸಿಕೊಳ್ಳಲು ಹಾಗೂ ದಾಸ್ತಾನು ಮತ್ತು ವಿತರಣೆಯಲ್ಲಿ ರಸಗೊಬ್ಬರ ವಿತರಕರು ಪಾಲಿಸಬೇಕಾದ ಅಗತ್ಯ ಕ್ರಮಗಳ ಕುರಿತು ಪರವಾನಿಗೆ ಹೊಂದಿರುವುದು, ಬಿಲ್ಲುಗಳನ್ನು ಕಡ್ಡಾಯವಾಗಿ ನೀಡುವ ಬಗ್ಗೆ, ಹೆಚ್ಚಿನ ದರಕ್ಕೆ ಮಾರಾಟ ಮಾಡದಿರುವ ಬಗ್ಗೆ ಹೋಬಳಿ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ವಿವಿಧ ಸಭೆಗಳಲ್ಲಿ ಅಗತ್ಯ ಎಚ್ಚರಿಕೆ ಮತ್ತು ಸೂಚನೆಗಳನ್ನು ಸಹ ನೀಡಲಾಗಿದೆ. ಜೊತೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ನಿರ್ದೇಶನಗಳನ್ವಯ ಯೂರಿಯಾ ಗೊಬ್ಬರದ ಅವೈಜ್ಞಾನಿಕ ಬಳಕೆಯ ದುಷ್ಪರಿಣಾಮಗಳು ಮತ್ತು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ನ್ಯಾನೋ ರಸಗೊಬ್ಬರಗಳನ್ನು (ವಿಶೇಷವಾಗಿ ನ್ಯಾನೋ ಯೂರಿಯಾ ಮತ್ತು ಡಿ.ಎ.ಪಿ) ಪರ್ಯಾಯವಾಗಿ ಬಳಸುವ ಕುರಿತು ಅರಿವು ಮೂಡಿಸಲಾಗುತ್ತಿದೆ.

ಬೆಳೆಗಳ ಪದ್ಧತಿಯಲ್ಲಿ ಆದ ಹೆಚ್ಚಿನ ಬದಲಾವಣೆ, ಯೂರಿಯಾ ರಸಗೊಬ್ಬರದ ಕಡಿಮೆ ಬೆಲೆ ಮತ್ತು ಸಂಯುಕ್ತ ಗೊಬ್ಬರಗಳ ಹೆಚ್ಚಿನ ಬೆಲೆ ಮುಂಚಿತವಾಗಿ ಆಗಮಿಸಿದ ಮುಂಗಾರು ಹಾಗೂ ತುಂಗಭದ್ರ ನದಿ ನೀರು ಮತ್ತು ರೈತರ ಅವೈಜ್ಞಾನಿಕವಾಗಿ ಬಳಸುತ್ತಿರುವ ಪ್ರಮಾಣದ ಕಾರಣ ಜಿಲ್ಲೆಯಲ್ಲಿನ ಯೂರಿಯಾ ಗೊಬ್ಬರದ ಬೇಡಿಕೆ ಹೆಚ್ಚುತ್ತಿರುತ್ತದೆ. ಜಿಲ್ಲೆಯಲ್ಲಿ ಹೆಚ್ಚಿನ ಕೊರತೆ ಇಲ್ಲದಿದ್ದರೂ ಮಾಹೆವಾರು ರೂಪಿಸಿರುವ ರಸಗೊಬ್ಬರಗಳ ಕಾರ್ಯಕ್ರಮದ ಅನುಸಾರ ಸರಬರಾಜು, ವಿತರಣೆ ಮತ್ತು ದಾಸ್ತಾನನ್ನು ಸರಿದೂಗಿಸಿ ರೈತರಿಗೆ ಅವಶ್ಯವಿರುವ ಯೂರಿಯಾ ಗೊಬ್ಬರದ ಜೊತೆಗೆ ಇತರೆ ಅವಶ್ಯಕತೆ ಗೊಬ್ಬರಗಳನ್ನು ಒದಗಿಸಲು ಇಲಾಖೆಯು ನಿರಂತರ ಕ್ರಮವಹಿಸಲಾಗಿದೆ.

ಮುಂದಿನ ದಿನಗಳಲ್ಲಿ ಉದ್ಭವಿಸಬಹುದಾದ ಬೇಡಿಕೆಯನ್ನು ಸಹ ಈಗಾಗಲೇ ಮಾಹೆ ಹಾಗು ಸರಬರಾಜುದಾರರವಾರು ರೂಪಿಸಿಕೊಂಡಿರುವ ಗುರಿಗಳನ್ವಯ ದಾಸ್ತಾನು ಮಾಡಿ ಸೂಕ್ತ ರೀತಿಯಲ್ಲಿ ವಿತರಿಸಲಾಗುತ್ತದೆ ಹಾಗೂ ಈ ಸಮಯದಲ್ಲಿ ಯಾವುದೇ ಕೃಷಿ ಪರಿಕರ ಮಾರಾಟಗಾರರು ಸಂಬಂಧಿಸಿದ ಕಾನೂನುಗಳನ್ನು ಉಲ್ಲಂಘಿಸಿದ್ದಲ್ಲಿ ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

# ದೇಗುಲ ಕಟ್ಟುವ ಒಗ್ಗಟ್ಟಿನಂತೆ ಸುಸಜ್ಜಿತ ಶಾಲೆಗಳ ನಿರ್ಮಾಣಕ್ಕೆ ಹೆಚ್ಚಿನ ಒತ್ತು ಅಗತ್ಯ: ಜಿ. ಬಿ. ವಿನಯ್ ಕುಮಾರ್ ಪ್ರತಿಪಾದನೆ

**ದಾವಣಗೆರೆ:** ದೇವಸ್ಥಾನ ಕಟ್ಟಲು ತೋರುವ ಒಗ್ಗಟ್ಟು ಸುಸಜ್ಜಿತ ಶಾಲೆ ನಿರ್ಮಾಣ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕೆ ನೀಡಿ–ದರೆ ರಾಜ್ಯದಲ್ಲಿ ಮಾದರಿ ಶಾಲೆಯನ್ನಾಗಿಸಲು ಸಾಧ್ಯ ಎಂದು ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅಭಿಮತ ವ್ಯಕ್ತಪಡಿಸಿದರು.



ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಗಡಿಮಾಕುಂಟೆ ಗ್ರಾಮದಲ್ಲಿ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀಶ್ರೀಶ್ರೀ 1008 ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದ ಮಹಾಸ್ವಾಮಿಗಳವರ ದಿವ್ಯ ಸಾನಿಧ್ಯದಲ್ಲಿ ನಡೆದ ಶ್ರೀ ಬಸವೇಶ್ವರಸ್ವಾಮಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಹಾಗೂ ಅಡ್ಡಪಲ್ಲಕ್ಕಿ ಮಹೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ರಾಜ್ಯ ಪ್ರತಿಯೊಂದು ಗ್ರಾಮಗಳಲ್ಲಿಯೂ ದೇವಸ್ಥಾನ ಕಟ್ಟಲು ವಿಶೇಷ ಆಸಕ್ತಿ, ಒಗ್ಗಟ್ಟು, ಶಕ್ತಿ, ಶ್ರಮ ವಹಿಸುತ್ತಾರೆ. ಜಾತಿ ಬೇಧ ಮರೆತು ಎಲ್ಲರೂ ಒಂದಾಗಿ ದೇವಸ್ಥಾನ ಕಟ್ಟಬೇಕು ಎಂಬ ಅಪೇಕ್ಷೆ ಒಳ್ಳೆಯದು. ದೇವಸ್ಥಾನ ಕಟ್ಟಿದ ಮೇಲೆ ಮುಂದಿನ ದಿನಗಳಲ್ಲಿಯೂ ಗ್ರಾಮದ ಜನರಲ್ಲಿ ಅದೇ ಉತ್ಸಾಹ, ಪ್ರೀತಿ, ಒಗ್ಗಟ್ಟು, ಶಕ್ತಿ ಇರಬೇಕು. ಅದೇ ರೀತಿಯಲ್ಲಿ ದೇಗುಲನ ನಿರ್ಮಾಣಕ್ಕೆ ತೋರುವ ಒಗ್ಗಟ್ಟು, ಪರಿಶ್ರಮ, ಆಸಕ್ತಿ ಸುಸಜ್ಜಿತ ಶಾಲೆ ಹಾಗೂ ಸರ್ಕಾರಿ ಶಾಲೆಗಳ ಗುಣಮಟ್ಟದತ್ತ ಯೋಚಿಸಬೇಕಾದ ಅಗತ್ಯತೆ ಇದೆ ಎಂದು ಪ್ರತಿಪಾದಿಸಿದರು.

ಸರ್ಕಾರಿ ಶಾಲೆಗಳಲ್ಲಿ ಓದಿ ಬರುವ ವಿದ್ಯಾರ್ಥಿಗಳಿಗೆ ಐಎಎಸ್, ಐಪಿಎಸ್ ಕಷ್ಟವಾಗುತ್ತಿದೆ. ಇದಕ್ಕೆ ಕಾರಣ ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ಸಿಗದಿರುವುದು ಹಾಗೂ ಅಸಮಾನತೆ ಇರುವುದೇ ಕಾರಣವಾಗಿದೆ. ಹಾಗಾಗಿ, ದೇವಸ್ಥಾನ ಕಟ್ಟುವಷ್ಟೇ ಆಸಕ್ತಿ ಉತ್ಸಾಹ ಶಾಲೆಗಳ ಅಭಿವೃದ್ಧಿಗೂ ಬೇಕು. ನಮ್ಮ ಸಂಸ್ಥೆಯಲ್ಲಿ ಓದಿದ ಬಡ ಮತ್ತು ಶ್ರೀಮಂತ ಮಕ್ಕಳು ಐಎಎಸ್, ಐಪಿಎಸ್ ಅಧಿಕಾರಿಗಳಾಗಿದ್ದಾರೆ. ಸರ್ಕಾರಿ ಶಾಲೆಗಳ ಮಕ್ಕಳಿಗೆ ನಗರ ಪ್ರದೇಶದ ಮಕ್ಕಳಂತೆ ಶಿಕ್ಷಣ ಸಿಕ್ಕರೆ ಸಾಧನೆ ಕಷ್ಟವಾಗದು. ದೇವಸ್ಥಾನ ನಿರ್ಮಾಣದಂತೆ ಶಾಲೆಗಳ ನಿರ್ಮಾಣವೂ ಆಗಬೇಕು. ಈ ನಿಟ್ಟಿನಲ್ಲಿ ನಾವೆಲ್ಲರೂ ಯೋಚಿಸಬೇಕಿದೆ. ಆದ್ರೆ, ಗಟ್ಟಿ ಮನಸ್ಸು ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಧರ್ಮ ಮತ್ತು ಸಂಸ್ಕೃತಿ ಉಳಿಯಬೇಕು. ಜೊತೆಗೆ ಶಿಕ್ಷಣಕ್ಕೂ ಹೆಚ್ಚಿನ ಮಹತ್ವ ನೀಡಬೇಕಿದೆ. ಶಿಕ್ಷಣದ ಮೂಲಕ ಧರ್ಮ ಮತ್ತು ಸಂಸ್ಕೃತಿ ಅರಿವು ಮಕ್ಕಳಲ್ಲಿ ಮೂಡಿಸಬೇಕಾದ ಅಗತ್ಯತೆ ಇದೆ. ಧರ್ಮದಂತೆ ನಡೆದರೆ ಸಂಸ್ಕೃತಿ ಬೆಳೆಸಿಕೊಂಡರೆ ಸಹಬಾಳ್ವೆ ಸಾಧ್ಯವಾಗುತ್ತದೆ. ಈ ಗ್ರಾಮದಲ್ಲಿನ ಮಕ್ಕಳು ಐಎಎಸ್, ಐಪಿಎಸ್ ಆಗುವಂತೆ ಭಗವಂತ ಶಕ್ತಿ ನೀಡಲಿ ಎಂದು ಹಾರೈಸಿದರು.

ಕೊಟ್ಟೂರು ಚಾನೂಕೋಟಿ ಮಠದ ಷ.ಬ್ರ. ಶ್ರೀ ಡಾ. ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯವಹಿಸಿದ್ದರು. ಜಗಳೂರು ಶಾಸಕ ಬಿ. ದೇವೇಂದ್ರಪ್ಪ ರವರು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಕೇಂದ್ರದ ಮಾಜಿ ಸಚಿವ ಹಾಗೂ ಮಾಜಿ ಸಂಸದ ಡಾ. ಜಿ. ಎಂ. ಸಿದ್ದೇಶ್ವರ, ಮಾಜಿ ಶಾಸಕರಾದ ಎಸ್. ವಿ. ರಾಮಚಂದ್ರಪ್ಪ, ಹೆಚ್. ಪಿ. ರಾಜೇಶ್, ಕೆ. ತಿಪ್ಪೇಸ್ವಾಮಿ. ಹೊಸಪೇಟೆ ಅಜ್ಜಯ್ಯ ನಾಡಗೇರ, ಹೆಚ್. ನಾಗರಾಜ, ಬಿಸ್ತುವಳ್ಳಿ ಬಾಬಣ್ಣ, ಗ್ರಾ. ಸದಸ್ಯರಾದ ಬೋರಮ್ಮ, ಜೆ. ಎಂ. ತಿಪ್ಪೇಸ್ವಾಮಿ, ಕೆ. ಪಿ. ಪಾಲಯ್ಯ, ಎಸ್.ಕೆ. ಮಂಜುನಾಥ, ಬಿಜೆಪಿ ಮಂಡಲದ ಮಾಜಿ ಅಧ್ಯಕ್ಷ ಪಲ್ಲಗಟ್ಟೆ ಮಹೇಶ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಸೊಕ್ಕೆ ನಾಗರಾಜ್ ಹಲವರು ಮುಖಂಡರು ಉಪಸ್ಥಿತರಿದ್ದರು.

# ಅಡಿಕೆ ಬದಲು ಪರ್ಯಾಯ ಬೆಳೆಗೆ ಪ್ರೋತ್ಸಾಹಿಸಿ

## ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಸೂಚನೆ

**ದಾವಣಗೆರೆ, ಜು. 23–** ಜಿಲ್ಲೆಯಲ್ಲಿ ಅಂತರ್ಜಲ ಮಟ್ಟದ ತೀವ್ರ ಕುಸಿತದ ಬಗ್ಗೆ ಕಳವಳ ವ್ಯಕ್ತಪಡಿಸಿದ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಬೋರ್‌ವೆಲ್ ಆಧಾರಿತ ಅಡಿಕೆ ಕೃಷಿ ಬದಲಿಗೆ, ಅರೆ ನೀರಾವರಿ ಬೆಳೆಗಳನ್ನು ಉತ್ತೇಜಿಸಲು ತಕ್ಷಣ ಯೋಜನೆ ರೂಪಿಸುವಂತೆ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಕೃಷಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಹರಿಹರ ಮತ್ತು ನ್ಯಾಮತಿ ಹೊರತು ಪಡಿಸಿ, ದಾವಣಗೆರೆ, ಹೊನ್ನಾಳಿ ತಾಲ್ಲೂಕುಗಳು ಅಂತರ್ಜಲ ಮಟ್ಟದಲ್ಲಿ 'ನಿರ್ಣಾಯಕ ಹಂತ' ತಲುಪಿವೆ. ಇನ್ನು ಜಗಳೂರು ಮತ್ತು ಚನ್ನಗಿರಿ ತಾಲ್ಲೂಕುಗಳು 'ಬಳಕೆಯ ಮೀರಿದ ಹಂತ'ವನ್ನು ತಲುಪಿವೆ. ಈ ಹಿನ್ನೆಲೆಯಲ್ಲಿ, ಅಡಿಕೆಗೆ ಪರ್ಯಾಯವಾಗಿ ಮೆಕೆಡೋಮಿಯಾ, ಸೀತಾಫಲದಂತಹ ಬೆಳೆಗಳನ್ನು ಹಾಗೂ ಅಂತರ ಬೆಳೆಯಾಗಿ ಕೋ–ಕೋ, ಪೆಪ್ಪರ್ ಬೆಳೆಯಲು ರೈತರಿಗೆ ಪ್ರೋತ್ಸಾಹಿಸುವ ಯೋಜನೆಗಳನ್ನು ರೂಪಿಸುವಂತೆ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಟ್ರ್ಯಾಕ್ಟರ್ ಸಹಾಯ ಧನ: ರೈತರಿಗೆ 30 ಹೆಚ್.ಪಿ. ವರೆಗಿನ ಟ್ರ್ಯಾಕ್ಟರ್‌ಗಳನ್ನು ಸರ್ಕಾರದ ಸಹಾಯ ಧನದಡಿ ನೀಡಲು ಯೋಜನೆ ರೂಪಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು. ತೋಟಗಾರಿಕೆ ಇಲಾಖೆಯಿಂದ ಈ ವರ್ಷ 30 ಹೆಚ್.ಪಿ.ವರೆಗಿನ 90 ಟ್ರ್ಯಾಕ್ಟರ್‌ಗಳನ್ನು ನೀಡಲಾಗುತ್ತಿದ್ದು, ಸಾಮಾನ್ಯ ವರ್ಗದವರಿಗೆ 75,000 ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ 2.50 ಲಕ್ಷ ಸಹಾಯಧನ ನೀಡಲಾಗುತ್ತದೆ ಎಂದು ತೋಟಗಾರಿಕೆ ಉಪನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಬೆಳೆ ವಿಮೆ ನೊಂದಣಿ ಹೆಚ್ಚಳ: ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಈವರೆಗೆ ಮುಂಗಾರಿನಲ್ಲಿ 40,265 ರೈತರು ಬೆಳೆ ವಿಮೆಗೆ ನೋಂದಾಯಿಸಿದ್ದಾರೆ. ಬೆಳೆ ವಿಮೆ ಜೊತೆಗೆ, ಬೆಳೆ ಕಟಾವು ಪ್ರಯೋಗವನ್ನು ಕರಾರುವಾಕ್ಕಾಗಿ ಮಾಡಬೇಕು. ಅಲ್ಲದೆ, ಬೆಳೆ ಸಮೀಕ್ಷೆಯ ವೇಳೆ ಯಾವುದೇ ವ್ಯತ್ಯಾಸವಾಗದಂತೆ ಸಮೀಕ್ಷೆ ನಡೆಸಬೇಕು ಎಂದು ಸೂಚಿಸಿದರು.

ರೈತ ಉತ್ಪಾದಕ ಕಂಪನಿಗಳ ಹೆಚ್ಚಳ: ರೈತ ಉತ್ಪಾದಕ ಕಂಪನಿಗಳನ್ನು ಹೆಚ್ಚಿಸುವುದರಿಂದ ರೈತರಿಗೆ ಅನುಕೂಲವಾಗಲಿದೆ. ಜಿಲ್ಲೆಯಲ್ಲಿ ನಬಾರ್ಡ್‌ನಿಂದ 3, ಕೃಷಿ ಇಲಾಖೆಯಿಂದ 16, ತೋಟಗಾರಿಕೆ ಇಲಾಖೆಯಿಂದ 7, ಮೀನುಗಾರಿಕೆ ಇಲಾಖೆಯಿಂದ 1, ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಿಂದ 1 ಸೇರಿದಂತೆ ಒಟ್ಟು 28 ರೈತ ಉತ್ಪಾದಕ ಕಂಪನಿಗಳಿವೆ. ಮಾಯಕೊಂಡ ಹೋಬಳಿಯಲ್ಲಿ ಮತ್ತೊಂದು ಎಫ್‌ಪಿಒ ಸೇರಿದಂತೆ ಅಗತ್ಯವಿರುವ ಕಡೆ ರೈತ ಉತ್ಪಾದಕ ಕಂಪನಿಗಳನ್ನು ಹೆಚ್ಚಿಸಲು ಸೂಚನೆ ನೀಡಿದರು.

ಸ್ತ್ರೀ ಶಕ್ತಿ ಸಂಘಗಳ ಆಹಾರ ಉತ್ಪನ್ನಗಳಿಗೆ ಉತ್ತೇಜನ: ಸರ್ಕಾರದಿಂದ ಆಯೋಜಿಸುವ ಸಭೆ, ಸಮಾರಂಭಗಳಲ್ಲಿ ನೀಡಲಾಗುವ ಆಹಾರ ತಿನಿಸುಗಳನ್ನು ಸ್ತ್ರೀ ಶಕ್ತಿ ಸಂಘ ಮತ್ತು ಸ್ವಸಹಾಯ ಸಂಘದ ಮಹಿಳೆಯರು ತಯಾರಿಸಿದ ಉತ್ಪನ್ನಗಳನ್ನು ವಿತರಣೆ ಮಾಡಲು ಎಲ್ಲಾ ಇಲಾಖಾ ಮುಖ್ಯಸ್ಥರು ಅನುಸರಿಸಲು ಜಂಟಿ ಸುತ್ತೋಲೆ ಹೊರಡಿಸುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ಸೂಚಿಸಿದರು. ಇದ–ರಿಂದ ಮಾರುಕಟ್ಟೆಯನ್ನು ಹೆಚ್ಚಿಸುವ ಜೊತೆಗೆ ಗುಣಮಟ್ಟದ ಆಹಾರದ ವಿತರಣೆಯಾಗಲಿದೆ ಎಂದರು.

# ಗರ್ಭಿಣಿ ಪತ್ನಿಯ ಕೊಂದು, ಶವದೊಂದಿಗೆ 2 ದಿನ ಕಳೆದ ಹಂತಕ ಬಂಧನ

**ಬೆಂಗಳೂರು:** ಗರ್ಭಿಣಿ ಪತ್ನಿಯ ಕೊಂದ ಆರೋಪದ ಮೇಲೆ ಉತ್ತರಪ್ರದೇಶ ಮೂಲಕ ವ್ಯಕ್ತಿಯೊಬ್ಬನನ್ನು ಪೊಲೀಸರು ಗುರುವಾರ ಬಂಧನಕ್ಕೊಳಪಡಿಸಿದ್ದಾರೆ.

ಹೆಣ್ಣೂರು ಪೊಲೀಸ್ ಠಾಣಾ ವ್ಯಾಪ್ತಿಯ ಥಣಿಸಂದ್ರದಲ್ಲಿ ಘಟನೆ ನಡೆದಿದೆ. ಮೃತ ಮಹಿಳೆಯನ್ನು ಸುಮನ್ ಎಂದು ಗುರ್ತಿಸಲಾಗಿದೆ. ಪತ್ನಿ ಕೊಂದ ಆರೋಪದ ಮೇಲೆ ಶಿವಂ ಸಹಾನೆ ಎಂಬಾತನನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಆರೋಪಿ ಶಿವಂ ಉತ್ತರ ಪ್ರದೇಶದ ಕುಶಿನಗರದ ಮೂಲದವನರಾಗಿದ್ದು, ಆರು ತಿಂಗಳ ಹಿಂದಷ್ಟೇ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದ. ಮದ್ಯವ್ಯಸನಿಯಾಗಿದ್ದ ಶಿವಂ ಆಗಾಗ್ಗೆ ಪತ್ನಿಯೊಂದಿಗೆ ಜಗಳವಾಡುತ್ತಿದ್ದ ಎಂದು ತಿಳಿದುಂದಿದೆ.

ಸೋಮವಾರ ನಡೆದ ಜಗಳದ ಸಮಯದಲ್ಲಿ, ಶಿವಂ, ಸುಮನ್‌ಗೆ ಕಪಾಳಕ್ಕೆ ಹೊಡೆದಿದ್ದು, ನಂತರ ಪತ್ನಿಯಿಂದ ಶಿವಂ ಪ್ರತ್ಯೇಕವಾಗಿ ಮಲಗಿದ್ದಾನೆ. ರಾತ್ರಿ ಮಹಿಳೆ ಸಾವನ್ನಪ್ಪಿದ್ದು, ಇದನ್ನು ಅರಿಯದ ಶಿವಂ ಮಂಗಳವಾರ ಬೆಳಿಗ್ಗೆ ಕೆಲಸಕ್ಕೆ ಹೋಗಿದ್ದಾನೆ. ಮನೆಗೆ ಹಿಂದಿರುಗಿದಾಗ ಆಕೆ ಸಾವನ್ನಪ್ಪಿರುವುದು ತಿಳಿದುಬಂದಿದೆ. ಆದರೆ, ಪೊಲೀಸರಿಗೆ ಈ ಬಗ್ಗೆ ಮಾಹಿತಿ ನೀಡುವ ಬದಲು ಶವದೊಂದಿಗೆ 2 ದಿನ ಕಾಲ ಕಳೆದಿದ್ದಾನೆ.

ಬಳಿಕ ಮೃತದೇಹವನ್ನು ವಿಲೇವಾರಿ ಮಾಡಲು ಯೋಚಿಸಿದ್ದಾನೆ. ಆದರೆ, ಸಿಕ್ಕಿಬೀಳುವ ಭಯದಿಂದ ಆಲೋಚನೆನಯ್ನು ಕೈಬಿಟ್ಟಿದ್ದಾನೆ. ಬುಧವಾರ ಬೆಳಿಗ್ಗೆ ಮನೆಯಿಂದ ದುರ್ವಾಸನೆ ಬರುವುದನ್ನು ಕಂಡ ಮನೆ ಮಾಲೀಕ ಮಹೇಶ್ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಮಹಿಳೆ ಮೂರು ದಿನಗಳ ಹಿಂದೆ ಸಾವನ್ನಪ್ಪಿದ್ದು, ದೇಹದ ಮೇಲೆ ಯಾವುದೇ ಬಾಹ್ಯಗಾಯಗಳಿಲ್ಲ. ಆದರೆ, ಮೂಗಿನಿಂದ ರಕ್ತಸ್ರಾವವಾಗಿದ್ದು, ಬಲವಾದ ಹೊಡೆತದಿಂದಾಗಿರಬಹುದು ಎಂದು ಅಧಿಕಾರಿಗಳು ಹೇಳಿದ್ದಾರೆ. ಪ್ರಕರಣ ಸಂಬಂಧ ಶಿವಂ ವಿರುದ್ಧ ಬಿಎನ್‌ಎಸ್ 103(1) ಅಡಿಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.

# ಚಿಕ್ಕಮಗಳೂರಿಗೆ ಡಾ.ಆರತಿ ಕೃಷ್ಣ

**ಚಿಕ್ಕಮಗಳೂರು, ಜು.25:** ಕರ್ನಾಟಕದ ಅನಿವಾಸಿ ಭಾರತೀಯ ಸಮಿತಿಯ ಮಾನ್ಯ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ ಅವರು ಜುಲೈ 26 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಜುಲೈ 26 ರಂದು ಸಂಜೆ 6 ಗಂಟೆಗೆ ಶೃಂಗೇರಿಗೆ ಆಗಮಿಸಲಿರುವ ಅವರು ರಾತ್ರಿ ಸರ್ಕಾರಿ ಪ್ರವಾಸಿ ಮಂದಿರದಲ್ಲಿ ವಾಸ್ತವ್ಯ ಮಾಡಲಿದ್ದಾರೆ.

ಜುಲೈ 27 ರಂದು ಬೆಳಿಗ್ಗೆ 10.30ಕ್ಕೆ ಶೃಂಗೇರಿಯಿಂದ ಹೊರಟು ಎನ್.ಆರ್.ಪುರಕ್ಕೆ ಪ್ರಯಾಣಿಸಲಿದ್ದು, ದಿವಂಗತ ಹೆಚ್.ಟಿ.ರಾಜೇಂದ್ರ ಅವರ ಕುಟುಂಬದವರನ್ನು ಭೇಟಿಯಾಗಲಿದ್ದಾರೆ. ಮಧ್ಯಾಹ್ನ 3.30ಕ್ಕೆ ಶೃಂಗೇರಿಯಿಂದ ಬಾಳೆಹೊನ್ನೂರಿಗೆ ತೆರಳಿ ನೂತನ ಪತ್ರಿಕಾ ಭವನ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅನಂತರ ಶ್ರೀ ರಂಭಾಪುರಿ ಮಠಕ್ಕೆ ಭೇಟಿ ನೀಡಲಿದ್ದಾರೆ. ಅಂದು ರಾತ್ರಿ ಶೃಂಗೇರಿಯಲ್ಲಿ ವಾಸ್ತವ್ಯ ಮಾಡಲಿದ್ದು, ಜುಲೈ 28 ರಂದು ಬೆಳಿಗ್ಗೆ 11.30ಕ್ಕೆ ದಿವಂಗತ ಬೇಗಾನೆ ರಾಮಯ್ಯ ವೃತ್ತ ನಾಮಕರಣ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಅನಂತರ ತಾ.ಪಂ. ಕೆ.ಡಿ.ಪಿ. ಸಭೆಯಲ್ಲಿ ಭಾಗವಹಿಸಲಿದ್ದಾರೆ. ಅನಂತರ ಚಿಕ್ಕಮಗಳೂರಿನಿಂದ ಹೊರಟು ಬೆಂಗಳೂರಿಗೆ ತೆರಳಲಿದ್ದಾರೆ ಎಂದು ಉಪಾಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿಗಳು ತಿಳಿಸಿದ್ದಾರೆ.

# ಡಿಸಿಸಿ ಬ್ಯಾಂಕ್ ಚುನಾವಣೆ ಮತದಾರರ ಕರಡು ಪಟ್ಟಿ ಪ್ರಕಟ

**ಚಿಕ್ಕಮಗಳೂರು, ಜು.25:** ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ಆಡಳಿತ ಮಂಡಳಿಯ ಚುನಾವಣೆಗೆ ಸಂಬಂಧಿಸಿದಂತೆ ಬ್ಯಾಂಕ್‌ನ ಸದಸ್ಯ ಸಹಕಾರ ಸಂಘಗಳ ಪೈಕಿ ಅರ್ಹ ಸಹಕಾರ ಸಂಘಗಳ ಪಟ್ಟಿ, ಸುಸ್ತಿದಾರರ ಪಟ್ಟಿ ಹಾಗೂ ಅನರ್ಹ ಸಹಕಾರ ಸಂಘಗಳ ಕರಡು ಮತದಾರ ಪಟ್ಟಿಯನ್ನು ಜಿಲ್ಲೆಯ ಎಲ್ಲಾ ಸಹಕಾರ ಸಂಘಗಳಲ್ಲಿ ಜುಲೈ 25 ರಂದು ಪ್ರಚುರಪಡಿಸಿದ್ದು, ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 10 ರೊಳಗೆ ಜಿಲ್ಲಾಧಿಕಾರಿಗಳ ಕಚೇರಿ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬಹುದು ಎಂದು ಜಿಲ್ಲಾ ಫೆಡೆರಲ್ ಸಹಕಾರ ಸಂಘಗಳ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಪ್ರವೇಶಾವಕಾಶ

**ಚಿಕ್ಕಮಗಳೂರು, ಜು.25:** ನಗರದ ಡಿಎಸಿಜಿ ಪಾಲಿಟೆಕ್ನಿಕ್‌ನಲ್ಲಿ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೆ ಮೊದಲನೇ ಸೆಮಿಸ್ಟರ್ ಮತ್ತು ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೊಮಾಗೆ ಭರ್ತಿಯಾಗದೆ ಉಳಿದಿರುವ ಕೆಲವೇ ಕೆಲವು ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಭರ್ತಿ ಮಾಡಿಕೊಳ್ಳುವ ಅವಕಾಶವನ್ನು ಆಗಸ್ಟ್ 11ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ (9886489678 ಅಥವಾ 9620158708) ಗಳನ್ನು ಸಂಪರ್ಕಿಸಬಹುದು ಎಂದು ಪಾಲಿಟೆಕ್ನಿಕ್‌ನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಸ್ಪತ್ರೆಯಲ್ಲಿ ಅಪರಿಚಿತ ವ್ಯಕ್ತಿ ಸಾವು

**ಚಿಕ್ಕಮಗಳೂರು, ಜು.25:** ಅನಾಮಧೇಯ ವ್ಯಕ್ತಿಯೊಬ್ಬರು ಜಿಲ್ಲಾಸ್ಪತ್ರೆಯಲ್ಲಿ ಮೃತಪಟ್ಟಿದ್ದು, ನಗರ ಪೊಲೀಸರು ಮೃತ ವ್ಯಕ್ತಿಯ ವಾರಸುದಾರರ ನಿರೀಕ್ಷೆಯಲ್ಲಿದ್ದಾರೆ.

ಅನಾರೋಗ್ಯದಿಂದ ಅಸ್ವಸ್ಥನಾಗಿದ್ದ ಈ ಅನಾಮಧೇಯ ಪುರುಷನನ್ನು ಜುಲೈ 15 ರಂದು ಆ್ಯಂಬುಲೆನ್ಸ್‌ನಲ್ಲಿ ಜಿಲ್ಲಾಸ್ಪತ್ರೆಗೆ ಕರೆತಂದು ಚಿಕಿತ್ಸೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಜುಲೈ 16 ರಂದು ಮೃತಪಟ್ಟಿದ್ದಾರೆ. ಈ ಬಗ್ಗೆ ನಗರ ಠಾಣೆಗೆ ದೂರು ಬಂದ ಹಿನ್ನೆಲೆಯಲ್ಲಿ ವಾರಸುದಾರರ ಪತ್ತೆಗೆ ಕ್ರಮ ಕೈಗೊಳ್ಳಲಾಗಿದೆ.

# ಚಿತ್ರದುರ್ಗ: ತಂಬಾಕು ಕಾರ್ಯಾಚರಣೆ


**ಚಿತ್ರದುರ್ಗ :** ಕೋಟ್ಪಾ–2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಈಚೆಗೆ ಚಿತ್ರದುರ್ಗ ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ ದಂಡ ವಿಧಿಸಿದೆ.

ಯುವಜನತೆಯು ಅತೀ ಹೆಚ್ಚಾಗಿ ತಂಬಾಕಿನ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಇದರಿಂದಾಗಿ ಸಮಾಜದಲ್ಲಿ ಸಾವಿನ ಸಂಖ್ಯೆಯಲ್ಲಿ ಹೆಚ್ಚಾಗಿ ಯುವಕರೇ ಬಲಿಯಾಗುತ್ತಿದ್ದಾರೆ ಎಂದು ಯುವಕರಿಗೆ ಮತ್ತು ಅಂಗಡಿ ಮಾಲೀಕರಿಗೆ ತಿಳಿಸುತ್ತಾ ತಂಬಾಕು ಕಾರ್ಯಾಚರಣೆಯನ್ನು ಮಾಡಿ ಸಾರ್ವಜನಿಕರಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿಯನ್ನು ಮೂಡಿಸಲಾಯಿತು.

# ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಇನ್ನೂ 6 ತಿಂಗಳ ಕಾಲ ವಿಸ್ತರಿಸಲು ಕೇಂದ್ರ ಸರ್ಕಾರ ಮುಂದು

## ರಾಜ್ಯಸಭೆಯಲ್ಲಿಂದು ನಿರ್ಣಯ ಮಂಡನೆ

**ಮಣಿಪುರ:** ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಇನ್ನೂ ಆರು ತಿಂಗಳ ಕಾಲ ವಿಸ್ತರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದ್ದು, ಈ ನಿಟ್ಟಿನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶುಕ್ರವಾರ ರಾಜ್ಯಸಭೆಯಲ್ಲಿ ನಿರ್ಣಯ ಮಂಡಿಸಲಿದ್ದಾರೆ.



ರಾಜ್ಯಸಭೆಯು ಮಣಿಪುರ ವಿಚಾರ–ಕ್ಕೆ ಸಂಬಂಧಿಸಿದಂತೆ ಸಂವಿಧಾನದ 356 ನೇ ವಿಧಿಯ ಅಡಿಯಲ್ಲಿ ರಾಷ್ಟ್ರಪತಿಗಳು ಹೊರಡಿಸಿದ ಆದೇಶವನ್ನು ಮುಂದುವರೆಸಲು ಆಗಸ್ಟ್ 13, 2025 ರಿಂದ ಜಾರಿಗೆ ಬರುವಂತೆ ಆರು ತಿಂಗಳ ಅವಧಿಗೆ ನಿರ್ಣಯ ಅಂಗೀಕರಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಿರ್ಣಯವು ಆಗಸ್ಟ್ 13ರಿಂದ ಜಾರಿಗೆ ಬರಲಿದೆ.

ಫೆಬ್ರವರಿ 9 ರಂದು ಮುಖ್ಯಮಂತ್ರಿ ಸ್ಥಾನಕ್ಕೆ ಎನ್. ಬಿರೇನ್ ಸಿಂಗ್ ಅವರು ರಾಜೀನಾಮೆ ನೀಡಿದ ಬಳಿಕ ಮುಂದಿನ ಮುಖ್ಯಮಂತ್ರಿ ಕುರಿತು ಬಿಜೆಪಿಯಲ್ಲಿ ಒಮ್ಮತ ಮೂಡದ ಕಾರಣ ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ಹೇರಲಾಯಿತು.

ಮೇ 2023 ರಲ್ಲಿ ಪ್ರಾರಂಭವಾದ ಹಿಂಸಾಚಾರದಲ್ಲಿ ಇಲ್ಲಿಯವರೆಗೆ 260 ಜನರು ಸಾವನ್ನಪ್ಪಿದ್ದು, ಶೇಕಡಾ 80 ರಷ್ಟು ಜನ ಹಿಂಸಾಚಾರ ಆರಂಭವಾದ ಒಂದೇ ತಿಂಗಳಲ್ಲಿ ಪ್ರಾಣ ಕಳೆದುಕೊಂಡಿದ್ದಾರೆಂದು ತಿಳಿದುಬಂದಿದೆ.

ಹಿಂಸಾಚಾರ ಹಿನ್ನೆಲೆಯಲ್ಲಿ ಬಿರೇನ್ ಸಿಂಗ್ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಕಳೆದ ಏಪ್ರಿಲ್ ತಿಂಗಳಿನಲ್ಲಿ ಮಣಿಪುರ ರಾಜ್ಯದ ಬಿಜೆಪಿ ಶಾಸಕರು ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದು, ಸರ್ಕಾರ ಆಡಳಿತ ನಡೆಸುವಂತೆ ಮಾಡಬೇಕೆಂದು ಒತ್ತಾಯಿಸಿದ್ದರು.

ಕೆಲ ಶಾಸಕರು ರಾಷ್ಟ್ರಪತಿ ಆಡಳಿತವನ್ನು ಸ್ವಾಗತಿಸಿದ್ದರೆ, ಇನ್ನೂ ಕೆಲ ಶಾಸಕರು, ಶಾಂತಿ ಸ್ಥಾಪಿಸುವಲ್ಲಿ ಯಾವುದೇ ಪ್ರಮುಖ ಕ್ರಮ ಕೈಗೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆಂದು ತಿಳಿದುಬಂದಿದೆ.

ಹಿಂಸಾಚಾರ ಮತ್ತೆ ಎದುರಾಗಬಹುದು ಎಂಬ ಆತಂಕ ಸ್ಥಳೀಯ ಜನರಲ್ಲಿದೆ. ರಾಷ್ಟ್ರಪತಿ ಆಡಳಿತ ಹೇರಿಕೆಗೆ ಹಲವಾರು ನಾಗರಿಕ ಸಮಾಜ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿವೆ. ಹೀಗಾಗಿಸ ಸರ್ಕಾರ ಆಡಳಿತ ನಡೆಸುವಂತೆ ಮಾಡಲು ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

# ಆಧುನಿಕ ಹೈನುಗಾರಿಕೆ ತರಬೇತಿ

**ದಾವಣಗೆರೆ:** ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಜುಲೈ 28 ಮತ್ತು 29 ರಂದು ಆಧುನಿಕ ಹೈನುಗಾರಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ವಿಶ್ವವಿಖ್ಯಾತ ಜಂಬೂಸವಾರಿ

# ಸಕಲ ಸಿದ್ಧತೆಯಲ್ಲಿ ಸರ್ಕಾರ

## 6ನೇ ಬಾರಿ ಅಂಬಾರಿ ಹೊರಲಿರುವ ಅಭಿಮನ್ಯು



**ಮೈಸೂರು:** ವಿಶ್ವವಿಖ್ಯಾತ ಮೈಸೂರು ದಸರಾದ ಪ್ರಮುಖ ಆಕರ್ಷಣೆ ಜಂಬೂ ಸವಾರಿಗೆ ಕ್ಷಣಗಣನೆ ಆರಂಭವಾಗಿದ್ದು, ಸಕಲ ಸಿದ್ಧತೆ ಪೂರ್ಣಸಿದ್ಧತೆ ಪೂರ್ಣಗೊಂಡಿದೆ.

ಸತತ 6ನೇ ಬಾರಿಗೆ ಅಭಿಮನ್ಯು ಆನೆಯು ತಾಯಿ ಚಾಮುಂಡೇಶ್ವರಿ ವಿಗ್ರಹ ಇರುವ ಚಿನ್ನದ ಅಂಬಾರಿಯನ್ನು ಹೊರುತ್ತಿದ್ದು, ಸತತ 5 ಬಾರಿ 750 ಕೆ.ಜಿ. ಚಿನ್ನದ ಅಂಬಾರಿ ಹೊತ್ತಿರುವ ಅಭಿಮನ್ಯು ಆನೆ ಈಗ 4ನೇ ಬಾರಿಗೆ ಅಂಬಾರಿ ಹೊರಲು ಸರ್ವ ಸನ್ನದ್ಧವಾಗಿದೆ. ಈ ಬಾರಿ ಅಭಿಮನ್ಯು ಆನೆಯೊಂದಿಗೆ ಒಟ್ಟು 14 ಆನೆಗಳು ಜಂಬೂ ಸವಾರಿಯಲ್ಲಿ ಹೆಜ್ಜೆ ಹಾಕಲಿವೆ.

ಈ ಬಾರಿಯ ದಸರಾ ಮಹೋತ್ಸವಕ್ಕೆ 14 ಆನೆಗಳು ಆಯ್ಕೆಯಾಗಿದ್ದು, ಈ ಪೈಕಿ ಮೊದಲ ತಂಡದಲ್ಲಿ ಆಗಮಿಸಲಿರುವ 9 ಆನೆಗಳ ಪಟ್ಟಿಯನ್ನು ಅರಣ್ಯ ಇಲಾಖೆ ಗುರುವಾರ ಬಿಡುಗಡೆ ಗೊಳಿಸಿದೆ. ಮೊದಲ ತಂಡದಲ್ಲಿ 7 ಗಂಡಾನೆ ಹಾಗೂ 2 ಹೆಣ್ಣಾನೆಗಳಿವೆ.

ಮತ್ತಿಗೋಡು ಶಿಬಿರದಲ್ಲಿರುವ ಅಭಿಮನ್ಯು (59 ವರ್ಷ), ಮತ್ತಿಗೋಡು ಶಿಬಿರದ ಭೀಮ (25 ವರ್ಷ), ದುಬಾರೆ ಶಿಬಿರದ ಕಂಜನ್ (24), ಧನಂಜಯ (44), ಪ್ರಶಾಂತ್ (53), ಬಳ್ಳೆ ಶಿಬಿರದ ಮಹೇಂದ್ರ (42), ದೊಡ್ಡಹರವೆ ಶಿಬಿರದ ಏಕಲವ್ಯ (40), ದುಬಾರೆ ಶಿಬಿರದ ಕಾವೇರಿ (45/ಹೆಣ್ಣಾನೆ), ಬಳ್ಳೆಯ ಲಕ್ಷ್ಮೀ (53/ಹೆಣ್ಣಾನೆ) ಆನೆಗಳು ಮೈಸೂರಿಗೆ ಆಗಮಿಸಲಿವೆ.

ನಾಗರಹೊಳೆಯ ಮತ್ತಿಗೋಡು ಶಿಬಿರದಲ್ಲಿರುವ 59 ವರ್ಷ ವಯಸ್ಸಿನ ಅಭಿಮನ್ಯು ಈವರೆಗೆ 300ಕ್ಕೂ ಹೆಚ್ಚು ಆನೆ ಸೆರೆ ಕಾರ್ಯಾಚರಣೆ ಹಾಗೂ 80ಕ್ಕೂ ಹೆಚ್ಚು ಹುಲಿ ಸೆರೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿರುವ ಪ್ರಮುಖ ಕುಮ್ಕಿ ಆನೆ ಎಂದೇ ಖ್ಯಾತಿ ಪಡೆದಿದೆ. ಅಭಿಮನ್ಯು ಒಂಬತ್ತು ಅಡಿ ಎತ್ತರ ಮತ್ತು 4,920 ಕೆಜಿ ತೂಕವನ್ನು ಹೊಂದಿದ್ದಾನೆ, ತಲಾ 2.75 ಮೀಟರ್ ಗಾತ್ರದ ದಂತಗಳನ್ನು ಹೊಂದಿದ್ದಾನೆ.

ಎರಡನೇ ಹಂತದಲ್ಲಿ 5 ಆನೆಗಳನ್ನು ಕಾಡಿನಿಂದ ಮೈಸೂರಿಗೆ ತರಲಾಗುವುದು. ಕಾಡಿನಿಂದ ನಾಡಿಗೆ ಬರುವ ಈ ಆನೆಗಳಿಗೆ ಆ.4ರಂದು ಹುಣಸೂರು ಬಳಿಯ ವೀರನಹೊಸಳ್ಳಿಯಿಂದ ನಡೆಯುವ ಗಜಪಯಣದಲ್ಲಿ ವಿಧ್ಯುಕ್ತ ಮತ್ತು ಸಾಂಪ್ರದಾಯಿಕವಾಗಿ ಬೀಳ್ಕೊಡಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಎಸಿ ಭೇಟಿ: ಪರಿಶೀಲನೆ




**ದಾವಣಗೆರೆ:** ತಾಲ್ಲೂಕಿನಲ್ಲಿ ಯೂರಿಯಾ ರಸಗೊಬ್ಬರ ಕೊರತೆಯಿಂದ ರೈತರು ಆಕ್ರೋಶ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ, ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್ ಮತ್ತು ತಹಶೀಲ್ದಾರ್ ಡಾ. ಅಶ್ವತ್ಥ್ ಎಂ.ಬಿ. ನೇತೃತ್ವದಲ್ಲಿ ಅಧಿಕಾರಿಗಳ ತಂಡವು ಗುರುವಾರ ನಗರ ಮತ್ತು ಆನಗೋಡು ಹೋಬಳಿಯ ವಿವಿಧ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ, ಯೂರಿಯಾ ರಸಗೊಬ್ಬರ ದಾಸ್ತಾನು ಪರಿಶೀಲನೆ ನಡೆಸಿತು.

ಜಿಲ್ಲಾಧಿಕಾರಿಗಳ ಸೂಚನೆಯಂತೆ, ಉಪವಿಭಾಗಾಧಿಕಾರಿಗಳು ಮತ್ತು ತಹಶೀಲ್ದಾರರು ಹಲವು ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ, ಪೂರೈಕೆಯಾಗಿರುವ ರಸಗೊಬ್ಬರದ ಪ್ರಮಾಣ, ಮಾರಾಟವಾದ ಪ್ರಮಾಣ ಮತ್ತು ಉಳಿದ ದಾಸ್ತಾನಿನ ಬಗ್ಗೆ ಮಾರಾಟಗಾರರನ್ನು ಪ್ರಶ್ನಿಸಿ ವಿವರವಾದ ಮಾಹಿತಿ ಸಂಗ್ರಹಿಸಿದರು. ತಾಲೂಕಿಗೆ ಪೂರೈಕೆಯಾಗಿರುವ ಯೂರಿಯಾ ರಸಗೊಬ್ಬರವನ್ನು ಜಿಲ್ಲೆಯಿಂದ ಹೊರಗಡೆಗೆ ಕಳುಹಿಸುತ್ತಿರುವುದು ಕಂಡುಬಂದಿದ್ದು, ಇದನ್ನು ತಕ್ಷಣ ನಿಲ್ಲಿಸುವಂತೆ ಸೂಚಿಸಲಾಯಿತು.

ಅಧಿಕಾರಿಗಳು ಜಿಲ್ಲೆಯ ರೈತರಿಗೆ ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಜೊತೆಗೆ, ಹರಳು ರೂಪದ ಯೂರಿಯಾ ಬದಲಾಗಿ ನ್ಯಾನೋ ಯೂರಿಯಾದ ಬಳಕೆಯ ಪ್ರಯೋಜನಗಳ ಬಗ್ಗೆ ರೈತರಿಗೆ ಮನವರಿಕೆ ಮಾಡಿ, ಅದರ ಬಳಕೆಗೆ ಪ್ರೋತ್ಸಾಹಿಸುವಂತೆ ಮಾರಾಟಗಾರರಿಗೆ ತಿಳಿಸಿದರು. ಭೌತಿಕ ರಸಗೊಬ್ಬರ ದಾಸ್ತಾನು ಮತ್ತು ಪಿಓಎಸ್ (ಪಾಯಿಂಟ್ ಆಫ್ ಸೇಲ್) ದಾಸ್ತಾನಿನಲ್ಲಿ ಯಾವುದೇ ವ್ಯತ್ಯಾಸವಿರಬಾರದೆಂದು ಎಚ್ಚರಿಕೆ ನೀಡಿದರು.

ಈ ಭೇಟಿಯ ಸಂದರ್ಭದಲ್ಲಿ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಶ್ರೀಧರಮೂರ್ತಿ ಡಿ.ಎಂ., ಕೃಷಿ ಅಧಿಕಾರಿಗಳಾದ ಸಂಜೀವ್ ಕುಮಾರ್ ಆರ್., ಹುಣಸಿಹಳ್ಳಿ ಚಂದ್ರಪ್ಪ, ಶ್ರೀನಿವಾಸ ಆರ್. ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಸತ್ಯದ ಆಚರಣೆ ಮಾಡುವವರ ಬದುಕು ಎತ್ತರದಲ್ಲಿರುತ್ತದೆ

## ಹೊಳೆಸಿರಿಗೆರೆ : ಸತ್ಯನಾರಾಯಣ ಪೂಜೆಯ ಧಾರ್ಮಿಕ ಸಭೆಯಲ್ಲಿ ರಟ್ಟೀಹಳ್ಳಿ ಸ್ವಾಮೀಜಿ

**ಮಲೇಬೆನ್ನೂರು :** ಮಹಿಳೆ ಭೂಮಿ ಇದ್ದಂತೆ, ಭೂಮಿಯಂತೆ ಅವಳಿಗೂ ಎಲ್ಲವನ್ನು ಸಹಿಸುವ ಶಕ್ತಿ ಇದೆ. ಹಾಗಾಗಿಯೇ ಅವಳು ಉಪವಾಸ, ವ್ರತ, ಪೂಜೆ, ಆಚರಣೆಗಳ ಮೂಲಕ ನಮಗೆಲ್ಲಾ ಒಳ್ಳೆಯದನ್ನೇ ಬಯಸುತ್ತಾಳೆ ಎಂದು ರಟ್ಟೀಹಳ್ಳಿ ಕಬ್ಬಿಣಕಂತಿ ಮಠದ ಶ್ರೀ ಶಿವಲಿಂಗ ಶಿವಾಚಾರ್ಯ ಸ್ವಾಮೀಜಿ ಹೇಳಿದರು.



ಹೊಳೆಸಿರಿಗೆರೆ ಗ್ರಾಮದ ಶ್ರೀ ಕಲ್ಲೇಶ್ವರ ಸಮುದಾಯ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಬುಧವಾರ ಸಾಮೂಹಿಕ ಸತ್ಯನಾರಾಯಣ ಪೂಜೆ ಅಂಗವಾಗಿ ಹಮ್ಮಿಕೊಂಡಿದ್ದ ಧಾರ್ಮಿಕ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಆಷಾಢ ಮಾಸದಲ್ಲಿ ಪೂಜೆಗಳು ಮತ್ತು ಶ್ರಾವಣ ಮಾಸದಲ್ಲಿ ವ್ರತಾಚರಣೆಗಳು ಹೆಚ್ಚು ನಡೆಯಲಿದ್ದು ವಾರಕೊಮ್ಮೆ ಉಪವಾಸ ವ್ರತ ಮಾಡುವುದರಿಂದ ಮನಸ್ಸಿಗೆ ಮತ್ತು ಶರೀರಕ್ಕೆ ರೋಗ ನಿರೋಧಕ ಶಕ್ತಿ ಹೆಚ್ಚಾಗಿ ಆಯುಸ್ಸು ವೃದ್ಧಿಯಾಗಲಿದೆ. ವಿಷ್ಣುವಿನ ಸ್ವರೂಪ ಸತ್ಯನಾರಾಯಣನಾಗಿದ್ದು ಅವನ ಪೂಜೆಯಿಂದ ಹೆಚ್ಚು ಫಲ ಸಿಗಲಿದೆ. ಅದರಲ್ಲೂ ಸಾಮೂಹಿಕ ಸತ್ಯನಾರಾಯಣ ಪೂಜೆಯಿಂದ ಗ್ರಾಮದಲ್ಲಿ ಶಾಂತಿ, ಸಾಮರಸ್ಯ ನೆಲೆಸಲಿದೆ. ಸತ್ಯ ಎಲ್ಲಾ ಧರ್ಮಕ್ಕೂ ಮೂಲವಾಗಿದ್ದು, ಸತ್ಯದ ಮಹತ್ವ ಗೊತ್ತಿದ್ದರೂ ನಾವು ಸುಳ್ಳಿನ ಸರಮಾಲೆಯನ್ನು ಕಟ್ಟಿಕೊಂಡಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದ ಸ್ವಾಮೀಜಿ, ಸತ್ಯದ ಆಚರಣೆ ಮಾಡುವವರ ಬದುಕು ಬಹಳ ಎತ್ತರದಲ್ಲಿರುತ್ತದೆ ಎಂದು ಕಳ್ಳ ಮತ್ತು ರಾಜನ ಕಥೆ ಹೇಳಿ ಸಭೆಯ ಗಮನ ಸೆಳೆದರು. ಸತ್ಯವನ್ನು ಮಾತನಾಡಬೇಕಾದರೆ ಮೊದಲು ನಾವು ಮೌನವಾಗಿರುವುದನ್ನು ಕಲಿಯಬೇಕು. ಮೌನದಿಂದ ಶಕ್ತಿ, ಚೈತನ್ಯದ ಜೊತೆಗೆ ಉತ್ತಮ ಸಾಧನೆ ಕೂಡಾ ಸಾಧ್ಯ ಎಂದು ಪ್ರತಿಪಾದಿಸಿದರು.

ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ಎಂ.ಲಕ್ಷ್ಮಣ ಪ್ರಾಸ್ತಾವಿಕವಾಗಿ ಮಾತನಾಡಿ, ದುಡ್ಡು ಇಲ್ಲದವನು ಬಡವನಲ್ಲ, ಗುರಿ ಮತ್ತು ಕನಸು ಇಲ್ಲದವನು ನಿಜವಾದ ಬಡವ ಎಂಬ ವೀರೇಂದ್ರ ಹೆಗ್ಗಡೆ ಅವರ ಮಾತನ್ನು ಉಲ್ಲೇಖಿಸಿದರು. ದುಡಿಮೆ ಮತ್ತು ಉಳಿತಾಯದಿಂದ ಮಾತ್ರ ನಾವು ಅಭಿವೃದ್ಧಿ ಸಾಧಿಸಲು ಸಾಧ್ಯ ಎಂದರು.

ಅಧ್ಯಾತ್ಮಿಕ ಚಿಂತಕ ಡಿ.ಕೆ. ಸಿದ್ದೇಶ್, ಗ್ರಾಮದ ಮುಖಂಡ ಎಂ.ಜಿ. ಪರಮೇಶ್ವರ ಗೌಡ, ವಕೀಲ ಕೆ.ಎನ್. ಹಳ್ಳಿ ನಾಗನಗೌಡ, ಪ್ರಗತಿಪರ ಕೃಷಿಕ ಕುಂದೂರು ಮಂಜಪ್ಪ ಮಾತನಾಡಿದರು.

ಗ್ರಾಮದ ಹಿರಿಯ ಮುತ್ಸದ್ಧಿ ಎನ್.ಜಿ. ನಾಗನಗೌಡ್ರು ಸಮಾರಂಭವನ್ನು ಉದ್ಘಾಟಿಸಿದರು. ಗ್ರಾ.ಪಂ. ಅಧ್ಯಕ್ಷ ಬಂಡೇರ ಪ್ರಭು ಅಧ್ಯಕ್ಷತೆ ವಹಿಸಿದ್ದರು.

ಚಾಮರಾಜನಗರ ಶ್ರೀ ಶಿವಮೂರ್ತಿ ಸ್ವಾಮೀಜಿ, ಜಿಲ್ಲಾ ಜನ ಜಾಗೃತಿ ವೇದಿಕೆಯ ಉಪಾಧ್ಯಕ್ಷ ಕೊಮಾರನಹಳ್ಳಿಯ ಜಿ. ಮಂಜುನಾಥ್ ಪಟೇಲ್, ಸದಸ್ಯರಾದ ಜಿಗಳಿ ಪ್ರಕಾಶ್, ಕೊಕ್ಕನೂರಿನ ಹನುಮಂತರಾಯ, ಮಲೇಬೆನ್ನೂರಿನ ನಂದಿ ಬ್ಯಾಂಕ್ ಮಾಜಿ ಅಧ್ಯಕ್ಷ ಬಿ. ವೀರಯ್ಯ, ಗ್ರಾ.ಪಂ. ಸದಸ್ಯ ಹೊಸಳ್ಳಿ ನಾಗಪ್ಪ ಹಾ.ಉ. ಸಂಘದ ಅಧ್ಯಕ್ಷ ಬ್ಯಾಲದಹಳ್ಳಿ ಶಿವಕುಮಾರ್, ಮಾಜಿ ಯೋಧ ಪರಶುರಾಮ್, ಎನ್.ಜಿ. ಮಹಾಂತೇಶ್, ಕೆ.ಎನ್. ಹಳ್ಳಿಯ ಜಿ.ಕೆ. ಶಿವರಾಜ್, ಸಾಹಿತಿ ಪಾಳ್ಯದ ನಾಗೇಂದ್ರಪ್ಪ ಸೇರಿದಂತೆ ಹೊಳೆಸಿರಿಗೆರೆ ವಲಯದ ಒಕ್ಕೂಟ ಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಈ ವೇಳೆ ಗ್ರಾಮದ ಹಿರಿಯರಾದ ಮಾಗೋಡ್ ನಂಜುಂಡಪ್ಪ, ಮಹಾದೇವಮ್ಮ, ವಿದ್ಯಾರ್ಥಿ ಚಿರಂಜೀವಿ ಅವರನ್ನು ಗೌರವಿಸಲಾಯಿತು. ಕು. ವರ್ಷಿಣಿ ಯ. ಭರತ ನಾಟ್ಯ ಎಲ್ಲರ ಮನಸೂರೆಗೊಂಡಿತು.

ವಲಯ ಮೇಲ್ವಿಚಾರಕ ರಂಗಸ್ವಾಮಿ ಅವರು ವಲಯದ ಪ್ರಗತಿ ವರದಿಯನ್ನು ಓದಿ ತಿಳಿಸಿದರು.

ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿ ವಸಂತ್ ದೇವಾಡಿಗ ಸ್ವಾಗತಿಸಿದರು. ಗಂಗಾಧರ್ ಪೂಜಾರ್ ವಂದಿಸಿದರು.

# ಸ್ನೇಹ ಪವಿತ್ರತೆಯ ಸೂಚಕ ರಾಖಿ






**'ಮನಸ್ಸಿನ ಭಾವನೆಯ ಹಬ್ಬವಾಗಿದೆ ರಾಖಿ, ಪರಮಪಿತನ ರಕ್ಷಣೆಯ ಸಂಕೇತವಾಗಿದೆ ರಾಖಿ, ಪವಿತ್ರತೆಯ ಕೊಡುಗೆಯಾಗಿದೆ ರಾಖಿ, ಶ್ರೇಷ್ಠ ನಡವಳಿಕೆಯ ಆಧಾರವಾಗಿದೆ ರಾಖಿ.'**

ಹಬ್ಬಗಳ ತವರೂರಾದ ಭಾರತ ದೇಶದಲ್ಲಿ ಹಬ್ಬ ಹರಿದಿನಗಳಿಂದ ಕೂಡಿದ ಶ್ರಾವಣ ಮಾಸಕ್ಕೆ ವಿಶೇಷ ಮಹತ್ವ ಇದೆ. ಶ್ರವಣ, ಪೂಜಾ-ಪಾಠಗಳು, ಧ್ಯಾನ-ಧಾರಣೆಗಳು, ಚಿಂತನೆಗಳ ಮಾಸವೇ ಶ್ರಾವಣ. ನಾಗಚೌತಿ, ನಾಗಪಂಚಮಿ, ಶ್ರಾವಣ ಸೋಮವಾರ, ಶ್ರಾವಣ ಶುಕ್ರವಾರ, ಗೋಕುಲಾಷ್ಟಮಿ, ನೂಲಹುಣ್ಣಿಮೆ, ಹೀಗೆ ಪ್ರತಿದಿನವು ಹಬ್ಬ. ಈ ಎಲ್ಲ ಹಬ್ಬಗಳಲ್ಲಿ "ನೂಲಹುಣ್ಣಿಮೆ" ಅಥವಾ 'ರಕ್ಷಾಬಂಧನ' ಒಂದು ಪ್ರಮುಖ ಹಬ್ಬ.

ರಕ್ಷಾ ಬಂಧನ ಭಾರತದ ಸಂಸ್ಕೃತಿ ಮತ್ತು ಮಾನವೀಯ ಮೌಲ್ಯಗಳನ್ನು ಎತ್ತಿ ತೋರಿಸುವ, ಅನೇಕ ಆಧ್ಯಾತ್ಮಿಕ ರಹಸ್ಯಗಳನ್ನು ಬೆಳಗಿಸುವ ಮತ್ತು ಸಾರ್ವತ್ರಿಕ ಸಹೋದರ-ಸಹೋದರಿ ಸಂಬಂಧವನ್ನು ನಮಗೆ ನೆನಪಿಸುವ ಕೊಡುಗೆಯಾಗಿದೆ. ರಾಖಿ ಕಟ್ಟುವ ಮೊದಲು, ಸಹೋದರಿಯು ಅಣ್ಣನ ಹಣೆಯ ಮೇಲೆ ಶ್ರೀಗಂಧದ ತಿಲಕವನ್ನು ಇಡುತ್ತಾಳೆ. ಇದು ಶುದ್ಧ, ಶೀತಲ ಮತ್ತು ಪರಿಮಳಯುಕ್ತ ಜೀವನವನ್ನು ನಡೆಸಲು ಪ್ರೇರೇಪಿಸುತ್ತದೆ. ಬಲಗೈಯಿಂದ ತಿಲಕ ಮತ್ತು ರಾಖಿಯನ್ನೂ ಕಟ್ಟಲಾಗುತ್ತದೆ. ಈ ವಿಧಾನವು ಯಾವಾಗಲೂ ಸರಿ(ರೈಟ್) ಯಾಗಿ ಯೋಚಿಸಲು ಮತ್ತು ಸರಿ(ರೈಡ್) ಯಾಗಿ ಮಾಡಲು, ಅಂದರೆ ಉತ್ತಮ ಕಾರ್ಯಗಳನ್ನು ಮಾಡಲು ಪ್ರೇರಣೆ ನೀಡುತ್ತದೆ. ಋಣಾತ್ಮಕ ಪರಿಣಾಮಗಳಿಂದ ವ್ಯಕ್ತಿಯು ದು:ಖ ಮತ್ತು ಸಂಕಟಗಳಿಂದ ಸುರಕ್ಷಿತವಾಗಿರುತ್ತಾನೆ. ರಾಖಿಯು ಕಟ್ಟಿದ ನಂತರ ಸಿಹಿಯನ್ನು ನೀಡಲಾಗುತ್ತದೆ, ಇದರ ಹಿಂದೆ ಪರಸ್ಪರ ಸಂಬಂಧಗಳನ್ನು ಮಧುರಗೊಳಿಸುವ ರಹಸ್ಯ ಅಡಗಿದೆ.

ಭಾರತಿಯರು ನಾವು ವಿದೇಶಿಯರ ಅನುಕರಣೆಯಿಂದ ನಮ್ಮ ನಿಜವಾದ ಸಂಸ್ಕೃತಿಯನ್ನು ಮರೆತು ಸ್ನೇಹ ಆತ್ಮೀಯತೆಯಿಂದ ದೂರ ಹೋಗುತ್ತಿದ್ದೇವೆ. ಕಾಮುಕ ವೃತ್ತಿಯಿಂದ ಅನೇಕ ನಾರಿಯರು ಇವತ್ತು ಅತ್ಯಾಚಾರ ಅನ್ಯಾಯಕ್ಕೆ ಬಲಿ ಆಗುತ್ತಿದ್ದಾರೆ. ಆಧುನಿಕತೆಯ ವೇಷದಲ್ಲಿ ಸಮಾಜವು ಅಧೋಗತಿಗೆ ಹೋಗುತ್ತಿದೆ. ಪವಿತ್ರತೆಯ ಆಧಾರದಿಂದ ಈ ಪರಿಸ್ಥಿತಿಯನ್ನು ಬದಲಾಯಿಸಬಹುದು. ಪುರುಷರು ನಾರಿಯರನ್ನು ನೋಡುವ ದೃಷ್ಠಿಯು ಪರಿವರ್ತನೆ ಆಗಬೇಕು. ಅವರನ್ನು ಸಬಲೆಯ ರೂಪದಲ್ಲಿ, ದೇವಿಯ ರೂಪಗಳಾದ ಶಕ್ತಿ, ಮಹಾಕಾಳಿ, ದುರ್ಗಾ ಮುಂತಾದ ರೂಪಗಳಲ್ಲಿ ಕಾಣಬೇಕು. 'ಯತ್ರ ನಾರಿಸ್ಯ ಪೂಜ್ಯಂತೆ ರಮಂತೆ ತತ್ರ ದೇವತ:' ಎಂದು ಹೇಳಿಕೆಯನ್ನು ಸಾಕಾರ ಗೊಳಿಸಬೇಕು. ರಕ್ಷಾಬಂಧನ ಹಬ್ಬವು ಪ್ರಾಚೀನ ಕಾಲದಿಂದ ನಡೆದು ಬಂದ ಹಬ್ಬವಾಗಿದ್ದು ವಿಶ್ವಕ್ಕೆ ಸ್ನೇಹ ಮತ್ತು ಮಮತೆಯ ಸಂದೇಶ ನೀಡುತ್ತದೆ. 4-5 ನಿಮಿಷಗಳಲ್ಲಿ ಮುಗಿಯುವ ರಾಖಿ ಕಟ್ಟುವ ಈ ಕಾರ್ಯಕ್ರಮ ಸೋದರ-ಸೋದರಿಯ ಸಂಬಂಧವನ್ನು ಗಟ್ಟಿಗೊಳಿಸುತ್ತದೆ. ಈ ಮಧುರ ಸಂಬಂಧ ಉಸಿರು ಇರುವವರೆಗೂ ಇರುತ್ತದೆ. ಕಟ್ಟಿರುವ ದಾರ ಹೋದರೂ ಹೃದಯದಲ್ಲಿ ಇರುವ ಸ್ನೇಹ ದೃಢವಾಗಿರುತ್ತದೆ.

ಸಂಕಟದ ಸಮಯದಲ್ಲಿ ಮಾನವರೆಲ್ಲರೂ ನಾನಾ ಪ್ರಕಾರದ ರಕ್ಷಣೆಯನ್ನು ಬಯಸುತ್ತಾರೆ. 1)ತನುವಿನ ರಕ್ಷಣೆ, 2)ಮನಸ್ಸಿನ ರಕ್ಷಣೆ, 3)ಧನದ ರಕ್ಷಣೆ, 4)ಧರ್ಮ ಪವಿತ್ರತೆಯ ಅಥವಾ ಸತೀತ್ವದ ರಕ್ಷಣೆ, 5) ಆಪತ್ತುಗಳು ಹಾಗೂ ಸಂಕಟಗಳಿಂದ ರಕ್ಷಣೆ, 6)ಕಾಲ ಅಥವಾ ಮೃತ್ಯುವಿನ ಪಾಶದಿಂದ ರಕ್ಷಣೆ – ಇವು ಮುಖ್ಯವಾದವು. ಮೃತ್ಯುವು ಸನ್ನಿಹಿತವಾದಾಗ ನಿಗದಿಯಾಗಿರುವ ಮೃತ್ಯುವಿನಿಂದ ರಕ್ಷಿಸಲು ಯಾರಿಂದಲೂ ಸಾಧ್ಯವಾಗುವುದಿಲ್ಲ. ಮನಸ್ಸಿನ ರಕ್ಷಣೆಯನ್ನು ಮಾಯೆಯ ಬಂಧನಗಳಿಂದ ಅಥವಾ ತಾಮಸಿಕ ವಿಕಾರಗಳಿಂದ ಮುಕ್ತನಾಗಲು ಭಗವಂತನಿಗೆ ಶರಣು ಹೋಗಬೇಕಾಗುತ್ತದೆ. ಆದ್ದರಿಂದಲೇ ವಿಷಯ ವಿಕಾರಗಳನ್ನು ನಾಶಮಾಡು, ಪಾಪವನ್ನು ಹರಿಸು ಎಂದು ಪತಿತಪಾವನ, ಪಾಪಕಟೇಶ್ವರನಾದ ಪರಮಾತ್ಮನಿಗೆ ಪ್ರಾರ್ಥನೆ ಮಾಡುತ್ತಾರೆ. ಧರ್ಮದ,

ಪವಿತ್ರತೆಯ ಹಾಗೂ ಸತೀತ್ವದ ರಕ್ಷಣೆಯನ್ನು ಸರ್ವಸಮರ್ಥನಾದ ಭಗವಂತ ಒಬ್ಬನೇ ಮಾಡಲು ಸಾಧ್ಯವಿದೆ. ಇದಕ್ಕೆ ದ್ರೌಪದಿಯ ದೃಷ್ಟಾಂತವಿದೆ. ಕಾಲ ಅಥವಾ ಯಮನ ಪಾಶದಿಂದ ಪಾರು ಮಾಡುವವನು, ಕಾಲರಕಾಲ ಮಹಾಕಾಲ ಮಹಾಕಾಳೇಶ್ವರನೇ ಆಗಿದ್ದಾನೆ. ಯಾರನ್ನು ಈಶ್ವರನು ರಕ್ಷಣೆ ಮಾಡುತ್ತಾನೋ ಅವರಿಗೆ ಇಡೀ ಪ್ರಪಂಚವೇ ವೈರಿಯಾದರೂ ಅವರ ಕೂದಲನ್ನೂ ಕೊಂಕಿಸಲು ಸಾಧ್ಯವಾಗುವುದಿಲ್ಲ. ಇದಕ್ಕೆ ಭಕ್ತ ಮಾರ್ಕಂಡೇಯನ ದೃಷ್ಟಾಂತವಿದೆ. ಸಾಂಸಾರಿಕ ಆಪತ್ತುಗಳು ಅಥವಾ ಲೌಕಿಕ ಸಂಕಟಗಳಿಂದಲೂ ರಕ್ಷಣೆಯನ್ನು ಈಶ್ವರನ ಹೊರತು ಪಡಿಸಿ ಬೇರೆ ಯಾರೂ ಮಾಡಲು ಸಾಧ್ಯವಿಲ್ಲ. ಆದ್ದರಿಂದಲೇ ಅವನಿಗೆ ದುಃಖಹರ, ಸುಖಕರ, ವಿಘ್ನವಿನಾಶಕ ಎಂದು ಕರೆಯುತ್ತಾರೆ.

ಸಕಲಜೀವರಾಶಿಗಳಿಗೆ ಲೇಸನ್ನು ಬಯಸುವ, ಸಬಕಾ ಮಾಲಿಕ್ ಏಕ್ ಆಗಿರುವ, ಸರ್ವರ ರಕ್ಷಕ ಭಗವಂತನ ಜೊತೆಗೆ ಸಂಬಂಧದ ಬಂಧನವೇ ರಕ್ಷಾಬಂಧನ.

ಅವನನ್ನು ತಿಳಿದು, ಅವನನ್ನೇ ನೆನೆಯುತ್ತಾ, ನಾವೆಲ್ಲರೂ ಅವನ ಮಕ್ಕಳು ಎಂದು ನಡೆದಾಗ 'ವಸುಧೈವ ಕುಟುಂಬಕಂ' ಆಗುವುದು. ನಾವೆಲ್ಲರೂ ಭಗವಂತನ ಮಕ್ಕಳು ಸಹೋದರ ಸಹೋದರಿಯರು. ನಮ್ಮ ಪವಿತ್ರ ಸ್ನೇಹದ ಸೂಚಕವೇ ರಾಖಿ.

ಮಸ್ತಕದಲ್ಲಿ ಇಡುವ ತಿಲಕ ಆತ್ಮಜ್ಯೋತಿಯ ಪ್ರತೀಕ, ಬಾಯಿ ಸಿಹಿ ಮಾಡುವುದೆಂದರೆ ಮಧುರವಾದ ನುಡಿಗಳನ್ನು ನುಡಿಯುವುದು, ರಾಖಿಯಲ್ಲಿ ಇರುವ ದಾರವು ನಿಯಮ ಹಾಗು ಸಂಯಮದ ಸೂಚಕ, ದುರ್ಗುಣ, ದುಶ್ಚಟಗಳನ್ನು ಬಿಡುವುದು ಕಾಣಿಕೆಯ ಅರ್ಥವಾಗಿದೆ. ಹಾಗಾದರೆ ಬನ್ನಿ ನಾವೆಲ್ಲರೂ ಶ್ರೀರಕ್ಷೆಯಲ್ಲಿ ಬಂಧಿತರಾಗಿ ಇತರ ಅನೇಕ ಬಂಧನಗಳನ್ನು ಸ್ನೇಹದ ಸಂಬಂಧದಲ್ಲಿ ಪರಿವರ್ತಿಸಿ, ಜಾತಿ, ಮತ, ಭಾಷೆ. ಭೇದಗಳನ್ನು ಮರೆತು ಸಹೋದರತ್ವದ ಭಾವನೆಯಿಂದ ಜೀವನದಲ್ಲಿ ಸುಖ-ಶಾಂತಿಯನ್ನು ಪಡೆಯೋಣ.

-ವಿಶ್ವಾಸ. ಸೋಹೋನಿ.
ಬ್ರಹ್ಮಾಕುಮಾರಿಸ್, ಮೀಡಿಯಾ ವಿಂಗ್,
9483937106

# 24 ಗಂಟೆಗಳ ನೀರಿನ ಸರಬರಾಜು ಹೊಂದಿದ ಗ್ರಾಮ



**ಹಾಸನ :** ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಬಿ.ಆರ್ ಪೂರ್ಣಿಮಾಅವರುಸಕಲೇಶಪುರತಾಲ್ಲೂಕಿನ ಬೀರದಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯದೊಡ್ಡನಗರಗ್ರಾಮವನ್ನು 24/7 ನೀರಿನ ಸರಬರಾಜು ಹೊಂದಿದಗ್ರಾಮವಾಗಿಅಧಿಕೃತವಾಗಿ ಘೋಷಿಸಿದರು.

ಸಮಾರಂಭದಲ್ಲಿ ಮಾತನಾಡಿದಅವರ 'ದೊಡ್ಡನಗರವನ್ನು ಸತತ 24 ಗಂಟೆಗಳ ನೀರಿನ ಸರಬರಾಜುಇರುವಗ್ರಾಮವಾಗಿ ಘೋಷಿಸುವುದುಅತ್ಯಂತ ಹೆಮ್ಮೆ ಮತ್ತು ಸಂತಸದಕ್ಷಣವಾಗಿದೆ ಎಂದ ಅವರು, ಇದೊಂದು ಮಾದರಿಯಾಗಿದ್ದು, ಜಿಲ್ಲೆಯಎಲ್ಲಾ ಗ್ರಾಮಗಳನ್ನೂ ಇಂತಹ 24/7 ನೀರಿನ ಸರಬರಾಜುಳ್ಳ ಗ್ರಾಮಗಳಾಗಿ ಪರಿವರ್ತಿಸಲುತಾವು ನಿರೀಕ್ಷಿಸುತ್ತಿರುವುದಾಗಿ ತಿಳಿಸಿದರು.ಗ್ರಾಮಸ್ಥರಿಗೆ ನೀರನ್ನುಜವಾಬ್ದಾರಿಯಿಂದ ಬಳಸುವಂತೆ ಮನವಿ ಮಾಡಿ, ಜಲಜೀವನ ಮಿಷನ್‌ಯೋಜನೆಯ ಲಾಭವನ್ನು ದುರ್ಬಳಕೆ ಮಾಡದಂತೆಎಚ್ಚರಿಕೆ ನೀಡಿದರಲ್ಲದೆ, ನೀರನ್ನುಅಗತ್ಯವಿರುವಷ್ಟು ಮಾತ್ರ ಬಳಸಬೇಕು ಮತ್ತುಇತರರಿಗೂ ಈ ಮೂಲಸೌಕರ್ಯ ಲಭ್ಯವಾಗುವಂತೆ, ನೀರಿನ ಸಂರಕ್ಷಣೆ ಮಾಡುವಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆಎಂಬುದನ್ನುಅವರು ನೆನಪಿಸಿದರು.

ಜಲಜೀವನ ಮಿಷನ್ (ಎಎಚ) ಯೋಜನೆಯ ಮೊದಲು, ಈ ಗ್ರಾಮದಜನರು ನೀರಿಗಾಗಿಎದುರಿಸುತ್ತಿದ್ದ ಸಂಕಷ್ಟಗಳನ್ನು ಹಂಚಿಕೊಂಡರು. ಯೋಜನೆಯ ಯಶಸ್ವಿ ಅನುಷ್ಠಾನದಿಂದ ಈಗ ಪ್ರತಿಯೊಬ್ಬರ ಮನೆಬಾಗಿಲಿಗೆ ನೀರುತಲುಪುತ್ತಿರುವುದಾಗಿ ತಿಳಿಸಿದರಲ್ಲದೆ,ಇದುಎಷ್ಟು ಸಂತೋಷದ ಹಾಗೂ ಗೌರವದಕ್ಷಣಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಹಾಸನ ಜಿಲ್ಲಾಕಾರ್ಯಪಾಲಕಅಭಿಯಂತರರು, ಸಕಲೇಶಪುರ ಸಹಾಯಕಕಾರ್ಯಪಾಲಕಅಭಿಯಂತರರು, ಸಕಲೇಶಪುರದ 'ಕಾರ್ಯನಿರ್ವಾಹಕಅಧಿಕಾರಿ ಹಾಗೂ ಸಹಾಯಕ ನಿರ್ದೇಶಕರು, ಗ್ರಾಮ ಪಂಚಾಯತ್‌ಅಧ್ಯಕ್ಷರು ಮತ್ತುಉಪಾಧ್ಯಕ್ಷರು, ಕಆಔ,ಆಖಖಗತಂಡ ಹಾಗೂ ಗ್ರಾಮದ ಹಲವು ನಾಗರಿಕರು ಉಪಸ್ಥಿತರಿದ್ದರು.

# ಬೆಳೆ ವಿಮೆ ನೋಂದಣಿ ಅವಧಿ ವಿಸ್ತರಣೆ

**ಶಿವಮೊಗ್ಗ:** ಜಿಲ್ಲೆಯಲ್ಲಿ 2025-26 ನೇ ಸಾಲಿನ ಹವಾಮಾನಾಧಾರಿತ ಬೆಳೆಗಳಾದ ಅಡಿಕೆ, ಕಾಳುಮೆಣಸು, ಮಾವು, ಮತ್ತು ಶುಂಠಿ ಬೆಳೆಗಳಿಗೆ ನೀಡುವ ವಿಮೆಯ ನೋಂದಣಿಯ ಅವಧಿಯನ್ನು ಆಗಸ್ಟ್ 14 ರವರೆಗೆ ಮತ್ತು ಸಾಲ ಪಡೆದ ರೈತರುಗಳಿಗೆ ಆಗಸ್ಟ್ 30 ರವರೆಗೆ ವಿಸ್ತರಿಸಲಾಗಿದೆ. ಸರ್ಕಾರದ ಆದೇಶದಂತೆ ಜುಲೈ 31 ಕ್ಕೆ ನಿಗದಿಯಾಗಿದ್ದ ನೋಂದಣಿ ಅವಧಿಯನ್ನು ವಿಸ್ತರಿಸಲಾಗಿದೆ. ಸಾಲವನ್ನು ಪಡೆಯದ ರೈತರುಗಳಿಗೆ ಬೆಳೆ ವಿಮೆ ಮಾಡಿಕೊಳ್ಳಲು ಆಗಸ್ಟ್ 14 ಕೊನೆಯ ದಿನವಾಗಿರುತ್ತದೆ. ಮತ್ತು ಸಾಲವನ್ನು ಪಡೆದ ರೈತರುಗಳಿಗೆ ಬೆಳೆ ವಿಮೆ ನೋಂದಣಿಯನ್ನು ಮಾಡಿಕೊಳ್ಳಲು ಆಗಸ್ಟ್ 30 ಕೊನೆಯ ದಿನವಾಗಿರುತ್ತದೆ.

# ಬಾಳೆಬರೆ ಘಾಟಿಯಲ್ಲಿ ಭಾರಿ ವಾಹನ ಸಂಚಾರ ತಾತ್ಕಾಲಿಕ ನಿಷೇಧ

**ಶಿವಮೊಗ್ಗ:** ತೀರ್ಥಹಳ್ಳಿ ಕುಂದಾಪುರ ರಾಜ್ಯ ಹೆದ್ದಾರಿ 52 ಬಾಳೆಬರೆ ಘಾಟ್ ಸರಪಳಿ ಹೇರ್‌ಪಿನ್ ತಿರುವಿನಲ್ಲಿ ಮಣ್ಣಿನ ಕುಸಿತ ಉಂಟಾಗಿದ್ದು, ಮಳೆ ಚುರುಕುಗೊಂಡಿದ್ದು ಮತ್ತೆ ಮಣ್ಣು ಕುಸಿಯುವ ಸಂಭವವಿದ್ದು, ಸುರಕ್ಷಿತಾ ದೃಷ್ಠಿಯಿಂದ (ಮಾಸ್ತಿಕಟ್ಟೆಯಿಂದ ಹೊಸಂಗಡಿಯವರೆಗೆ) ತಾತ್ಕಾಲಿಕವಾಗಿ ಮಳೆಗಾಲ ಮುಗಿಯುವವರೆಗೆ ಭಾರಿ ವಾಹನಗಳ ಸಂಚಾರವನ್ನು ನಿಷೇಧಗೊಳಿಸಿ ಪರ್ಯಾಯ ಮಾರ್ಗದಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆದೇಶ ನೀಡಿದ್ದಾರೆ.

ತೀರ್ಥಹಳ್ಳಿಯಿಂದ ರಾವೆ- ಕಾನಗೋಡು-ಮಾಸ್ತಿಕಟ್ಟೆ- ಹುಲಿಕಲ್ ಘಾಟ್- ಹೊಸಂಗಡಿ -ಸಿದ್ದಾಪುರ ಮೂಲಕ ಕುಂದಾಪುರದ ಕಡೆಗೆ ಹೋಗುವ ಭಾರಿ ವಾಹನಗಳು ತೀರ್ಥಹಳ್ಳಿ-ರಾವೆ-ಕಾನುಗೋಡು-ನಗರ-ಕೊಲ್ಲೂರು-ಕುಂದಾಪುರ ರಸ್ತೆ ಮೂಲಕ ಸಂಚರಿಸುವುದು.

ನಗರ ಸಿದ್ದಾಪುರ ರಾಜ್ಯ ಹೆದ್ದಾರಿ-278 ರಸ್ತೆ ತೀರ್ಥಹಳ್ಳಿಯಿಂದ ಯಡೂರು-ಸುಳಗೋಡು-ಮಾಸ್ತಿಕಟ್ಟೆ-ಹುಲಿಕಲ್ ಘಾಟ್-ಹೊಸಂಗಡಿ-ಸಿದ್ದಾಪುರ ಮೂಲಕ ಕುಂದಾಪುರದ ಕಡೆಗೆ ಹೋಗುವ ಭಾರಿ ವಾಹನಗಳು ತೀರ್ಥಹಳ್ಳಿ-ಯಡೂರು-ವಾಸ್ತಿಕಟ್ಟೆ-ಕಾನುಗೋಡು-ನಗರ-ಕೊಲ್ಲೂರು-ಕುಂದಾಪುರ ರಸ್ತೆ ಮೂಲಕ ಸಂಚರಿಸುವುದು.

ಶಿವಮೊಗ್ಗ/ಸಾಗರ ಕಡೆಯಿಂದ ಹೊಸನಗರ-ನಗರ-ಮಾಸ್ತಿಕಟ್ಟೆ-ಹುಲಿಕಲ್ ಘಾಟ್-ಹೊಸಂಗಡಿ-ಸಿದ್ದಾಪುರ ಮೂಲಕ ಕುಂದಾಪುರದ ಕಡೆ ಹೋಗುವ ಭಾರಿ ವಾಹನಗಳು ಶಿವಮೊಗ್ಗ ಹೊನ್ನಾವರ ರಾಷ್ಟ್ರೀಯ ಹೆದ್ದಾರಿ ಮೂಲಕ ಹೊನ್ನಾವರ ಆನಂತರ ಹೊನ್ನಾವರದಿಂದ ಭಟ್ಕಳ-ಬೈಂದೂರು-ಕುಂದಾಪುರ ರಸ್ತೆಯ ಮೂಲಕ ಸಂಚರಿಸುವಂತೆ ಆದೇಶ ಹೊರಡಿಸಿದ್ದಾರೆ.

# ಬೇಕರಿ ಉತ್ಪನ್ನಗಳ ಕುರಿತು ಕೌಶಲ್ಯಾಭಿವೃದ್ಧಿ ತರಬೇತಿ

**ಶಿವಮೊಗ್ಗ:** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ಆಗಸ್ಟ್ 18 ರಿಂದ ಸೆ. 16 ರವರೆಗೆ 1 ತಿಂಗಳು ಶಿವಮೊಗ್ಗ ಕೃಷಿ ಮಹಾವಿದ್ಯಾಲಯ ಆವರಣದ ಬೇಕರಿ ಘಟಕದಲ್ಲಿ ವಿವಿಧ ಬೇಕರಿ ಉತ್ಪನ್ನಗಳಾದ ಬೆಣ್ಣೆ ಬಿಸ್ಕತ್ತು, ಕೋಕೋನಟ್ ಕುಕಿಸ್, ಕೋಕೊನಟ್ ಬಿಸ್ಕತ್ತು, ಮಸಾಲ ಬಿಸ್ಕತ್ತು, ಕೋಕೊನಟ್ ಕ್ಯಾಸಲ್ಸ, ಫ್ರುಟ್ ಕೇಕ್, ಸ್ಪಾಂಜ್‌ಕೇಕ್, ಜೆಲ್‌ಕೇಕ್, ಬಟರ್ ಐಸಿಂಗ್, ಮಿಲ್ಕ ಬ್ರೆಡ್, ಪಫ್‌ಪೇಸ್ಟ್ರಿ, ದಿಲ್ ಪಸಂದ್, ಬಾಂಬೆ ಕಾರ ಹಾಗೂ ಇತರೆ ಬೇಕರಿ ಉತ್ಪನ್ನಗಳ ತಯಾರಿಕೆಯ ಬಗ್ಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಆಯೋಜಿಸಿದೆ.

ಆಕಸ್ತರು ತರಬೇತಿ ಶುಲ್ಕ ರೂ. 4500/-ಗಳನ್ನು ಪಾವತಿಸಿ, ಆ.16 ರೊಳಗಾಗಿ ದೂರವಾಣಿ ಮೂಲಕ ಅಥವಾ ಖುದ್ದಾಗಿ ಕೃಷಿ ಮಹಾವಿದ್ಯಾಲಯವನ್ನು ಸಂಪರ್ಕಿಸಿ ಹೆಸರನ್ನು ನೋಂದಾಯಿಸಿಕೊಳ್ಳುವಂತೆ ಕೃಷಿ ಮತ್ತು ತೋಟಗಾರಿಕೆ ಮಹಾವಿದ್ಯಾಲಯದ ಪ್ರೊಫೆಸರ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ನೋಂದಾವಣೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಡಾ. ಜಯಶ್ರೀ ಎಸ್. -9449187763 ಮತ್ತು ಜಯಶಂಕರ-9686555897 ಇವರುಗಳನ್ನು ಸಂಪರ್ಕಿಸುವುದು.

# ನನ್ನ ರೇಷ್ಮೆ ನನ್ನ ಹೆಮ್ಮೆ ಅಭಿಯಾನ

## ರೇಷ್ಮೆ ಬೆಳೆಗಾರರಿಗೆ ತಂತ್ರಜ್ಞಾನದ ಅಭಿಯಾನ

**ದಾವಣಗೆರೆ :** ನನ್ನ ರೇಷ್ಮೆ ನನ್ನ ಹೆಮ್ಮೆ ಎಂಬ ಮಹಾ ತಂತ್ರಜ್ಞಾನ ಹಂಚಿಕೆ ಅಭಿಯಾನವನ್ನು ಕೇಂದ್ರ ರೇಷ್ಮೆ ಮಂಡಳಿಯಿಂದ ದೇಶವ್ಯಾಪ್ತಿ ಅಭಿಯಾನ ಆರಂಭಿಸಿದೆ ಎಂದು ರೇಷ್ಮೆ ಇಲಾಖೆ ಉಪನಿರ್ದೇಶಕ ಪಿ.ಎಲ್.ಚಂದ್ರಪ್ಪ ತಿಳಿಸಿದ್ದಾರೆ.

ಕೇಂದ್ರ ರೇಷ್ಮೆ ಮಂಡಳಿಯಿಂದ ಅಭಿವೃದ್ಧಿಪಡಿಸಲಾದ ಅತ್ಯಾಧುನಿಕ ತಂತ್ರಜ್ಞಾನಗಳು ಲಭ್ಯವಿದ್ದರೂ ಸಹ, ರೇಷ್ಮೆ ಕೃಷಿಯಲ್ಲಿ ನಿರತರಾಗಿರುವ ರೈತರು ಇನ್ನೂ ಹಳೆಯ ಪದ್ಧತಿಗಳ ಮೇಲೆ ಅವಲಂಭಿತರಾಗಿದ್ದಾರೆ. ಇದಕ್ಕೆ ಪ್ರಮುಖ ಕಾರಣ ತಂತ್ರಜ್ಞಾನಗಳ ಬಗ್ಗೆ ಪರಿಚಯದ ಕೊರತೆ.

ಈ ಅಂತರವನ್ನು ದೂರ ಮಾಡುವ ಉದ್ದೇಶದಿಂದ ಈ ಅಭಿಯಾನದಡಿಯಲ್ಲಿ ಕೇಂದ್ರ ರೇಷ್ಮೆ ಸಂಶೋಧನಾ ಮತ್ತು ತರಬೇತಿ ಸಂಸ್ಥೆ, ಮೈಸೂರಿನಲ್ಲಿ ಅಭಿವೃದ್ಧಿಪಡಿಸಲಾದ ನೂತನ ತಂತ್ರಜ್ಞಾನಗಳನ್ನು ಫಲಪ್ರದವಾಗಿ ಅನುಷ್ಟಾನಗೊಳಿಸಲು ದಾವಣಗೆರೆ ಜಿಲ್ಲೆಯನ್ನು ಆಯ್ಕೆ ಮಾಡಲಾಗಿದೆ. ಸಿಎಆರ್‌ಟಿಐ ವಿಜ್ಞಾನಿಗಳು ಮತ್ತು ರಾಜ್ಯ ರೇಷ್ಮೆ ಇಲಾಖೆಯ ಸಹಯೋಗದೊಂದಿಗೆ ಈ ಕಾರ್ಯಕ್ರಮ



ಅನುಷ್ಟಾನಗೊಳಿಸಲಾಗುತ್ತಿದೆ. ವಿಜ್ಞಾನಿ ಡಾ. ಮಂಜಪ್ಪ ಅವರನ್ನು ದಾವಣಗೆರೆ ಜಿಲ್ಲಾ ಸಂಯೋಜಕರಾಗಿ ನೇಮಕ ಮಾಡಲಾಗಿದೆ. ಅವರು ಜಿಲ್ಲೆಯಲ್ಲಿ ಎಂಟು ತಂತ್ರಜ್ಞಾನ ವಿಸ್ತರಣಾ ಕಾರ್ಯಕ್ರಮಗಳನ್ನು ನಡೆಸಲಿದ್ದಾರೆ.

ಈ ಚಟುವಟಿಕೆಯ ಭಾಗವಾಗಿ, ಆಗಸ್ಟ್ 5 ರಂದು ದಾವಣಗೆರೆ ತಾಲ್ಲೂಕಿನ ಕರಿಲಕ್ಕೆನಹಳ್ಳಿಯಲ್ಲಿ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. 43 ರೇಷ್ಮೆ ಬೆಳೆಗಾರರಿಗೆ ನೂತನ ತಂತ್ರಜ್ಞಾನಗಳು, ಉತ್ತಮ ಗುಣಮಟ್ಟದ ಮಲ್ಬರಿ ಸೊಪ್ಪನ್ನು ಉತ್ಪಾದಿಸಲು ರೈತರು ಅನುಸರಿಸಬೇಕಾದ ತಂತ್ರಜ್ಞಾನಗಳಾದ ಮಣ್ಣಿನ ಪರೀಕ್ಷೆ, ಹನಿ ನೀರಾವರಿ, ಸಾವಯವ ಗೊಬ್ಬರಗಳ ಬಳಕೆ,

ಹೊಸ ಹಿಪ್ಪುನೇರಳೆ ತಳಿ, ಹಿಪ್ಪುನೇರಳೆ ಬೆಸಾಯ ಪದ್ದತಿ, ಹಿಪ್ಪುನೇರಳೆಗೆ ಮತ್ತು ರೇಷ್ಮೆ ಹುಳುವಿಗೆ ತಗುಲುವ ಪೀಡೆಗಳು ಮತ್ತು ರೋಗಗಳು, ಅವುಗಳ ನಿರ್ವಹಣೆ ವಿಷಯಗಳ ಕುರಿತು ಮಾಹಿತಿ ನೀಡಲಾಯಿತು.

ಆಗಸ್ಟ್ 6 ರಂದು ಹೊನ್ನಾಳಿ ತಾಲ್ಲೂಕಿನ ಮದನಬಾವಿಯ ಶ್ರೀ ಶೇಖರಪ್ಪ ರೇಷ್ಮೆ ಬೆಳೆಗಾರರ ತೋಟದಲ್ಲಿ ತಂತ್ರಜ್ಞಾನ ಪ್ರದರ್ಶನ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ 37 ರೈತರಿಗೆ ರೇಷ್ಮೆ ಹುಳು ಸಾಕಣೆ ಮನೆಯ ಸ್ವಚ್ಚತೆ, ನುಶಿ, ಬಿಳಿ ನೋಣ ಮತ್ತು ಥ್ರಿಪ್ಸ್ ನುಶಿ ಕ್ರಿಮಿನಾಶಕಗಳ ಸಿಂಪರಣೆ ವಿಧಾನ, ಮಣ್ಣು ಸಂಗ್ರಹಣೆಯ ವಿಧಾನ ಇತ್ಯಾದಿಗಳ ಪ್ರದರ್ಶನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಸಿಎಎಸ್ ಆರ್ ಟಿಐ ವಿಜ್ಞಾನಿ ಡಾ. ಮಂಜಪ್ಪ, ರೇಷ್ಮೆ ಇಲಾಖೆಯ ಉಪನಿರ್ದೇಶಕ ಚಂದ್ರಪ್ಪ ಪಿ. ಎಲ್., ಮತ್ತು ಸಹಾಯಕ ನಿರ್ದೇಶಕ ಡಾ. ಶ್ರಿ ಹರ್ಷ ಎಸ್. ಎ. ರೇಷ್ಮೆ ನಿರೀಕ್ಷಕರಾದ ಪ್ರದೀಪ್.ಸಿ ಅವರು ರೇಷ್ಮೆ ತಂತ್ರಜ್ಞಾನಗಳ ಬಗ್ಗೆ ರೈತರಿಗೆ ವಿವರವಾಗಿ ಮಾಹಿತಿ ನೀಡಿದರು.

ಮೆರೆ ರೇಷಂ ಮೆರೆ ಅಭಿಮಾನ್" ಅಭಿಯಾನ ರೈತರು ಮತ್ತು ಸಂಶೋಧನಾ ಸಂಸ್ಥೆಗಳ ನಡುವಿನ ಅಂತರವನ್ನು ಕಡಿಮೆ ಮಾಡುವುದರೊಂದಿಗೆ, ರೇಷ್ಮೆ ಕೃಷಿಯಲ್ಲಿ ನವೀನತೆಗಳನ್ನು ಪ್ರತ್ಯಕ್ಷವಾಗಿ ರೈತರ ಹೊಲಗಳಿಗೆ ತಲುಪಿಸುವ ಮಹತ್ವದ ಹೆಜ್ಜೆ ಇದಾಗಿದೆ.

# ಅಗಸ್ಟ 15 ರಿಂದ 19 ರವರೆಗೆ ಜಿಲ್ಲಾ ಮಟ್ಟದ ಕೈಗಾರಿಕಾ ವಸ್ತು ಪ್ರದರ್ಶನ

**ಗದಗ :** ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್, ಗದಗ ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಅಗಸ್ಟ 15 ರಿಂದ 19 ರವರೆಗೆ ಶ್ರೀ ಸ್ವಾಮಿ ವಿವೇಕಾನಂದ ಸಭಾ ಭವನ ಹಾಗೂ ಕೆ.ಹೆಚ್.ಪಾಟೀಲ ಸಭಾ ಭವನ, ಗದಗದಲ್ಲಿ ಜಿಲ್ಲಾ ಮಟ್ಟದ ಕೈಗಾರಿಕಾ ವಸ್ತು ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಸದರಿ ವಸ್ತು ಪ್ರದರ್ಶದಲ್ಲಿ ಗ್ರಾಮೀಣ ಸೂಕ್ಷ ☐☐ ಮತ್ತು ಸಣ್ಣ /ಗುಡಿ ಕೈಗಾರಿಕೆಗಳಿಗೆ ವಿಶೇಷವಾಗಿ ಗ್ರಾಮೀಣ ಮತ್ತು ನಗರ ಸ್ವ-ಸಹಾಯ ಗುಂಪುಗಳು ತಯಾರಿಸುವ ಉತ್ಪನ್‌ಗಳಿಗೆ ಪ್ರಚಾರ ನೀಡಿ ಮಾರುಕಟ್ಟೆ ಸೌಲಭ್ಯ ಒದಗಿಸುವ ದೃಷ್ಠಿಯಿಂದ ಈ ವಸ್ತು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ವಸ್ತುಪ್ರದರ್ಶನದಲ್ಲಿ ಕರಕುಶಲ, ಖಾದಿ ಮತ್ತು ಜವಳಿ ಉತ್ಪನಗಳು, ಬಿದಿರು, ಬೆತ್ತದ ಉತ್ಪನಗಳು, ಬ್ಯಾಡಗಿ ಖಾರದ ಪುಡಿ, ಮಸಾಲಾ ಉತ್ಪನಗಳು ಹಾಗೂ ಆಹಾರ ಉತ್ಪನಗಳು, ಗ್ರಾಮೀಣ ಕುಂಬಾರಿಕೆ, ಟೆರಾ ಕೋಟ ಕಟ್ಟಿಗೆಯ ಗೊಂಬೆಗಳು, ಆಟಿಕೆ ಸಾಮಗ್ರಿಗಳು ಮತ್ತು ಅಗರ ಬತ್ತಿ, ರೇಷ್ಮೆ ಕಸೂತಿ ಸೀರೆಗಳು, ಚರ್ಮದ ಉತ್ಪನಗಳು, ಜ್ಯೂಟ ಬ್ಯಾಗ್, ಕಾಟನ್ ಬ್ಯಾಗ ವಿಶೇಷವಾಗಿ ಗದಗ ಶಿಗ್ಲಿ ಮತ್ತು ಗಜೇಂದ್ರಗಡದ ಕೈಮಗ್ಗ ಉತ್ಪನಗಳು ಸಾರ್ವಜನಿಕರ ಪ್ರದರ್ಶನ ಮತ್ತು ಮಾರಾಟಕ್ಕೆ ಲಭ್ಯವಿರುತ್ತದೆ.ವಸ್ತು ಪದರ್ಶನದಲ್ಲಿ ಒಟ್ಟು 35 ಮಳಿಗೆಗಳನ್ನು ಕಾಯ್ದಿರಿಸಲಾಗಿದೆ. ವಸ್ತು ಪ್ರದರ್ಶನವು ಬೆಳಿಗ್ಗೆ 9.30 ರಿಂದ ರಾತ್ರಿ 9.00ರ ವರೆಗೆ ಸಾರ್ವಜನಿಕರು ಭೇಟಿ ನೀಡಬಹುದು. ಈ ವಸ್ತುಪದರ್ಶನದಲ್ಲಿ ಗ್ರಾಮೀಣ ಸೂಕ್ಷ ಮತ್ತು ಸಣ್ಣ / ಗುಡಿ ಕೈಗಾರಿಕೆಗಳು / ಮಹಿಳಾ ಉದ್ಯಮಿಗಳು ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನವನ್ನು ಪಡೆಯಲು ಕೋರಿದೆ.

ಆಸಕ್ತ ಉದ್ಯಮೆದಾರರು ಮಳಿಗೆಯನ್ನು ಪಡೆಯಲು ಉಪ ನಿರ್ದೇಶಕರು (ಗ್ರಾಕೈ) ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಗದಗ ಇವರ ಕಚೇರಿಗೆ ನಿಗದಿತ ನಮೂನೆಯ ಅರ್ಜಿಯನ್ನು ಪಡೆದು ಅಗಸ್ಟ 13 ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್, ಗದಗ ಈ ಕಚೇರಿಯ ಮುಖ್ಯಸ್ಥರನ್ನು ಅಥವಾ ಕಚೇರಿ ದೂರವಾಣಿ ಸಂಖ್ಯೆ: 08372-220506 ಸಂಪರ್ಕಿಸಬಹುದಾಗಿದೆ.

# ಸ್ವಚ್ಚತೆ ಕುರಿತು ಅರಿವು ಮೂಡಿಸುವುದು ಸ್ವಚ್ಚ ಭಾರತ್ ಮಿಷನ್ ಉದ್ದೇಶ

**ಚಿಕ್ಕಮಗಳೂರು:** ನಗರದ ನಾಗರೀಕರಲ್ಲಿ ಸ್ವಚ್ಚತೆ ಬಗ್ಗೆ ಅರಿವು ಮೂಡಿಸುವುದು ಸ್ವಚ್ಚ ಭಾರತ್ ಮಿಷನ್‌ಉದ್ದೇಶವಾಗಿದೆಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರುಇಂದುಆಜಾದ್ ಪಾರ್ಕಿನ ಬಳಿ ನಗರಸಭೆ, ಸ್ವಚ್ಚ ಭಾರತ್ ಮಿಷನ್‌ನ 2.0 ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ಸ್ವಚ್ಚತೆ ಬಗ್ಗೆ ಗೋಡೆಬರಹದ ಮೂಲಕ ಅರಿವು ಮೂಡಿಸುವಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸ್ವಚ್ಚತೆ ಬಗ್ಗೆ ಜಾಗೃತಿ ಮೂಡಿಸಲುಕೇಂದ್ರ ಮತ್ತುರಾಜ್ಯಸರ್ಕಾರ ಹಲವು ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಾರ್ವಜನಿಕರಲ್ಲಿಜಾಗೃತಿ ಮೂಡಿದೆಎಂದು ಶ್ಲಾಘಿಸಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ನಗರಸಭೆಯಿಂದಕೈಗೊಂಡ ಫುಟ್‌ಪಾತ್ ಮೇಲಿನ ವಸ್ತುಗಳ ತೆರವು ಮತ್ತು ಸಂತೆಯಲ್ಲಿ ಸ್ವಚ್ಚತೆಯನ್ನು ಮೂಡಿಸಿದ ಪರಿಣಾಮ ವರ್ತಕರು ಸಹಕರಿಸಿದ್ದಾರೆ. ನಗರದ ಹೊರವಲಯದ ವಾರ್ಡ್‌ಗಳಲ್ಲಿ ಸ್ವಚ್ಚತೆಯಲ್ಲಿ ಹಿಂದಿ ಬಿದ್ದಿದ್ದು, ಈ ಬಗ್ಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಸ ಸಂಗ್ರಹಕ್ಕೆಗುರ್ತಿಸಲಾದ ಸ್ಥಳಗಳಲ್ಲಿ ಸಾರ್ವಜನಿಕರುಕಸವನ್ನು ಹಾಕದೆಎಲ್ಲೆಂದರಲ್ಲಿ ಹಾಕಲಾಗುತ್ತಿದೆ. ಪ್ರತಿದಿನ ಗಂಟೆಗಾಡಿ ಕಸ ಸಂಗ್ರಹ ಮಾಡುತ್ತಿಲ್ಲ ಎಂಬ ದೂರು ನಾಗರೀಕರಿಂದ ಬರುತ್ತಿದ್ದು, ಈ ಬಗ್ಗೆ ನಗರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ಗಮನಹರಿಸಬೇಕೆಂದು ಹೇಳಿದರು.

ಬೀದಿನಾಯಿಗಳ ಉಪಟಳ ಮತ್ತು ಬಿಡಾಡಿ ದನಗಳಿಂದ ಆಗುತ್ತಿರುವತೊಂದರೆಯ ಬಗ್ಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ



ನಡೆಸಿ ಈಗಾಗಲೇ ಅಗತ್ಯ ಮುಂಜಾಗ್ರತಾಕ್ರಮ ವಹಿಸಲಾಗಿದೆ. ಜೊತೆಗೆ ವಿದ್ಯಾರ್ಥಿಗಳಲ್ಲಿ ಸ್ವಚ್ಚತೆಯ ಬಗ್ಗೆ ಅರಿವು ಮೂಡಿಸುವುದುಅಗತ್ಯವಾಗಿದೆಎಂದರು.

ಸಧ್ಯದಲ್ಲೇ ಪರಿಸರ ಉಳಿಸಲು ನಗರದ ಪ್ರತೀ ವಾರ್ಡ್‌ನಲ್ಲಿಜಾಥಾ ನಡೆಸುವ ಮೂಲಕ ಅರಿವು ಮೂಡಿಸಲು ದಿನಾಂಕ ನಿಗದಿಮಾಡುವಂತೆ ಪೌರಾಯುಕ್ತರಿಗೆ ಸೂಚನೆ ನೀಡಿದರು.

ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ಕಳೆದ ನಾಲ್ಕು ವಾರಗಳಿಂದ ಸ್ವಚ್ಚತೆಗೆಆದ್ಯತೆ ನೀಡುವಂತೆ ವರ್ತಕರು ಮತ್ತು ನಾಗರೀಕರಲ್ಲಿ ನಗರಸಭೆಯಿಂದಅರಿವು ಮೂಡಿಸಲಾಗಿದ್ದು, ಇದರಿಂದ ಸುಂದರ ನಗರವನ್ನಾಗಿಸಲುಎಲ್ಲರ ಸಹಕಾರಅಗತ್ಯಎಂದು ಹೇಳಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಗೋಡೆ ಬರಹ ಮತ್ತು ಬೀದಿ ನಾಟಕಗಳ ಮೂಲಕ ಸಾರ್ವಜನಿಕರಲ್ಲಿ ಸ್ವಚ್ಚತೆಕುರಿತುಅರಿವು ಮೂಡಿಸಲು 20 ನಾಟಕ ತಂಡಗಳನ್ನು ಆಯ್ಕೆಮಾಡಲಾಗಿದೆಎಂದರು.

2600 ಅಡಿಗಳಷ್ಟು ಗೋಡೆಬರಹದ ಮೂಲಕ ಸ್ವಚ್ಚತೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ನಗರಸಭೆ ಸದಸ್ಯರು ಸ್ವಚ್ಚತೆಗೆಆದ್ಯತೆ ನೀಡಿಜಾಗೃತಿ ಮೂಡಿಸಲುತಿರುಪತಿಗೆ ತೆರಳಲು ಸಧ್ಯದಲ್ಲೇ ದಿನಾಂಕ ನಿಗದಿಮಾಡಲಾಗುವುದೆಂದರು.

ಈ ಸಂದರ್ಭದಲ್ಲಿ ನಗರಸಭೆಉಪಾಧ್ಯಕ್ಷೆಅನುಮಧುಕರ್, ಸದಸ್ಯರಾದ ಎ.ಸಿ. ಕುಮಾರ್‌ಗೌಡ, ಪರಮೇಶ್‌ರಾಜ್‌ಅರಸ್, ರೂಪಾಕುಮಾರ್, ಗೋಪಿ, ಗುರುಮಲ್ಲಪ್ಪ, ಕೀರ್ತಿ ಮತ್ತಿತರರು ಉಪಸ್ಥಿತರಿದ್ದರು.

# ಆಸಕ್ತಿ ವ್ಯಕ್ತಪಡಿಸುವಿಕೆ ಅರ್ಜಿ ಆಹ್ವಾನ

**ದಾವಣಗೆರೆ:** ಅಮೃತ್ ಮಿತ್ರ ಕಾರ್ಯಕ್ರಮದ ತಾಂತ್ರಿಕ ಹಾಗೂ ತಾಂತ್ರಿಕೇತರ ಚಟುವಟಿಕೆಯಡಿ ಅನುಮೋದಿತ ಕಾರ್ಯಕ್ರಮಗಳನ್ನು ಡೇ ನಲ್ಮ್ ಅಭಿಯಾನದಡಿ ನೊಂದಾಯಿತ ಅರ್ಹ ಮಹಿಳಾ ಸ್ವಸಹಾಯ ಸಂಘಗಳಿಂದ ಆಸಕ್ತಿ ವ್ಯಕ್ತಪಡಿಸುವಿಕೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರುಗಳು ತಮ್ಮ ಆಸಕ್ತಿಯ ಅಭಿವ್ಯಕ್ತಿಯನ್ನು ಡೇ ನಲ್ಮ್ ವೆಬ್ ಸೈಟ್ www.davanagerecity.mrc.gov.in ವೀಕ್ಷಿಸಿ, ಸೆಪ್ಟೆಂಬರ್ 6 ರೊಳಗಾಗಿ ಡೇನಲ್ಮ್ ವಿಭಾಗ ಕೆಂಪು ಕಟ್ಟಡ ಮಹಾನಗರಪಾಲಿಕೆಗೆ ಸಲ್ಲಿಸಬೇಕೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

# ಪರಿಪಕ್ವ ಮೊತ್ತ ಪಾವತಿಗೆ ಅವಧಿ ವಿಸ್ತರಣೆ

**ದಾವಣಗೆರೆ:** 2006-07ನೇ ಸಾಲಿನ ಭಾಗ್ಯಲಕ್ಷ್ಮೀ ಬಾಂಡ್ ಪಡೆದ ಫಲಾನುಭವಿಗಳಿಂದ ಪರಿಪಕ್ವ ಮೊತ್ತ ಪಾವತಿಗೆ ನೊಂದಾಯಿಸಲು ಅಕ್ಟೋಬರ್ 31 ರವರೆಗೆ ಕಲಾವಕಾಶವನ್ನು ನೀಡಲಾಗಿದೆ.

ಫಲಾನುಭವಿಗಳು ತಮ್ಮ ಹತ್ತಿರದ ಅಂಗನವಾಡಿ ಕೇಂದ್ರ ಅಥವಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ನಂದಗೋಕುಲ ಬಿಲ್ಡಿಂಗ್, ದುಗಾರ್‌ಂಬಿಕಾ ಶಾಲೆ ಎದುರು ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

# ಇಂದು ಶ್ರೀ ನುಲಿಯ ಚಂದಯ್ಯ ಜಯಂತಿ

**ದಾವಣಗೆರೆ:** ಜಿಲ್ಲಾಡಳಿತ ವತಿಯಿಂದ ಆಗಸ್ಟ್ 9 ರಂದು ಬೆಳಿಗ್ಗೆ 10.30ಕ್ಕೆ ಶ್ರೀನುಲಿಯ ಚಂದಯ್ಯ ಜಯಂತಿಯನ್ನು ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

## ಪೌತಿ ಖಾತೆ ಆಂದೋಲನ: ತ್ವರಿತ ಕ್ರಮಕ್ಕೆ ತಹಸೀಲ್ದಾರ್ ಸೂಚನೆ

**ಚಿಕ್ಕಮಗಳೂರು, ಆ.8:** ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ 'ಪೌತಿ ಖಾತೆ ಅಂದೋಲನ' ಕಾರ್ಯಕ್ರಮವನ್ನು ಕಂದಾಯ ಇಲಾಖೆಯಿಂದ ಚಿಕ್ಕಮಗಳೂರು ತಾಲ್ಲೂಕಿನಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಪೌತಿ ಎಂದು ಗುರುತಿಸಲಾದ ರೈತರ ಜಮೀನುಗಳ ಪಹಣಿಯನ್ನು ವಾರಸುದಾರರಿಗೆ ಖಾತೆ ಮಾಡಲಾಗುತ್ತದೆ. ಇದರಿಂದ ವಿವಿಧ ಇಲಾಖೆಗಳಿಂದ, ಸರ್ಕಾರದಿಂದ ಸಿಗುವಂತಹ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುತ್ತಿದೆ. ಈ ಹಿನ್ನೆಲೆಯಲ್ಲಿ ವಾರಸುದಾರರು ಮೃತರ ಮರಣ ಪ್ರಮಾಣ ಪತ್ರ, ವಂಶವೃಕ್ಷ, ಆಧಾರ್ ಕಾರ್ಡ್, ಪಹಣಿ ಪತ್ರದೊಂದಿಗೆ ಸಂಬಂಧಪಟ್ಟ ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಬೇಕೆಂದು ಚಿಕ್ಕಮಗಳೂರು ತಾಲ್ಲೂಕು ತಹಸೀಲ್ದಾರ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಶ್ರೇಷ್ಠ ರೈತ-ರೈತ ಮಹಿಳೆ ಪ್ರಶಸ್ತಿ

ಚಿಕ್ಕಮಗಳೂರು, ಆ.8: ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದಿಂದ ಪ್ರತಿ ವರ್ಷದಂತೆ ಈ ವರ್ಷವೂ ಪ್ರಗತಿಪರ ಒಬ್ಬ ರೈತ, ಒಬ್ಬ ರೈತ ಮಹಿಳೆಗೆ (ಅರ್ಜಿದಾರರ ಹೆಸರಿನಲ್ಲಿ ಪಹಣಿ ಇರುವುದು ಕಡ್ಡಾಯ) ಜಿಲ್ಲಾ ಮಟ್ಟದ ಪ್ರಶಸ್ತಿಯನ್ನು ಅಕ್ಟೋಬರ್-2025 ತಿಂಗಳಿನಲ್ಲಿ ನಡೆಯಲಿರುವ ಕೃಷಿ ಮೇಳದಲ್ಲಿ ನೀಡಿ ಸನ್ಮಾನಿಸಲು ತೀರ್ಮಾನಿಸಲಾಗಿದೆ. ಆಸಕ್ತ ರೈತರು, ರೈತ ಮಹಿಳೆಯರಿಂದ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಮೂಡಿಗೆರೆಯ ಕೃಷಿ ವಿಜ್ಞಾನ ಕೇಂದ್ರ ಅಥವಾ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿಮಾಡಿ ಸೆಪ್ಟಂಬರ್ 15ರ ಒಳಗೆ ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿ ಅಥವಾ ಮೂಡಿಗೆರೆಯ ಕೃಷಿ ವಿಜ್ಞಾನ ಕೇಂದ್ರಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ. ಆಯ್ಕೆಯಾದ ರೈತರಿಗೆ ಪ್ರಶಸ್ತಿ ಪತ್ರ ಹಾಗೂ 7500 ನಗದು ಪುರಸ್ಕಾರ ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆಗಳನ್ನು (897061296, 9480838203) ಸಂಪರ್ಕಿಸಬಹುದು ಎಂದು ಎಂದು ಮೂಡಿಗೆರೆ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ.ಎ.ಟಿ.ಕೃಷ್ಣಮೂರ್ತಿ ಅವರು ತಿಳಿಸಿದ್ದಾರೆ.

## ಆ.21 ಪೊಲೀಸ್ ಹಳೆ ವಸತಿಗೃಹದ ಸಾಮಗ್ರಿ ಹರಾಜು

**ಚಿಕ್ಕಮಗಳೂರು, ಆ.8:** ಜಿಲ್ಲೆಯ ಪಂಚನಹಳ್ಳಿ ಪೊಲೀಸ್ ಠಾಣೆಯ ಒಂದು ಪಿಎಸ್‌ಐ ಮತ್ತು 14 ಸಿಬ್ಬಂದಿಗಳ ಹಳೆಯ ವಸತಿಗೃಹಗಳನ್ನು ನೆಲಸಮಗೊಳಿಸಿ ಕಟ್ಟಡದ ಸಾಮಗ್ರಿಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಉದ್ದೇಶಿಸಲಾಗಿದ್ದು, ಅದರಂತೆ ಆಗಸ್ಟ್ 21 ರಂದು ಬೆಳಿಗ್ಗೆ 11 ಗಂಟೆಗೆ ಪಂಚನಹಳ್ಳಿ ಪೊಲೀಸ್ ಠಾಣೆಯ ಹಳೆಯ ಕಟ್ಟಡದಲ್ಲಿ ಬಹಿರಂಗ ಹರಾಜು ನಡೆಯಲಿದೆ. ಬಿಡ್‌ದಾರರು ಹರಾಜಿನಲ್ಲಿ ಭಾಗವಹಿಸುವ ಮುನ್ನ ರೂ.30 ಸಾವಿರಗಳನ್ನು ನಗದಾಗಿ ಪಾವತಿಸಿ ಹೆಸರು ನೋಂದಣಿ ಮಾಡಿಕೊಳ್ಳಬೇಕು. ಹರಾಜಿನ ಮುಖಾಂತರ ಬಿಡ್ ಆದ ಯಶಸ್ವಿ ಬಿಡ್‌ದಾರರು ಸಂಪೂರ್ಣ ಮೊತ್ತವನ್ನು ಸ್ಥಳದಲ್ಲೇ ನಗದು ಮೂಲಕ ಪಾವತಿಸಬಹುದು. ಬಿಡ್ ಮಾಡಿದ ಮೊತ್ತಕ್ಕೆ ಶೇ.18 ರಷ್ಟು ಜಿ.ಎಸ್.ಟಿ. ಮೊತ್ತವನ್ನು ಸೇರಿಸಿ ಪಾವತಿಸಬೇಕು. ಬಿಡ್‌ದಾರರು ಹಳೆಯ ಕಟ್ಟಡಗಳನ್ನು ಏಳು ದಿನಗಳೊಳಗೆ ತೆರವುಗೊಳಿಸಿ ಹಳೆಯ ಸಾಮಗ್ರಿಗಳನ್ನು ಒಯ್ಯುವ ಮೊದಲು ಗೋಡೆ, ಮಣ್ಣು ಹಾಗೂ ಎಲ್ಲಾ ರೀತಿಯ ಅನುಪಯುಕ್ತ ಸಾಮಗ್ರಿಗಳನ್ನು ಅವರದೇ ವೆಚ್ಚದಲ್ಲಿ ತೆರವುಗೊಳಿಸಿ, ಸ್ವಚ್ಛಗೊಳಿಸಬೇಕು. ತೆರವಿನ ಸಂದರ್ಭದಲ್ಲಿ ಸ್ಥಳದಲ್ಲಿರುವ ವಿದ್ಯುತ್, ಕುಡಿಯುವ ನೀರಿನ ಪೈಪ್, ಯುಜಿಡಿ ಹಾಗೂ ಇತರೆ ಸಂಪರ್ಕಗಳಿಗೆ ಹಾನಿಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಂದರ್ಶನ

**ಚಿಕ್ಕಮಗಳೂರು, ಆ.8:** ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೇರಿಯಲ್ಲಿ ಖಾಸಗಿ ಕಂಪನಿಯಾದ ಎಸ್‌ಬಿಐ ಲೈಫ್ ಇನ್ಶೂರೆನ್ ಖಾಸಗಿ ಕಂಪನಿಯು ಚಿಕ್ಕಮಗಳೂರಿನಲ್ಲಿ ಖಾಲಿ ಇರುವ ಬಿ.ಎ, ಜಿಎಸ್‌ಟಿ, ಡಿಎಂ ಹುದ್ದೆಗೆ ಆಗಸ್ಟ್ 11ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನವನ್ನು ಆಯೋಜಿಸಿದೆ. ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 50 ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಒಂದು ಸೆಟ್ ರೆಸ್ಯೂಮ್‌ನೊಂದಿಗೆ ಸಂದರ್ಶನದಲ್ಲಿ ಭಾಗವಹಿಸಬಹುದು.

## ಆನೆ ದೊಡ್ಡಿ ನಿರ್ಮಾಣಕ್ಕೆ ಕೇಂದ್ರ ಸಚಿವರಿಗೆ ಸಂಸದರ ಮನವಿ

**ಚಿಕ್ಕಮಗಳೂರು, ಜು 30:** ಜಿಲ್ಲೆಯಲ್ಲಿ ಇತ್ತೀಚೆಗೆ ಐವರಿಗೂ ಹೆಚ್ಚು ಮಂದಿ ಸಾವನ್ನಪ್ಪಿದ್ದು ಕಳೆದ ಒಂದು ವಾರದಲ್ಲಿ ದಿನನಿತ್ಯ ಮಾನವ ಪ್ರಾಣಿ ಸಂಘರ್ಷದಿಂದ ಜನ ಜೀವನಕ್ಕೆ ಬೆದರಿಕೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ತಮ್ಮ ಲೋಕಸಭಾ ಕ್ಷೇತ್ರವಾದ ಚಿಕ್ಕಮಗಳೂರಿನಲ್ಲಿ ಕಾಡುಪ್ರಾಣಿಗಳ ಅದರಲ್ಲೂ ಆನೆದಾಳಿಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಬೇಕಾಗಿದೆ ಎಂದು ಉಡುಪಿ-ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿ ಮಾಡಿ ಖುದ್ದು ಮನವಿ ಸಲ್ಲಿಸಿದರು. ಆನೆಗಳ ಸಂತತಿ ವೇಗವಾಗಿ ಬೆಳೆಯುತ್ತಿದ್ದು, ಕಾಡಾನೆಗಳು ರೈತಾಪಿ ವರ್ಗದ ಬೆಳೆ ಮಾತ್ರವಲ್ಲ, ಕೃಷಿ ಕಾರ್ಯದಲ್ಲಿ ನಿರತರಾದ ರೈತರನ್ನು ಹತ್ಯೆ ಮಾಡುತ್ತಿವೆ. ಇಂತಹ ಸಂಕಷ್ಟ ಸಂದರ್ಭದಲ್ಲಿ ಕೇಂದ್ರ, ರಾಜ್ಯ ಸರ್ಕಾರಗಳು ಒಟ್ಟಾಗಿ ಆನೆಗಳ ನಿಯಂತ್ರಣ ಮತ್ತು ಆನೆ ದೊಡ್ಡಿಗಳ ನಿರ್ಮಾಣದ ಶಾಶ್ವತ ಪರಿಹಾರದ ಯೋಜನೆ ರೂಪಿಸಬೇಕೆಂದು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

# ಪತ್ರಿಕೆಗಳು ಸಮಾಜದ ಕಣ್ಗಾವಲು: ಶಾಸಕ ಆನಂದ್

**ಬೀರೂರು:** ಹಲವು ಏಳು-ಬೀಳುಗಳ ನಡುವೆ ಪತ್ರಿಕೆಗಳು ಸಮಾಜದ ದನಿ ಹಾಗೂ ಕಣ್ಗಾವಲಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ಶಾಸಕ ಕೆ.ಎಸ್. ಆನಂದ್ ಶ್ಲಾಘಿಸಿದರು.

ಕಡೂರು ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಬೀರೂರು ಗುರುಭವನದಲ್ಲಿ ನಡೆದ ಪತ್ರಕರ್ತರ ಸಮ್ಮಿಲನ ಮತ್ತು ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಡಿ.ವಿ. ಗುಂಡಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿಯೂ ಜನಜಾಗೃತಿಗಾಗಿ ಮಹಾತ್ಮಗಾಂಧಿ ಮತ್ತು ಡಾ. ಬಿ.ಆರ್. ಅಂಬೇಡ್ಕರ್ ಪತ್ರಿಕೆಗಳನ್ನು ಹುಟ್ಟುಹಾಕಿ ಪತ್ರಕರ್ತರಾಗಿಯೂ ಕೆಲಸ ಮಾಡಿದರು. ಸತ್ಯಶೋಧನೆಯ ಕರ್ತವ್ಯದಿಂದ ಸಮಾಜವನ್ನು ಎಚ್ಚರಿಸುವ ಮೂಲಕ ವೃತ್ತಿಗೆ ನ್ಯಾಯ ಒದಗಿಸುವ ಪತ್ರಿಕೆಗಳು ಮತ್ತು ಪತ್ರಕರ್ತರ ವರದಿಗಳಿಂದ ಸರ್ಕಾರಗಳು ಹಲವಾರು ಬಾರಿ ತಮ್ಮ ಆದೇಶಗಳನ್ನೇ ಮಾರ್ಪಡಿಸಿವೆ. ಜನರು ದೃಶ್ಯಮಾಧ್ಯಮಗಳನ್ನು ಎಷ್ಟೇ ನೋಡಿದರೂ ಸತ್ಯ ಅರಿಯಲು



ಪತ್ರಿಕೆಗಳನ್ನೇ ಅವಲಂಬಿಸಿದ್ದಾರೆ ಎನ್ನುವುದನ್ನು ಮರೆಯದೆ ಕರ್ತವ್ಯ ನಿರ್ವಹಿಸಿ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಪತ್ರಕರ್ತರಿಗೆ ವೃತ್ತಿಬದ್ಧತೆ ಇರಬೇಕು, ಸಮಾಜದಲ್ಲಿ ಬದಲಾವಣೆಗಾಗಿ ಪತ್ರಿಕೆಗಳು ಅವಿರತವಾಗಿ ಶ್ರಮಿಸುತ್ತಿವೆ. ಪೈಪೋಟಿ ಹಾಗೂ ಹಲವಾರು ಸವಾಲುಗಳ ನಡುವೆ ನೈಜ ಸುದ್ದಿಯನ್ನು ಹೆಕ್ಕಬೇಕಾದ ಸನ್ನಿವೇಶ ಇಂದು ಇದೆ. ಜನರಿಗೆ ಪತ್ರಿಕೆಗಳ ಬಗ್ಗೆ ವಿಶ್ವಾಸವಿದ್ದು ಅದನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ನಾವೆಲ್ಲ ಶ್ರಮಿಸೋಣ. ರಾಜ್ಯ ಸರ್ಕಾರವು ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್ ಮತ್ತು ವೈದ್ಯ ಸಂಜೀವಿನಿ ಆರೋಗ್ಯ ಸೌಲಭ್ಯ ಕಲ್ಪಿಸಿದ್ದು, ಮುಖ್ಯಮಂತ್ರಿ ಮತ್ತು ಅವರ ಮಾಧ್ಯಮ ಸಲಹೆಗಾರರನ್ನು ಅಭಿನಂದಿಸುತ್ತೇನೆ ಎಂದು ನುಡಿದರು.

ಸಾಧಕರಿಗೆ ಸನ್ಮಾನ ನೆರವೇರಿಸಿ ಮಾತನಾಡಿದ ಕಡೂರು ಪುರಸಭಾಧ್ಯಕ್ಷ ಭಂಡಾರಿ ಶ್ರೀನಿವಾಸ್, ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಕಾವಲುಗಾರನಾಗಿ ಪತ್ರಿಕೆಗಳು ಕೆಲಸ ನಿರ್ವಹಿಸುತ್ತಿವೆ. ಸತ್ಯವನ್ನು ಎತ್ತಿಹಿಡಿದು ಸಮಾಜ ಹಾಗೂ ಜನರನ್ನು ಎಚ್ಚರಿಸುವ ಜವಾಬ್ದಾರಿ ಪತ್ರಕರ್ತರದ್ದಾಗಿದ್ದು, ಮಾಧ್ಯಮಗಳಿಂದಾಗಿ ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗಗಳು ಎಚ್ಚರಿಕೆಯ ನಡೆ ಅನುಸರಿಸುತ್ತವೆ. ಪತ್ರಕರ್ತರು ಸಂಘಟಿತರಾಗಿ ಕೆಲಸ ಮಾಡಿ, ಕಡೂರಿನಲ್ಲಿ ಎಲ್ಲರ ಸಹಕಾರದಿಂದ ಪತ್ರಿಕಾಭವನ ನಿರ್ಮಿಸೋಣ ಎಂದು ಸಲಹೆ ನೀಡಿದರು.

ಕೆಯುಡಬ್ಲ್ಯುಜೆ ಕಾರ್ಯಕಾರಿ ಸಮಿತಿ ಸದಸ್ಯ ಎಚ್.ಬಿ. ಮದನ್‌ಗೌಡ ಮಾತನಾಡಿ, ಡಿಜಿಟಲ್ ಯುಗದಲ್ಲಿ ಸುದ್ದಿಗಳು ವೇಗವಾಗಿ ಹರಡುತ್ತವೆ, ಆದರೆ, ಅದರಲ್ಲಿ ಸತ್ಯಾಸತ್ಯತೆಯ ಕೊರತೆ ಕಾಣುತ್ತಿದೆ. ಎಲ್ಲ ಅಡೆತಡೆಗಳ ನಡುವೆಯೂ ಮುದ್ರಣಮಾಧ್ಯಮ ಜೀವಂತಿಕೆ ಉಳಿಸಿಕೊಂಡಿದ್ದು, ಬದಲಾವಣೆಯ ಕಾಲಘಟ್ಟದಲ್ಲಿ ಪತ್ರಿಕೋದ್ಯಮದಲ್ಲಿಯೂ ವಿಪುಲ ಅವಕಾಶಗಳು ದೊರೆಯುತ್ತಿದ್ದು, ಯುವಜನರು ಪತ್ರಿಕೋದ್ಯಮಕ್ಕೆ ಬರಬೇಕು ಎಂದು ಕರೆ ನೀಡಿದರೆ, ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಜನಪ್ರತಿನಿಧಿಗಳು ತಮ್ಮ ಏಳಿಗೆಗೆ ಕಾರಣವಾದ ಪತ್ರಕರ್ತರು ಮತ್ತು ಪತ್ರಿಕೆಗಳನ್ನು ನಿರ್ಲಕ್ಷಿಸಬಾರದು ಎಂದು ಸಲಹೆ ನೀಡಿದರು. ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿದ ಸಾಧಕರನ್ನು ಸನ್ಮಾನಿಸಲಾಯಿತು, ಸಾಧಕರ ಪರವಾಗಿ ಮಾತನಾಡಿದ ಹಿರಿಯ ವಕೀಲ ಎಂ.ಎಸ್. ಹೆಳವರ್, ಕಡೂರು ತಾಲ್ಲೂಕಿನ ಜನರ ಪ್ರೀತಿ, ವಿಶ್ವಾಸದಿಂದ ಮತ್ತು ಪತ್ರಕರ್ತರ ಸಹಕಾರದಿಂದ 6 ದಶಕಗಳ ವೃತ್ತಿಜೀವನ, ಎಲ್.ಜಿ. ಹಾವನೂರು ಆಯೋಗವೂ ಸೇರಿ ನಾಲ್ಕು ಹಿಂದುಳಿದ ವರ್ಗಗಳ ಆಯೋಗದ ಸದಸ್ಯನಾಗಿ, ಮೈಸೂರು ಮತ್ತು ಕುವೆಂಪು ವಿವಿಗಳ ಸೆನೆಟ್ ಸದಸ್ಯನಾಗಿ ಕರ್ತವ್ಯ ನಿರ್ವಹಿಸಿದ್ದೇನೆ. ಈ ವಯಸ್ಸಿನಲ್ಲಿ ನನ್ನನ್ನು ಪತ್ರಕರ್ತರು ಗುರುತಿಸಿ ಗೌರವಿಸಿದ್ದು ಸಂತಸ ತಂದಿದೆ, ಜನ ಪ್ರೀತಿ, ವಿಶ್ವಾಸ ಗಳಿಸಿ ಪತ್ರಿಕೆಗಳು ಯಶಸ್ವಿಯಾಗಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಕಾರ್ಯದರ್ಶಿ ಎಚ್.ಆರ್.ದೇವರಾಜ್, ಹಾಸನ ಹಾಲು ಒಕ್ಕೂಟದ ನಿರ್ದೇಶಕ ಬಿದರೆ ಜಗದೀಶ್, ಪುರಸಭೆ ಸದಸ್ಯರಾದ ಜ್ಯೋತಿ ಸಂತೋಷ್, ಗಂಗಾಧರ್, ಮಾನಿಕ್ ಬಾಷಾ, ಶಶಿಧರ್, ಕಡೂರು ಸರ್ಕಲ್ ಇನ್‌ಸ್ಪೆಕ್ಟರ್ ಎಂ.ರಫೀಕ್, ಬೀರೂರು ಪಿಎಸ್‌ಐ ಡಿ.ವಿ.ತಿಪ್ಪೇಶ್, ಲೋಕೇಶ್ವರ್, ಖಂಡುಗದಹಳ್ಳಿ ಸೋಮೇಶ್ವರ ದೇವಾಲಯದ ಕನ್ವೀನರ್ ಕೆ.ಬಿ.ಸೋಮೇಶ್ ,ಶಿಕ್ಷಕರ ಸಂಘದ ಜಗದೀಶ್, ಕುಂದೂರು ಹರೀಶ್, ಹಿರೇನಲ್ಲೂರು ಶ್ರೀನಿವಾಸ್, ಜಿಲ್ಲೆಯ ವಿವಿಧ ತಾಲ್ಲೂಕುಗಳ ಪತ್ರಕರ್ತರು, ವಿವಿಧ ಸ್ತ್ರೀಶಕ್ತಿ ಸಂಘ-ಸಂಸ್ಥೆಗಳ ಸದಸ್ಯೆಯರು ಇದ್ದರು. ಇದೇ ಸಂದರ್ಭದಲ್ಲಿ ನೆನಪಿನ ಸಂಚಿಕೆ ಬಿಡುಗಡೆ ಮಾಡಲಾಯಿತು.

# ಬಿಹಾರದಲ್ಲಿ ಅಂದಾಜು 75 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರು ಪಟ್ಟಿಯಿಂದ ಹೊರಕ್ಕೆ

**ನವದೆಹಲಿ:** ದೇಶಾದ್ಯಂತ ರಾಜಕೀಯ ಪಕ್ಷಗಳಲ್ಲಿ ಭಾರೀ ವಿವಾದ ಸೃಷ್ಟಿಸಿರುವ ವಿಶೇಷ ವಿಶೇಷ ತೀವ್ರ ಪರಿಷ್ಕರಣೆ(ಎಸ್‌ಐಆರ್) ಯಿಂದ ಬಿಹಾರದಲ್ಲಿ ಅಂದಾಜು 75 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರು ಪಟ್ಟಿಯಿಂದ ಹೊರಗುಳಿಯಲಿದ್ದಾರೆ.


ಚುನಾವಣಾ ಆಯೋಗ ಕಳೆದ ಜು.20ರಿಂದ ನಡೆಸಿರುವ ವಿಶೇಷ ತೀವ್ರ ಪರಿಷ್ಕರಣೆ ಪರಿಣಾಮ ಗುರುತು ಪತ್ರಗಳನ್ನು ಹೊಂದದೆ ಮತದಾರ ಪಟ್ಟಿಗೆ ಸೇರ್ಪಡೆಯಾಗಿದ್ದ 75 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರನ್ನು ತೆಗೆದು ಹಾಕಿದ್ದಾರೆ.

ಕಾಂಗ್ರೆಸ್, ಆರ್‌ಜೆಡಿ, ಎಸ್‌ಪಿ, ಟಿಎಂಸಿ, ಎಎಪಿ, ಸಿಪಿಎಂ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ವಿರೋಧದ ನಡುವೆಯೂ ಸುಪ್ರೀಂಕೋರ್ಟ್ ಎಸ್‌ಐಆರ್ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಲು ನಿರಾಕರಿಸಿದ ಹಿನ್ನಲೆಯಲ್ಲಿ ಆಯೋಗ ನಕಲಿ ಮತದಾರರನ್ನು ಪತ್ತೆ ಮಾಡಿದೆ.

ಈವರೆಗೂ ಅಧಿಕೃತವಾಗಿ ಚುನಾವಣಾ ಆಯೋಗ ಬಿಹಾರದ ಅಂತಿಮ ಮತದಾರರ ಕರಡು ಪಟ್ಟಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಿಲ್ಲವಾದರೂ ಮೂಲಗಳ ಪ್ರಕಾರ ಆ.1ರಂದು ಬಿಡುಗಡೆ ಮಾಡಲಿದೆ.

ಗಣತಿ ನಮೂನೆಗಳನ್ನು ಸಲ್ಲಿಸಲು ಕೊನೆಯ ದಿನವಾದ ಶುಕ್ರವಾರ ಚುನಾವಣಾ ಆಯೋಗ ಬಿಡುಗಡೆ ಮಾಡಿದ ದತ್ತಾಂಶದ ಪ್ರಕಾರ, 65.2 ಲಕ್ಷ ಮತದಾರರಲ್ಲಿ 22 ಲಕ್ಷ ಜನರು ಮೃತಪಟ್ಟಿದ್ದಾರೆ, 35 ಲಕ್ಷ ಜನರು ಶಾಶ್ವತವಾಗಿ ಬಿಹಾರದ ಹೊರಗೆ ಸ್ಥಳಾಂತರಗೊಂಡಿದ್ದಾರೆ, 7 ಲಕ್ಷ ಜನರು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ಮತದಾರರಾಗಿ ದಾಖಲಾಗಿದ್ದಾರೆ ಮತ್ತು 1.2 ಲಕ್ಷ ಜನರು ಇನ್ನೂ ತಮ ನಮೂನೆಗಳನ್ನು ಸಲ್ಲಿಸಿಲ್ಲ.

ಜೂನ್ 24 ರಂದು ರಾಜ್ಯದಲ್ಲಿ ಪ್ರಾರಂಭವಾದ ಎಸ್‌ಐಆರ್ ಪ್ರಕ್ರಿಯೆಯಡಿ ಬಿಹಾರದ ಶೇ.99.8 ಮತದಾರರನ್ನು ಸೇರಿಸಲಾಗಿದೆ ಎಂದು ಚುನಾವಣಾ ಆಯೋಗ (ಇಸಿ) ತಿಳಿಸಿದೆ. 7.9 ಕೋಟಿ ಮತದಾರರಲ್ಲಿ, 7.23 ಕೋಟಿ ಮತದಾರರ ಎಣಿಕೆ ನಮೂನೆಗಳನ್ನು ಸ್ವೀಕರಿಸಲಾಗಿದ್ದು, ಡಿಜಿಟಲೀಕರಣಗೊಳಿಸಲಾಗಿದೆ ಮತ್ತು ಅವರ ಹೆಸರುಗಳನ್ನು ಆಗಸ್ಟ್ 1ರಂದು ಪ್ರಕಟಿಸಲು ನಿಗದಿಪಡಿಸಲಾದ ಕರಡು ಮತದಾರರ ಪಟ್ಟಿಯಲ್ಲಿ



ಸೇರಿಸಲಾಗುವುದು. ಉಳಿದ 1.2 ಲಕ್ಷ ಮತದಾರರ ಮರು ಎಣಿಕೆ ನಮೂನೆಗಳು ಇನ್ನೂ ಸ್ವೀಕರಿಸಬೇಕಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಉಳಿದ ಮತದಾರರ ಬೂತ್ ಮಟ್ಟದ ಅಧಿಕಾರಿಗಳ ವರದಿಗಳೊಂದಿಗೆ ಗಣತಿ ನಮೂನೆಗಳ ಡಿಜಿಟಲೀಕರಣವನ್ನು ಆಗಸ್ಟ್ 1 ರೊಳಗೆ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದೆ.

ಆಗಸ್ಟ್ 1ರಿಂದ ಸೆಪ್ಟೆಂಬರ್ 1ರ ನಡುವಿನ ಪ್ರಕ್ರಿಯೆಯ ಮುಂದಿನ ಹಂತದಲ್ಲಿ ನಿಗದಿತ ನಮೂನೆಗಳನ್ನು ಭರ್ತಿ ಮಾಡಿದ ನಂತರವೂ ಹೆಸರುಗಳನ್ನು ಬಿಟ್ಟುಹೋಗಿರುವ ಅರ್ಹ ಮತದಾರರನ್ನು ಸೇರಿಸಬಹುದು ಮತ್ತು ಅನರ್ಹ ಮತದಾರರನ್ನು ತೆಗೆದುಹಾಕಲು ಪಕ್ಷಗಳು ಚುನಾವಣಾ ನೋಂದಣಿ ಅಧಿಕಾರಿಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ಆಯೋಗ ತಿಳಿಸಿದೆ.

ಎಣಿಕೆ ನಮೂನೆಗಳನ್ನು ಭರ್ತಿ ಮಾಡದ ಅಥವಾ ಮರಣ ಹೊಂದಿದ ಮತ್ತು ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರ ಪಟ್ಟಿಯನ್ನು ಈಗಾಗಲೇ ಎಲ್ಲಾ 12 ಮಾನ್ಯತೆ ಪಡೆದ ರಾಜಕೀಯ ಪಕ್ಷಗಳೊಂದಿಗೆ ಹಂಚಿಕೊಳ್ಳಲಾಗಿದೆ ಎಂದು ಆಯೋಗ ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಆಗಸ್ಟ್ 1 ರಂದು ಪ್ರಕಟಿಸಲಾಗುವ ಕರಡು ಮತದಾರರ ಪಟ್ಟಿಯಲ್ಲಿ ದೋಷಗಳಿದ್ದರೆ ಸರಿಪಡಿಸಲು ರಾಜಕೀಯ ಪಕ್ಷಗಳು ಒಟ್ಟಾಗಿ 1,60813 ಶಾಸಕರ ಸಾಲನ್ನು ನಾಮನಿರ್ದೇಶನ ಮಾಡಿವೆ.

17,549 ಶಾಸಕರ ಪಟ್ಟಿ (ಬೂತ್ ಲೆವೆಲ್ ಏಜೆಂಟ್) ಮತ್ತು 47,506 ಶಾಸಕರ ಸಾಲನ್ನು ಹೊಂದಿರುವ ಆರ್‌ಜೆಡಿ ಪಕ್ಷಗಳು ಈ ಪಟ್ಟಿಯಲ್ಲಿ ಸೇರಿವೆ. ಪಟ್ಟಿಗಳನ್ನು ನೀಡಲಾದ ಇತರ ರಾಜಕೀಯ ಪಕ್ಷಗಳಲ್ಲಿ ಬಿಜೆಪಿ, ಬಿಎಸ್‌ಪಿ, ಸಿಪಿಎಂ, ಜೆಡಿ(ಯು), ಆರ್‌ಎಲ್‌ಎಸ್‌ಪಿ, ಸಿಪಿಐ-ಎಂಎಲ್ (ಲಿಬರೇಷನ್), ಆರ್‌ಎಲ್‌ಜೆಪಿ, ಎಲ್‌ಜೆಪಿ(ಆರ್‌ವಿ), ಎನ್‌ಪಿಪಿ ಮತ್ತು ಎಎಪಿ ಸೇರಿವೆ.

ಕೆಲವು ಪಕ್ಷಗಳ ಶಾಸಕರ ವಿವರಗಳನ್ನು ಹಂಚಿಕೊಂಡ ಚುನಾವಣಾ ಆಯೋಗ, ಬಿಜೆಪಿ ಅತಿ ಹೆಚ್ಚು 53,338, ಜೆಡಿ(ಯು) 36,550, ಆರ್‌ಎಲ್‌ಎಸ್‌ಪಿ 270, ಆರ್‌ಎಲ್‌ಜೆಪಿ 1,913 ಮತ್ತು ಎಲ್‌ಜೆಪಿ (ಆರ್‌ವಿ) 1,210 ಅಭ್ಯರ್ಥಿಗಳನ್ನು ನಾಮನಿರ್ದೇಶನ ಮಾಡಿದೆ ಎಂದು ತಿಳಿಸಿದೆ.

# ಚಿತ್ರದುರ್ಗದಲ್ಲಿ ಅತ್ಯುನ್ನತ ತಾಂತ್ರಿಕ ಸೌಲಭ್ಯವುಳ್ಳ ಆಸ್ಪತ್ರೆಗಳು ಸಿದ್ಧ : ಡಾ.ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ:** ಚಿತ್ರದುರ್ಗ ಜನರಿಗೆ ಅತ್ಯಂತ ತಾಂತ್ರಿಕ ಸೌಲಭ್ಯವುಳ್ಳ ಆಸ್ಪತ್ರೆಗಳು ಸೃಷ್ಟಿಯಾಗುತ್ತಿದ್ದು, ಜನಸಾಮಾನ್ಯರ ಕೈಗೆಟುಕುವಂತಹ ದರದಲ್ಲಿ ಚಿಕಿತ್ಸೆ ದೊರಕುತ್ತಿದ್ದು, ಇಂತಹ ಸಂಸ್ಥೆಗಳನ್ನು ಸರ್ಕಾರ, ಸಾರ್ವಜನಿಕರು ಗುರುತಿಸಿ ಪ್ರೋತ್ಸಾಹಿಸಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದ್ದಾರೆ.

ಅವರು ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯಲ್ಲಿ ರೋಟರಿ ಸಂಸ್ಥೆಯವರು ಸ್ಥಾಪಿಸಿರುವ ಡಯಾಲಿಸಿಸ್ ಸೆಂಟರ್ ನಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳಿಗೆ ತಮ್ಮ ಜೀವನ ರೂಪಿಸಿಕೊಳ್ಳುವ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಮೂತ್ರಪಿಂಡದ ಸಮಸ್ಯೆಯಿಂದ ಬಳಲುತ್ತಿರುವಂತಹ ರೋಗಿಗಳಿಗೆ, ಕಡಿಮೆ ದರದಲ್ಲಿ ಡಯಾಲಿಸಿಸ್ ಚಿಕಿತ್ಸೆ ನೀಡಿ, ಅವರ ಜೀವನವನ್ನು ಸುಧಾರಿಸುವ ನಿಟ್ಟಿನಲ್ಲಿ ಪ್ರಯತ್ನಿಸುತ್ತಿರುವ ರೋಟರಿ ಕ್ಲಬ್, ಜನರ



ಆರೋಗ್ಯದ ಬಗ್ಗೆ ಯೋಚಿಸಿ ಸಹಾಯ ಕಲ್ಪಿಸುತ್ತಿರುವುದು ಉತ್ತಮವಾದ ಬೆಳವಣಿಗೆಯಾಗಿದೆ ಎಂದರು.

ಮೂತ್ರಪಿಂಡದ ಕಾಯಿಲೆಗಳಲ್ಲಿ ಅತಿಹೆಚ್ಚಿನ ವೆಚ್ಚಮಯವಾದಂತಹ ಚಿಕಿತ್ಸೆ ಡಯಲಿಸಿಸ್, ಅದಕ್ಕಾಗಿ ತಿಂಗಳಿಗೆ 8 ರಿಂದ 10 ಸಾವಿರದ ವರೆಗೂ ಖರ್ಚು ಮಾಡಿ, ರಕ್ತ ಶುದ್ಧೀಕರಣ ಮಾಡಿಸಿಕೊಳ್ಳುವಂತಹ ಆಸ್ಪತ್ರೆಗಳು ಎಲ್ಲಾ ಕಡೆ ಲಭ್ಯವಿದೆ, ಆದರೆ ಕಡಿಮೆ ಖರ್ಚಿನಲ್ಲಿ ಡಯಾಲಿಸಿಸ್ ಮಾಡಿಸಿಕೊಳ್ಳುವ ವ್ಯವಸ್ಥೆ ಚಿತ್ರದುರ್ಗದಲ್ಲಿ ಇರಲಿಲ್ಲ, ಚಿತ್ರದುರ್ಗದಲ್ಲಿ ಲಭ್ಯವಿದ್ದ ದೊಡ್ಡ ದೊಡ್ಡ ಆಸ್ಪತ್ರೆಗಳಲ್ಲಿ ರೋಗಿಗಳು ಸರದಿ ಪ್ರಕಾರ ಡೈಲಿಸಿಸ್ ಮಾಡಿಸಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿತ್ತು, ಆದರೆ ಈಗ ರೋಟರಿ ಕ್ಲಬ್ ನವರು ಸಾಮಾನ್ಯ ಜನರಿಗೂ ಸಹ, ಕಡಿಮೆ ದರದಲ್ಲಿ ಡಯಾಲಿಸಿಸ್ ವ್ಯವಸ್ಥೆ ಕಲ್ಪಿಸಿರುವುದು ಜನಸಾಮಾನ್ಯರ ಬಗ್ಗೆ ಅವರಿಗಿರುವ ಕಾಳಜಿಯನ್ನ ಎತ್ತಿ ತೋರಿಸುತ್ತದೆ ಎಂದರು.

ಕೆಲವೊಂದಿಷ್ಟು ದಾನಿಗಳು ರೋಟರಿ ಕ್ಲಬ್ ಜೊತೆ ಕೈಜೋಡಿಸಿ, ಉತ್ತಮವಾದ ಕಟ್ಟಡ ನಿರ್ಮಾಣ ಮಾಡಿ, ಅಲ್ಲಿ ರಕ್ತ ಪರೀಕ್ಷೆ, ಡಯಾಲಿಸಿಸ್ ವ್ಯವಸ್ಥೆ ಹಾಗೂ ಪದವಿ ಪಡೆದ ವಿದ್ಯಾರ್ಥಿಗಳಿಗೆ ತಮ್ಮ ಜೀವನ ರೂಪಿಸಿಕೊಳ್ಳುವಂತಹ ತರಬೇತಿ ಕಾರ್ಯಗಾರವನ್ನು, ವಿದ್ಯಾರ್ಥಿಗಳಿಗೆ ಓದಲು ಗ್ರಂಥಾಲಯ ಹಾಗೂ ಕಂಪ್ಯೂಟರ್ ವ್ಯವಸ್ಥೆಯನ್ನು ಸಹ ನೀಡಿರುವುದು ಶ್ಲಾಘನೀಯ ಎಂದರು.

ಜನರಿಗೆ ಚಿಕಿತ್ಸೆ ಜೊತೆಗೆ ರೋಗರುಜಿನಗಳು ಬಗ್ಗೆ ಜಾಗೃತಿ ಮೂಡಿಸಲು ಪ್ರಯತ್ನಿಸುತ್ತಿರುವ ಲೊಟರಿ ಕ್ಲಬ್, ಇತರ ಸಂಸ್ಥೆಗಳಿಗೆ ಮಾದರಿಯಾಗಿದೆ. ಪ್ರತಿ ನಿತ್ಯ ಒಂದಲ್ಲ ಒಂದು ಜನಜಾಗೃತಿ ರಚನಾತ್ಮಕ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿರುವ ಈ ಸಂಸ್ಥೆ ರಕ್ತದಾನ ಶಿಬಿರಗಳು, ಕಣ್ಣಿನ ಚಿಕಿತ್ಸಾ ಶಿಬಿರಗಳು, ಕ್ಯಾನ್ಸರ್ ನ ಜಾಗೃತಿ ಶಿಬಿರಗಳು ಹಾಗೂ ಇನ್ನಿತರ ರೋಗರುಜಿನಗಳ ನಿವಾರಣೆ ಬಗ್ಗೆ ಶ್ರಮಿಸುತ್ತಿರುವ ಈ ಸಂಸ್ಥೆಗೆ ಜನರ ಸಹಕಾರ ಮತ್ತು ಪ್ರೋತ್ಸಾಹ ದೊರೆಯಲಿ ಎಂದು ಆಶಿಸಿದರು.

ಬಹಳಷ್ಟು ವಿದ್ಯಾರ್ಥಿಗಳು ಸಹ ರೋಟರಿ ಸಂಸ್ಥೆಯಲ್ಲಿ ರೋಟರ್ ಯ್ಯಾಕ್ಟ ಎಂಬ ವಿಭಾಗದಲ್ಲಿ ಸೇರ್ಪಡೆಯಾಗಿ, ಸೇವಾ ತರಬೇತಿಯನ್ನು ಪಡೆದು, ಮುಂದೆ ದೊಡ್ಡ ದೊಡ್ಡ ಸಂಸ್ಥೆಗಳಲ್ಲಿ ಸೇವಾ ಕಾರ್ಯ ನಿರ್ವಹಿಸಲು ಅನುಕೂಲಕರವಾಗುತ್ತದೆ. ಹಾಗಾಗಿ ಯುವ ಜನಾಂಗ ರೋಟರಿ ಕಾರ್ಯಕ್ರಮಗಳಲ್ಲಿ ಹೆಚ್ಚಾಗಿ ಭಾಗವಹಿಸಿ ಅದರ ಅನುಭವವನ್ನು ಪಡೆಯಬೇಕು ಎಂದು ವಿನಂತಿಸಿಕೊಂಡರು.

ಪ್ರತಿ ಬುಧವಾರ ವಾರಕ್ಕೊಮ್ಮೆ ವಿಶೇಷ ಅತಿಥಿ ಉಪನ್ಯಾಸಗಳನ್ನು, ಆರೋಗ್ಯ ಮಾಹಿತಿಯನ್ನ, ವಿವಿಧ ರಂಗಗಳಲ್ಲಿ ಸಾಧನೆಗೈದವರನ್ನು ಆಹ್ವಾನಿಸಿ, ಜನರಿಗೆ, ಸಾರ್ವಜನಿಕರಿಗೆ, ಪರಿಚಯಿಸಿ, ಮಾಹಿತಿ ನೀಡುತ್ತಿರುವಂತಹ ಇಂತಹ ಸಂಸ್ಥೆಯ ಜೊತೆ ಸಹಕಾರ ನೀಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಬಡತನದಲ್ಲಿರುವಂತಹ ಮಹಿಳೆಯರು, ಮಕ್ಕಳು, ವಿದ್ಯಾರ್ಥಿಗಳಿಗೂ ಸಹ ಆರ್ಥಿಕ ಸಹಾಯವನ್ನು ನೀಡಿ, ಅವರ ವಿದ್ಯಾಭ್ಯಾಸಕ್ಕೆ ಸಹಾಯಕಲ್ಪಿಸುತ್ತಿರುವ ಈ ಸಂಸ್ಥೆಯ ದಾನಿಗಳಿಗೆ, ನಾವು ಹೆಚ್ಚಿನ ಅಭಿನಂದನೆಗಳನ್ನು ಸಲ್ಲಿಸಬೇಕಾಗಿದೆ. ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ, ಅಂಗವಿಕಲರಿಗೆ ತ್ರಿಚಕ್ರ ವಾಹನಗಳು, ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನ ವಿತರಿಸಿ, ಸಾಮಾಜಿಕ ಸುಭದ್ರತೆಗೆ ಪ್ರಯತ್ನಿಸುತ್ತಿರುವ ಇಂಥ ಸಂಸ್ಥೆಗಳು ಇನ್ನು ಹೆಚ್ಚಿನ ಸೇವೆ ಸಲ್ಲಿಸುವಂತೆ ಆಗಲಿ ಎಂದು ಪತ್ರಿಕಾ ಪ್ರಕಟಣೆ ಮುಖಾಂತರ

# ಸನಾತನ ಸಂಸ್ಕೃತಿ ಉಳಿವಿಗೆ, ಹಿಂದೂಗಳ ಸಂಘಟನೆಗಾಗಿ ಗಣೇಶ ಹಬ್ಬ ಆಚರಣೆ

## ಹರಿಹರದಲ್ಲಿ ಹಿಂದೂ ಮಹಾ ಗಣಪತಿಯ ವಿನಾಯಕ ಮಹೋತ್ಸವಕ್ಕೆ ಹಂದರಗಂಬ ಪೂಜೆ

**ಹರಿಹರ :** ಸ್ವಾತಂತ್ರ್ಯ ಪೂರ್ವದಲ್ಲಿ ಬ್ರಿಟಿಷರ ವಿರುದ್ಧ ಹೋರಾಟಕ್ಕೆ ಜನರನ್ನು ಒಗ್ಗೂಡಿಸಲು ಬಾಲಗಂಗಾಧರ ತಿಲಕ್ ಗಣೇಶ ಮಹೋತ್ಸವವನ್ನು ಆಚರಣೆಗೆ ತಂದರೆ, ಇಂದು ಹಿಂದೂ ಸನಾತನ ಸಂಸ್ಕೃತಿ ಉಳಿವು ಹಾಗೂ ಹಿಂದೂಗಳ ಸಂಘಟನೆಗಾಗಿ ಗಣೇಶ ಮಹೋತ್ಸವ ಆಚರಣೆ ಮಾಡಬೇಕಾಗಿದೆ ಎಂದು ಕೋಡಿಯಾಲ ಹೊಸಪೇಟೆಯಲ್ಲಿ ಪುಣ್ಯ-ಕೋಟಿ ಮಠದ ಬಾಲಯೋಗಿ ಜಗದೀಶ್ವರ ಶ್ರೀ ಹಾಗೂ ಹರಿಹರದ ಶ್ರೀ ರಾಮಕೃಷ್ಣ ಪರಮಹಂಸ ಆಶ್ರಮದ ಶಾರದೇಶಾನಂದ ಶ್ರೀಗಳು ಹೇಳಿದರು.

ನಗರದ ಪೇಟೆ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಹಿಂದೂ ಮಹಾ ಗಣಪತಿ ಸಮಿತಿಯಿಂದ ಗುರುವಾರ ಹಮ್ಮಿಕೊಂಡಿದ್ದ 6ನೇ ವರ್ಷದ ವಿನಾಯಕ ಮಹೋತ್ಸದ ಹಂದರಗಂಬ ಪೂಜಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಹಿಂದೂ ಮಹಾ ಗಣಪತಿ ಹೆಸರಿನಲ್ಲಿ ವಿನಾಯಕ ಮಹೋತ್ಸವ ಆಚರಣೆ ಮಾಡುವ ಮೂಲಕ ಸಮಾಜದ ಸಂಘಟನೆ ಮಾಡಲಾಗುತ್ತಿದ್ದು. ಇಂತಹ ಧಾರ್ಮಿಕ ಹಬ್ಬಗಳಿಗೆ



ಸಾರ್ವಜನಿಕರು ತನು, ಮನ ಮತ್ತು ಧನದ ಸಹಕಾರ ನೀಡಿದಾಗ ಯಶಸ್ವೀ ಕಾರ್ಯಕ್ರಮ ಜರುಗಲು ಸಾಧ್ಯ. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕೆಂದರು.

ಜಿ.ಪಂ. ಮಾಜಿ ಅಧ್ಯಕ್ಷ ಎಸ್.ಎಂ ವೀರೇಶ್, ದೂಡಾ ಮಾಜಿ ಅಧ್ಯಕ್ಷ ರಾಜನಹಳ್ಳಿ ಶಿವಕುಮಾರ್, ಬಿಜೆಪಿ ಮುಖಂಡ ಚಂದ್ರಶೇಖರ್ ಪೂಜಾರ್ ಮಾತನಾಡಿ, ಹಿಂದೂ ಜಾಗರಣ ವೇದಿಕೆ ಹಾಗೂ ಹಿಂದೂ ಮಹಾಗಣಪತಿ ಸಮಿತಿಯಿಂದ ವಿಜೃಂಭಣೆಯಿಂದ ಗಣೇಶ ಹಬ್ಬದ ಮಹೋತ್ಸವವನ್ನು ಆಚರಣೆ ಮಾಡುತ್ತಾ ಬರುತ್ತಿದ್ದು ಇದರಿಂದ ಹಿಂದೂಗಳ ಸಂಘಟನೆಗೆ ಸಹಕಾರಿಯಾಗಿದೆ ಎಂದು ಬಣ್ಣಿಸಿದರು.

ಬಿಜೆಪಿ ಮುಖಂಡರಾದ ಗಾಯತ್ರಿ ಸಿದ್ದೇಶ್ವರ ಮಾತನಾಡಿ, ಹರಿಹರದಲ್ಲಿ ನಡೆಯುವ ಹಿಂದೂ ಮಹಾಗಣಪತಿ ಮಹೋತ್ಸವ ಕಾರ್ಯಕ್ರಮ ರಾಜ್ಯದ ಗಮನ ಸೆಳೆಯುಂತಾಗಲಿ ಎಂದು ಶುಭ ಹಾರೈಸಿದರು.

ನಗರಸಭಾ ಸದಸ್ಯರಾದ ಎಂ.ಜಂಬಣ್ಣ, ಎಸ್.ಎಂ ವಸಂತ್, ಆಟೋ ಹನುಮಂತಪ್ಪ, ಅಶ್ವಿನಿ ಕೃಷ್ಣ ಮಾತನಾಡಿ, ಈ ಹಿಂದೆ ಗಣೇಶ ಹಬ್ಬದ ಶೋಭಾಯಾತ್ರೆಗಳನ್ನು ಬೇರೆ ಊರುಗಳಿಗೆ ಹೋಗಿ ನೋಡಬೇಕಾಗಿತ್ತು. ಆದರೆ ಈಗ ನಮ್ಮ ಊರಿನಲ್ಲಿ ಅದ್ಧೂರಿಯಾಗಿ ಗಣೇಶ ಹಬ್ಬ ಆಚರಣೆ ಮಾಡುತ್ತಿರುವುದು ಹರ್ಷವಾಗುತ್ತಿದೆ. ಈ ಆಚರಣೆಯು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ವಿಜೃಂಭಣೆಯಿಂದ ಆಗಲಿ ಎಂದು ಹಾರೈಸಿದರು.

ಉತ್ಸವ ಸಮಿತಿ ಅಧ್ಯಕ್ಷ ಸುರೇಶ್ ಪೈಲ್ವಾನ್ ಚಂದಾಪುರ್ ಮಾತನಾಡಿದರು.

ಗೋ ಪೂಜೆ, ಭಾರತ ಮಾತೆ ಪೂಜೆ ಹಾಗೂ ಹಂದರಗಂಬ ಪೂಜೆಯಲ್ಲಿ ಮಾಜಿ ಶಾಸಕ ಹೆಚ್.ಎಸ್ ಶಿವಶಂಕರ್, ಹಿಂದೂ ಮಹಾ ಗಣಪತಿ ಟ್ರಸ್ಟ್‌ನ ಗೌರವಾಧ್ಯಕ್ಷ ಶಶಿಕುಮಾರ್ ಮೆಹರ್ವಾಡೆ, ಅಧ್ಯಕ್ಷ ಬಸವನಗೌಡ್ರು, ಖಜಾಂಚಿ ರಟ್ಟಿಹಳ್ಳಿ ಮಂಜುನಾಥ್, ಕಾರ್ಯದರ್ಶಿ ಹೆಚ್. ದಿನೇಶ್, ಉಪಾಧ್ಯಕ್ಷ ಸ್ವಾತಿ ಹನುಮಂತ, ಸದಸ್ಯರಾದ ಕಾರ್ತಿಕ್, ಶಿವಕುಮಾರ್, ಚಂದ್ರಕಾಂತಗೌಡ, ಅಲಂಕಾರ ಸಮಿತಿಯ ಅಧ್ಯಕ್ಷ ನಾಗರಾಜ್ ರೋಖಡೆ, ರವಿಶಂಕರ್ ಗದ್ದಿಮಠ, ಸಂತೋಷ್ ಗುಡಿಮನಿ, ಪ್ರಸಾದ ಸಮಿತಿ ಅಧ್ಯಕ್ಷ ಪ್ರವೀಣ್ ಪವಾರ್, ಮಹಿಳ ಸಮಿತಿಯ ಅಧ್ಯಕ್ಷೆ ಪ್ರಮೀಳಾ ನಲ್ಲೂರು, ಮುಖಂಡರಾದ ಡಿ.ಜಿ ಶಿವಾನಂದಪ್ಪ, ಸಿ.ಎನ್ ಹುಲಿಗೇಶ್, ಜಿ,ನಂಜಪ್ಪ, ಎಸ್.ಕೃಷ್ಣಮೂರ್ತಿ ಶೆಟ್ಟಿ, ಬಾತಿ ಚಂದ್ರಶೇಖರ್, ಪ್ರಕಾಶ್ ವಡ್ನಾಳ್, ಅಜಿತ್ ಸಾವಂತ್, ಹಿಂಡಸಘಟ್ಟದ ಲಿಂಗರಾಜ್, ಮಂಜಾನಾಯ್ಕ್, ತುಳಜಪ್ಪ ಭೂತೆ, ಸುನೀಲ್ ಕುಮಾರ್, ರಮೇಶ್ ಮಾನೆ, ಪ್ರೀತಮ್ ಬಾಬು, ವಿನಾಯಕ ಆರಾಧ್ಯಮಠ, ಶ್ರೀನಿವಾಸ ಚಂದಾಪುರ್, ಗುತ್ತೂರು ಹಾಲಸ್ವಾಮಿ, ನಾಗಮಣಿ ಶಾಸ್ತ್ರೀ, ರೂಪಾ ಶಶಿಕಾಂತ್, ರಶ್ಮಿ ಮೆಹರ್ವಾಡೆ, ರೂಪಾ ಕಾಟ್ವೆ, ಸುಮನಾ ಖಮಿತ್ಕರ್, ಭರತ್ ಶೆಟ್ಟಿ, ಕಾರ್ತಿಕ ಟಿಕಾರೆ, ಎಮ್. ರಾಜು ಯು, ಶಿವು ಹಾಗು ಇತರರಿದ್ದರು.

# ರಸಗೊಬ್ಬರ ಅಭಾವಕ್ಕೆ ಕೇಂದ್ರದ ಬಿಜೆಪಿ ಸರ್ಕಾರ ಕಾರಣ: ದೇವರಾಜ್

**ಚಿಕ್ಕಮಗಳೂರು:** ಕೇಂದ್ರ ಸರಕಾರದ ಮಲತಾಯಿ ಧೋರಣೆಯಿಂದ ರಾಜ್ಯದಲ್ಲಿ ರಸಗೊಬ್ಬರ ಅಭಾವಕ್ಕೆ ಕಾರಣ, ರಾಜ್ಯ ಸರಕಾರದ ಮೇಲೆ ಬಿಜೆಪಿ ಮುಖಂಡರು ಗೂಬೆ ಕೂರಿಸುತ್ತಿರುವುದನ್ನು ಕಾಂಗ್ರೆಸ್ ಖಂಡಿಸುತ್ತದೆ ಎಂದು ಕೆಪಿಸಿಸಿ ವಕ್ತಾರ ಎಚ್.ಎಚ್. ದೇವರಾಜ್ ಹೇಳಿದರು.

ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯ ಸರಕಾರ ರಸಗೊಬ್ಬರ ವಿತರಣೆ ಮಾಡುತ್ತಿಲ್ಲ, ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆರೋಪಿಸುತ್ತ, ರಸಗೊಬ್ಬರದಲ್ಲಿ ರಾಜಕಾರಣ ಮಾಡುತ್ತಿದ್ದಾರೆ. ರಸಗೊಬ್ಬರ ಅಭಾವಕ್ಕೆ ಕಾರಣರು ಯಾರೆಂದು ಬಿಜೆಪಿ ಮುಖಂಡರು ಚರ್ಚೆಗೆ



ಬರಲಿ ಎಂದು ಸವಾಲು ಹಾಕಿದರು.

ಪಾರ್ಲಿಮೆಂಟ್ ಸದಸ್ಯರು ಕೇಂದ್ರ ಸಚಿವ ಜೆ.ಪಿ.ನಡ್ಡಾ ಅವರನ್ನು ಭೇಟಿ ಮಾಡಿದ್ದಾರೆ. 1.35 ಲಕ್ಷ ಟನ್ ರಸಗೊಬ್ಬರ 15 ದಿನಗಳ ಒಳಗೆ ರಾಜ್ಯಕ್ಕೆ ವಿತರಣೆ ಮಾಡುತ್ತೇವೆ ಎಂದು ಹೇಳಿದ್ದು, ಪಾರ್ಲಿಮೆಂಟ್ ಸದಸ್ಯರು ಕೇಂದ್ರ ಸರಕಾರವನ್ನು ಭೇಟಿ ಮಾಡಿದ ಕೂಡಲೇ ಹೇಗೆ ರಸಗೊಬ್ಬರ ಸರಬರಾಜಾಗುತ್ತದೆ ಎಂದು ಪ್ರಶ್ನಿಸಿದ ಅವರು, ಬಿಜೆಪಿ ನಾಯಕರು ಉತ್ತರಿಸಬೇಕು ಎಂದು ಹೇಳಿದರು.

ರಸಗೊಬ್ಬರ ರಾಜ್ಯ ಸರಕಾರದ ವ್ಯಾಪ್ತಿಗೆ ಬರುವುದಿಲ್ಲ, ಕೇಂದ್ರ ಸರಕಾರದ ನಿಯಂತ್ರಣದಲ್ಲಿದೆ. ಕೇಂದ್ರ ಸರಕಾರ ರೈತ ವಿರೋಧಿ ನೀತಿಯನ್ನು ಅನುಸರಿಸುತ್ತಿದ್ದು, ಸುಮ್ಮನೆ ಕಾಂಗ್ರೆಸ್ ಸರಕಾರದ ಮೇಲೆ ಆರೋಪ ಮಾಡುತ್ತಿದ್ದು, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಮಾನವ ಮತ್ತು ವನ್ಯಜೀವಿ ಸಂಘರ್ಷ ಹೆಚ್ಚಾಗಿದೆ. ಒಂದು ವಾರದಲ್ಲಿ ಕಾಡಾನೆ ದಾಳಿಗೆ ಇಬ್ಬರು ಬಲಿಯಾಗಿದ್ದಾರೆ. ಕಾಡಾನೆ ಹಾವಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಜನಪ್ರತಿನಿಧಿಗಳು, ಸಂಘ-ಸಂಸ್ಥೆಗಳ ಮುಖಂಡರು, ರೈತರು ಬೆಳೆಗಾರರು ಒಗ್ಗೂಡಿಸಿ ಸಭೆ ನಡೆಸಿ ಅವರಿಂದ ಸಲಹೆ ಸೂಚನೆಗಳನ್ನು ಪಡೆದು ಸರಕಾರದ ಮೇಲೆ ಒತ್ತಡ ಹೇರಬೇಕು ಎಂದ ಅವರು, ಸಂತ್ರಸ್ಥ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ನಿರಂತರ ಭಾರಿ ಮಳೆಯಾಗಿದ್ದು, ಅಪಾರ ಪ್ರಮಾಣದ ನಷ್ಟ ಸಂಭವಿಸಿದೆ. ನಷ್ಟ ಪರಿಹಾರವನ್ನು ನೀಡಬೇಕು. ಭಾರಿ ಪ್ರಮಾಣದಲ್ಲಿ ಬೀಸಿದ ಗಾಳಿಗೆ ಸಾವಿರಾರು ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ಕುಗ್ರಾಮಗಳು ಸೇರಿದಂತೆ ಬಹುತೇಕ ಗ್ರಾಮಗಳ ಜನರು ಕತ್ತಲೆಯಲ್ಲಿ ದಿನದೂಡುತ್ತಿದ್ದಾರೆ. ವಿದ್ಯುತ್ ಕಂಬ ದುರಸ್ಥಿಗೆ ಹೆಚ್ಚುವರಿ ಸಿಬ್ಬಂದಿ ನೇಮಿಸಿ ಶೀಘ್ರವೇ ದುರಸ್ಥಿ ಕಾರ್ಯ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡ ರಾಜೇಶ್, ಶ್ರೀನಿವಾಸ್, ಹಿರೇಮಗಳೂರು ರಾಮಚಂದ್ರ ಇದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**